ಸಂಪುಟ: ೦೭/ ಸಂಚಿಕೆ: ೧೧೩/ಮಂಗಳವಾರ ದಿನಾಂಕ : ೧೭-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 113/ TUESDAY Date : 17-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ನಮ್ಮ ಸಮೀಕ್ಷೆಗೂ ಕೇಂದ್ರದ ಸಮೀಕ್ಷೆಗೂ ವ್ಯತ್ಯಾಸವಿದೆ: ಮುಖ್ಯಮಂತ್ರಿ

ದಾವಣಗೆರೆ: ನಮ್ಮ ಸರ್ಕಾರದ ಮುಂಬರುವ ಸಾಮಾಜಿಕ-ಶೈಕ್ಷಣಿಕ ಮತ್ತು ಜಾತಿ ಸಮೀಕ್ಷೆಯು ಕೇಂದ್ರದ ಜಾತಿ ಗಣತಿಗಿಂತ ಸಂಪೂರ್ಣ ಭಿನ್ನವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಸ್ಪಷ್ಟಪಡಿಸಿದ್ದಾರೆ. ಅಲ್ಲದೆ ರಾಜ್ಯದ ಈ ಉಪಕ್ರಮವು ಸಾಮಾಜಿಕ ನ್ಯಾಯ ಒದಗಿಸುತ್ತದೆ ಎಂದು ಒತ್ತಿ ಹೇಳಿದ್ದಾರೆ.

ಕೇಂದ್ರ ಸರ್ಕಾರ 16ನೇ ಜನಗಣತಿಯೊಂದಿಗೆ ಜಾತಿ ಗಣತಿಯನ್ನು ಮಾರ್ಚ್ 1, 2027 ರಿಂದ ಆರಂಭಿಸುವುದಾಗಿ ಅಧಿಸೂಚನೆ ಹೊರಡಿಸಿದ ಬಗ್ಗೆ ವರದಿಗಾರ-ರಿಗೆ ಪ್ರತಿಕ್ರಿಯಿಸಿದ ಸಿಎಂ, ಕೇಂದ್ರ ಸರ್ಕಾರ ಜನಗಣತಿಯನ್ನು 2027 ರಿಂದ ಕೈಗೊಳ್ಳುತ್ತಿದ್ದು, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡುವುದಾಗಿ ಎಲ್ಲೂ ಹೇಳಿಲ್ಲ. ನಾವು ಮಾಡುತ್ತಿರುವುದು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ. ಅದರ ಜೊತೆ ಜಾತಿ ಗಣತಿಯೂ ಒಳಗೊಂಡಿದೆ ಎಂದು ಹೇಳಿದರು.

ಕೇಂದ್ರದ ಜನಗಣತಿಗೆ ಕರ್ನಾಟಕ ಸರ್ಕಾರದಿಂದ ಯಾವುದೇ ಆಕ್ಷೇಪಣೆ ಇಲ್ಲ ಎಂದು ಪುನರುಚ್ಚರಿಸಿದ ಸಿಎಂ, ರಾಜ್ಯದ ಸಮೀಕ್ಷೆಯ ವ್ಯಾಪ್ತಿ ಮತ್ತು ಉದ್ದೇಶವನ್ನು ಒತ್ತಿ ಹೇಳಿದರು.

ಸಾಮಾಜಿಕ ನ್ಯಾಯ ಒದಗಿಸಲು ಜನರ ಸಾಮಾಜಿಕ, ಆರ್ಥಿಕ ಪರಿಸ್ಥಿತಿ ತಿಳಿದಿರಬೇಕು. ಅದಕ್ಕಾಗಿ ಮರು ಸಮೀಕ್ಷೆ ಅಗತ್ಯವಿದೆ. ಕೇಂದ್ರ ಸರ್ಕಾರ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳುತ್ತಿಲ್ಲ ಎಂದರು. ಕೇಂದ್ರ ಸರ್ಕಾರ ಜನಗಣತಿ ಮಾಡುವುದಕ್ಕೆ ನಮ್ಮ ತಕರಾ-ರಿಲ್ಲ. ನಮ್ಮ ಸಮೀಕ್ಷೆಗೂ ಅವರ ಸಮೀಕ್ಷೆಗೂ ಸಾಮಾಜಿಕ ಶೈಕ್ಷಣಿಕ ಆರ್ಥಿಕ ಸಮೀಕ್ಷೆಯ ವ್ಯತ್ಯಾಸವಿದೆ ಎಂದು ತಿಳಿಸಿದರು.

ಹಿಂದುಳಿದ ಮತ್ತು ಅಂಚಿನಲ್ಲಿರುವ ಸಮುದಾಯಗಳಿಗೆ ಪರಿಣಾಮಕಾರಿ ಕಲ್ಯಾಣ ಕ್ರಮಗಳನ್ನು ತಿಳಿಸುವ ಡೇಟಾವನ್ನು ಸಂಗ್ರಹಿಸುವುದು ರಾಜ್ಯ ಸಮೀಕ್ಷೆಯ ಪ್ರಮುಖ ಉದ್ದೇಶವಾಗಿದೆ. ವರದಿಯ ಕುರಿತು ಪ್ರಬಲರು ಹಾಗೂ ದುರ್ಬಲರು ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ. ಎಲ್ಲಕ್ಕಿಂತ ಮುಖ್ಯವಾಗಿ ಹಿಂದುಳಿದ ವರ್ಗಗಳ ಕಾಯ್ದೆಯ ಸೆಕ್ಷನ್ 11 (1 ) ರ ಪ್ರಕಾರ ವರದಿಗೆ ಹತ್ತು ವರ್ಷಗಳಾದ ಮೇಲೆ ಮರು ಸಮೀಕ್ಷೆಯಾಗಬೇಕು ಎಂದು ತಿಳಿಸಲಾಗಿದೆ. ಅದಕ್ಕಾಗಿ ಜಾತಿ ಗಣತಿ



ಮರು ಸಮೀಕ್ಷೆ ಕೈಗೊಳ್ಳಲಾಗಿದೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸಮೀಕ್ಷಾ ಕಾರ್ಯ ಆರಂಭಿಸುವಂತೆ ಈಗಾಗಲೇ ಸೂಚನೆ ನೀಡಿದ್ದೇವೆ ಎಂದು ಸಿಎಂ ತಿಳಿಸಿದರು.

## ಇಸ್ರೇಲ್ ದಾಳಿಗೆ ಇರಾನ್‌ನಲ್ಲಿ ಕನಿಷ್ಠ 406 ಜನ ಸಾವು

ದುಬೈ, : ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ತೀವ್ರ ಸ್ವರೂಪ ಪಡೆದಿದ್ದು ಇಸ್ರೇಲ್ ನಡೆಸಿದ ಕ್ಷಿಪಣಿಗಳ ದಾಳಿಗೆ ಇರಾನ್‌ನಲ್ಲಿ ಕನಿಷ್ಠ ಪಕ್ಷ 406 ಜನರು ಮೃತಪಟ್ಟು 654 ಮಂದಿ ಗಾಯಗೊಂಡಿದ್ದಾರೆ ಎಂದು ಸುದ್ದಿ ಸಂಸ್ಥೆಗಳು ವರದಿ ಮಾಡಿವೆ. ಇರಾನ್‌ನ ಪರಮಾಣು ಯೋಜನೆಯ ತಾಣಗಳನ್ನು ಗುರಿಯಾಗಿಸಿ ಇಸ್ರೇಲ್ ದಾಳಿ ನಡೆಸಿದ್ದು ಹಲವರು ಪರಮಾಣು ವಿಜ್ಞಾನಿಗಳು ಬಲಿಯಾಗಿದ್ದರು.

ಇರಾನ್‌ನ ರಾಜಧಾನಿ ತೆಹರಾನ್‌ನಲ್ಲಿ ನಿನ್ನೆ ಮಧ್ಯಾಹ್ನ 3.30ಕ್ಕೆ ಸ್ಫೋಟಗಳು ಸಂಭವಿಸಿ ಇಡೀ ನಗರವನ್ನು ನಡುಗಿಸಿದವು. ಇಸ್ರೇಲ್‌ನಲ್ಲಿ ಸಂಜೆ 4 ಗಂಟೆಗೆ ಮತ್ತು ರಾತ್ರಿ ಸುಮಾರು 8.30ಕ್ಕೆ ಯುದ್ಧ ಸೈರನ್‌ಗಳು ಮೊಳಗಿದವು. ಉತ್ತರ ಭಾಗದಲ್ಲಿ ಹೈಫಾ ಸೇರಿದಂತೆ ಹಲವಾರು ದಾಳಿಯ ಸ್ಥಳಗಳನ್ನು ಇಸ್ರೇಲ್ ಸೇನೆ ಗುರುತಿಸಿತು.

ಇಲ್ಲಿಯವರೆಗೆ ದೇಶದಲ್ಲಿ ಇರಾನ್ ದಾಳಿಗೆ 14 ಜನರು ಸತ್ತಿದ್ದು, 390 ಮಂದಿ ಗಾಯಗೊಂಡಿದ್ದಾರೆ. ಇರಾನ್ 270 ಕ್ಷಿಪಣಿಗಳನ್ನು ಉಡಾಯಿಸಿದ್ದು ಅವುಗಳಲ್ಲಿ 22 ದೇಶದ ಸೂಕ್ಷ್ಮ ಬಹು ಹಂತದ ವಾಯು ನೆಲೆಗಳನ್ನು ಗುರಿಯಾಗಿಸಿದ್ದವು ಎಂದು ಇಸ್ರೇಲ್ ಹೇಳಿದೆ.

ಸತತ ಮೂರನೇ ದಿನವೂ ಇಸ್ರೇಲ್‌ನ ಪ್ರಮುಖ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಬಂದ್ ಮಾಡಲಾಗಿದೆ. ಇರಾನ್ ಮೇಲೆ ಇಸ್ರೇಲ್ ದಾಳಿ ನಿಲ್ಲದಿದ್ದರೆ ನಮ ಪ್ರತಿಕ್ರಿಯೆಯೂ ನಿಲ್ಲುವುದಿಲ್ಲ ಎಂದು ಇರಾನ್‌ನ ವಿದೇಶಾಂಗ ವ್ಯವಹಾರಗಳ ಸಚಿವ ಅಬ್ಬಾಸ್ ಅರಾಘ್ಚಿ ಅವರು ಎಚ್ಚರಿಸಿದ್ದಾರೆ.

ಅಮೆರಿಕವು ಇಸ್ರೇಲ್‌ಗೆ ಬೆಂಬಲ ನೀಡುತ್ತಿರುವುದನ್ನು ಟೀಕಿಸಿರುವ ಇರಾನ್‌ನ ಅಧ್ಯಕ್ಷ ಮಸಾದ್ ಫೆಝೆಶ್ಕಿಯನ್ ಅವರು ಒಂದು ವೇಳೆ ಇರಾನ್‌ನ ಹಗೆತನದ ಕ್ರಮಗಳು ಮುಂದುವರಿದರೆ ನಮ ಪ್ರತಿಕ್ರಿಯೆಗಳು ಹೆಚ್ಚು ನಿರ್ಧಾರಕ ಮತ್ತು ತೀವ್ರವಾಗಲಿದೆ ಎಂದು ಹೇಳಿರುವುದಾಗಿ ಸರ್ಕಾರಿ ಸ್ವಾಮ್ಯದ ಟಿವಿ ವರದಿ ಮಾಡಿದೆ. ಈ ದಾಳಿ ಕುರಿತು ಅಮೆರಿಕ ಮಾಡುವಂಥಾದ್ದೇನಿಲ್ಲ. ಹೊಸ ಪರಮಾಣು ಒಪ್ಪಂದ ಮಾಡಿಕೊಳ್ಳುವ ಮೂಲಕ ಇರಾನ್ ಮತ್ತಷ್ಟು ವಿಧ್ವಂಸ ತಡೆಗಟ್ಟಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್?ಡ ಟ್ರಂಪ್ ಹೇಳಿದ್ದಾರೆ.

ತೆಹರಾನ್‌ನ ಉತ್ತರಕ್ಕಿರುವ ವಿದೇಶಾಂಗ ಸಚಿವಾಲಯದ ಕಟ್ಟಡವೊಂದನ್ನು ಇಸ್ರೇಲ್ ಹೊಡೆದುರುಳಿಸಿದೆ. ಹಲವಾರು ಮಂದಿ ಗಾಯಗೊಂಡಿದ್ದಾರೆ. ನನ್ನ ಸಹೋದ್ಯೋಗಿಗಳೂ ಗಾಯಾಳುಗಳಾಗಿದ್ದಾರೆ ಎಂದು ಇರಾನ್‌ನ ಉಪ ವಿದೇಶಾಂಗ ಸಚಿವ ಸಯಿಂದ್ ಖತಿಬರ್‌ಜಡೇಹ್ ಅವರು ವಿವರಿಸಿದ್ದಾರೆ. ಇರಾನ್‌ನ ರಕ್ಷಣಾ ಸಚಿವಾಲಯವನ್ನೂ ಗುರಿಯಾಗಿಸಿ ಇಸ್ರೇಲ್ ದಾಳಿ ನಡೆಸಿದೆ. ದಾಳಿ ನಡೆದ ಸ್ಥಳಗಳಲ್ಲಿ ರಕ್ತಸಿಕ್ತ ಜನರು ಓಡುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಕೆಲವರು ಮಸೀದಿಗಳಲ್ಲಿ ಆಶ್ರಯ ಪಡೆದರು.

ಇಂಧನ ಮರುಪೂರಣ ವಿಮಾನವೊಂದನ್ನು ಹೊಡೆದುರುಳಿಸಿರುವುದಾಗಿ ಮತ್ತು ಇದು ತಾನು ನಡೆಸಿದ ಅತ್ಯಂತ ದೂರದ ದಾಳಿ ಎಂಬುದಾಗಿ ಇಸ್ರೇಲ್ ಹೇಳಿಕೊಂಡಿದೆ. ನಗರದಾದ್ಯಂತ ಹೊಗೆಯ ಮೋಡ ಎದ್ದಿರುವ ವಿಡಿಯೋಗಳು ಬಿತ್ತರಗೊಂಡಿವೆ. ಇಸ್ರೇಲ್‌ನಲ್ಲಿ 10 ವರ್ಷ ಮತ್ತು 9 ವರ್ಷ ವಯಸ್ಸಿನ ಇಬ್ಬರು ಮಕ್ಕಳು ಸೇರಿದಂತೆ ಕನಿಷ್ಠ ಆರು ಮಂದಿ ಇರಾನ್ ದಾಳಿಗೆ ಬಲಿಯಾಗಿದ್ದಾರೆ. ಟೆಲ್ ಅವೀವ್ ಸಮೀಪದ ಬತ್‌ಯಾಮ್‌ನಲ್ಲಿನ ವಸತಿ ಕಟ್ಟಡವೊಂದರ ಮೇಲೆ ಇರಾನ್ ಕ್ಷಿಪಣಿ ಬಿದ್ದು ಸಾವು-ನೋವು ಉಂಟಾಯಿತು. ಸ್ಥಳೀಯ ಪೊಲೀಸ್ ಕಮಾಂಡರ್ ಡೇನಿಯಲ್ ಹದಾದ್ ಅವರು 180 ಜನರು ಗಾಯಗೊಂಡಿರುವುದಾಗಿ ತಿಳಿಸಿದರು.

ಉತ್ತರ ಇಸ್ರೇಲ್‌ನ ಅರಬ್ ಪಟ್ಟಣ ತಮ್ರಾದಲ್ಲಿ ಕಟ್ಟಡವೊಂದರ ಮೇಲೆ ನಡೆದ ಕ್ಷಿಪಣಿ ದಾಳಿಯಲ್ಲಿ 13 ವರ್ಷದ ಬಾಲಕ ಸೇರಿ ನಾಲ್ಕು ಮಂದಿ ಬಲಿಯಾಗಿ 24 ಜನರು ಗಾಯಗೊಂಡರು.

ಇಸ್ರೇಲ್‌ನ ನಗರ ಹೈಫಾದಲ್ಲಿನ ತೈಲ ಸಂಸ್ಕರಣಾಗಾರವೊಂದು ಹಾನಿಗೊಳಗಾಗಿದೆ. ಸಾವು-ನೋವು ಸಂಭವಿಸಿಲ್ಲ. ಈ ಸಂಘರ್ಷದ ಪರಿಣಾಮವಾಗಿ ಇರಾನ್‌ನಲ್ಲಿ ಆಡಳಿತ ಬದಲಾಗಬಹುದು ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

## ಪ್ರವಾಹದಿಂದ ಹಾನಿಗೀಡಾದ ಪ್ರದೇಶ ವೀಕ್ಷಿಸಿದ ಸಚಿವ ಎಚ್ ಕೆ ಪಾಟೀಲ



ಗದಗ : ಬೆಣ್ಣೆಹಳ್ಳ ಪ್ರವಾಹದಿಂದ ಹಾನಿಗೀಡಾದ ನರಗುಂದ ಹಾಗೂ ರೋಣ ಭಾಗದ ಹಳ್ಳಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ ಭಾನುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನರಗುಂದ ತಾಲೂಕಿನ ಕುರ್ಲಗೇರಿ ಗ್ರಾಮದಲ್ಲಿ ಬೆಳೆಹಾನಿ ಸಮೀಕ್ಷೆ ನಡೆಸಿದ ಜನಪ್ರತಿನಿಧಿಗಳು ವಿವಿಧ ಬಿತ್ತನೆ ಕ್ಷೇತ್ರಗಳ ಹಾನಿಗೀಡಾದ ಬಗ್ಗೆ ಪರಿಹಾರ ಒದಗಿಸುವುದಾಗಿ ಭರವಸೆ ನೀಡಿದರು. ಕುರ್ಲಗೇರಿ ಗ್ರಾಮದ ಮೇಲ್ಸೇತುವೆ ಕೆಲಭಾಗಗಳಲ್ಲಿ ಗಿಡಗಂಟಿಗಳನ್ನು ತುರ್ತು ತೆರವುಗೊಳಿಸಲು ಸಚಿವ ಎಚ್.ಕೆ. ಪಾಟೀಲ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕುರ್ಲಗೇರಿ ಗ್ರಾಮದ ಸ್ಥಳಾಂತರ ಗ್ರಾಮದಲ್ಲಿ ಮೂಲಭೂತ ಸೌಕರ್ಯ ಇಲ್ಲದ ಕುರಿತು, ಮನೆಗಳ ಸಮರ್ಪಕ ಹಂಚಿಕೆ ಆಗದ ಕುರಿತು ಸಚಿವರಲ್ಲಿ ಸಾರ್ವಜನಿಕರು ತಮ್ಮ ಅಳಲು ತೋಡಿಕೊಂಡರು ಮತ್ತು ಹೊಲಗಳಲ್ಲಿ ಒಡ್ಡು ಒಡೆದ ಕು-ರಿತು ಸಚಿವರ ಗಮನಕ್ಕೆ ತಂದರು.

ಈ ವೇಳೆ ಸಚಿವ ಎಚ್ ಕೆ ಪಾಟೀಲ ಮಾತನಾಡಿ, ಕುರ್ಲಗೇರಿ ನೂತನ ಗ್ರಾಮಕ್ಕೆ ಜನರು ಸ್ಥಳಾಂತರ ಗೊಂಡಿಲ್ಲ. ಈ ಹಿನ್ನೆಲೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮನೆ ಅಗತ್ಯವಿರುವರ ಪಟ್ಟಿ ಸಿದ್ದಪಡಿಸಿ ಅವರಿಗೆ ಮನೆ ಹಂಚಲು ಸೂಚಿಸಿದ್ದೇನೆ ಎಂದು ತಿಳಿಸಿದರು. ಗ್ರಾಮದಲ್ಲಿ ನೀರಿನ ಹರಿವಿನಿಂದ ಒಡ್ಡು ಒಡೆದು ಹೋದು ಕುರಿತು ಸಚಿವ ಶಾಸಕರಲ್ಲಿ ಜನರು ನೋವು ತೋಡಿಕೊಂಡರು. ಒಡ್ಡು ಹಾಕಿಸಿಕೊಡುವುದಾಗಿ ಶಾಸಕ ಸಿ.ಸಿ. ಪಾಟೀಲ, ಸಚಿವ ಎಚ್.ಕೆ. ಪಾಟೀಲ ಭರವಸೆ ನೀಡಿದರು.

ಹದಲಿ, ಯಾವಗಲ್, ಸುರಕೋಡ ಗ್ರಾಮಗಳಿಗೆ ಭೇಟಿ ನೀಡಿ ಬೆಣ್ಣೆಹಳ್ಳದ ಪ್ರವಾಹದಿಂದ ಹಾನಿ ಪರಿಶೀಲನೆ ನಡೆಸಿದರು.

ಕಳೆದ ಬಾರಿ ಬೆಣ್ಣೆಹಳ್ಳದ ಪ್ರವಾಹದಿಂದ ಬೆಳೆಹಾನಿ ರೈತ-ರಿಗೆ ಸರ್ಕಾರ ಘೋಷಿಸಿದ್ದ ಮಧ್ಯಂತರ ಬೆಳೆ ಪರಿಹಾರ ರೈತರ ಖಾತೆ ಇನ್ನೂ ಬಾರದ ಕುರಿತು ರೈತರು ಅಳಲು ತೋಡಿಕೊಂಡರು. ಕಳೆದ ಬಾರಿ ಮಧ್ಯಂತರ ಬೆಳೆ ಪರಿಹಾರ ಮತ್ತು ಪ್ರಸಕ್ತ ಸಾಲಿನ ಬೆಳೆಹಾನಿ ಕ್ಷೇತ್ರವನ್ನು ತುರ್ತು ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಎಸ್ ನೇಮಗೌಡ, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ ಸೇ-ರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿಗಳು ಹಾಗೂ ಸಿದ್ದು ಪಾಟೀಲ, ರಾಜಗೌಡ ಸೇ-ರಿದಂತೆ ಇತರರು ಉಪಸ್ಥಿತರಿದ್ದರು

****

## ಆರೋಗ್ಯ ಇಲಾಖೆಯಲ್ಲಿ ಪಾರದರ್ಶಕ ವ್ಯವಸ್ಥೆ ಜಾರಿಗೆ ಸರ್ಕಾರ ಮುಂದು: ಜುಲೈ 1ರಿಂದ ಮೊಬೈಲ್ ಹಾಜರಾತಿ ಕಡ್ಡಾಯ!



ಬೆಂಗಳೂರು: ಆರೋಗ್ಯ ಇಲಾಖೆಯಲ್ಲಿ ಪಾರದರ್ಶಕ ವ್ಯವಸ್ಥೆ ಜಾರಿಗೆ ತರಲು ರಾಜ್ಯ ಸರ್ಕಾರ ಮುಂದಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಸೇ-ರಿದಂತೆ ಸಿಬ್ಬಂದಿಗಳಿಗೆ ಮೊಬೈಲ್ ಹಾಜರಾತಿಯನ್ನು ಕಡ್ಡಾಯಗೊಳಿಸಿದೆ.

ಈ ಸಂಬಂಧ ಆರೋಗ್ಯ ಇಲಾಖೆ ಆದೇಶ ಹೊರಡಿಸಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಬಳಸಲ್ಪಡುತ್ತಿರುವ ಹಾಜರಾತಿ ನಿರ್ವಹಣಾ ವ್ಯವಸ್ಥೆಯು ಮೀಸಲಾದ ಹಾರ್ಡ್‌ವೇರ್ ಸಾಧನಗಳ ಮೂಲಕ ಆಧ-ಾರ್ ಆಧಾರಿತ ಬಯೋಮೆಟ್ರಿಕ್ ಪ್ರಮಾಣೀಕರಣವನ್ನು ಅವಲಂಭಿಸಿದೆ. ಹಾರ್ಡ್‌ವೇರ್ ಸಾಧನಗಳಿಗೆ ಆಗಾಗ್ಗೆ ನಿರ್ವಹಣೆ, ದುರಸ್ತಿ ಮತ್ತು ಆವರ್ತಕ ಬದಲಾವಣೆಗಳ ಅಗತ್ಯವಿದ್ದು, ಇದು ಇಲಾಖೆಗೆ ಗಣನೀಯ ಪುನರಾವರ್ತಿತ ವೆಚ್ಚಗಳಿಗೆ ಕಾರಣವಾಗಿದೆ.

ಬಯೋಮೆಟ್ರಿಕ್ ಸಾಧನಗಳ ಸ್ಥಿರ ಸ್ವರೂಪದಿಂದಾಗಿ ಹಾಜರಾತಿ ಗುರುತಿಸುವಿಕೆಯನ್ನು ನಿರ್ದಿಷ್ಟ ಸ್ಥಳಗಳಿಗೆ ಸೀಮಿತಗೊಳಿಸಿದೆ. ಕ್ಷೇತ್ರ ಸಿಬ್ಬಂದಿ ಮತ್ತು ದೂರದ ಪ್ರದೇಶಗಳಲ್ಲಿ ಕೆಲಸ ಮಾಡುವವರಿಗೆ ಅಸಮರ್ಥತೆಗಳನ್ನು ಸೃಷ್ಟಿಸುತ್ತದೆ. ಈ ವ್ಯವಸ್ಥೆಯ ಸೀಮಿತ ವಿಸ್ತರಣೆ, ಅಂದರೆ ಹೊಸ ಸೌಲಭ್ಯಗಳಿಗೆ ವಿಸ್ತರಿಸಲು ಹಾರ್ಡ್‌ವೇರ್ ಹೂಡಿಕೆಗಳು ಮತ್ತು ಭೌತಿ-ಕ ಸ್ಥಾಪನಾ ಪ್ರಕ್ರಿಯೆಗಳ ಅಗತ್ಯವಿದೆ. ಇದಲ್ಲದೆ, ಹಾರ್ಡ್‌ವೇರ್ ವೈಫಲ್ಯಗಳು ಮತ್ತು ಸಂಪರ್ಕ ಸಮಸ್ಯೆಗಳು ಆಗಾಗ್ಗೆ ವ್ಯವಸ್ಥೆಯ ಡೌನ್‌ಟೈಮ್‌ಗೆ ಕಾರಣವಾಗುತ್ತದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ, 2025-26ನೇ ಸಾಲಿನ ಬಜೆಟ್ ಭಾಷಣದ ಕಂಡಿಕೆ-152(ಖ)ರಲ್ಲಿ "ಮೊಬೈಲ್ ತಂತ್ರಾಂಶದ ಮೂಲಕ ಹಾಜರಾತಿ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು" ಎಂದು ಘೋಷಿಸಲಾಗಿದೆ. ಅದರಂತೆ ಕರ್ನಾಟಕದ ಎಲ್ಲಾ 12000 ಆರೋಗ್ಯ ಸಂಸ್ಥೆಗಳನ್ನು ಒಳಗೊಂಡು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಾದ್ಯಂತ ಕರ್ನಾಟಕ ಹಾಜರಾತಿ ನಿರ್ವಹಣಾ ವ್ಯವಸ್ಥೆ (ಏಂಒಖ) ಅನುಷ್ಠಾನಗೊಳಿಸುವುದನ್ನು ಪ್ರಸ್ತಾಪಿಸಲಾಗಿದ್ದು, ವ್ಯವಸ್ಥೆಯು ಆಧಾರ್ ಆಧಾರಿತ ಮುಖ ಪಮಾಣೀಕರಣ, ಭೌಗೋಳಿಕ ನಿರ್ದಿಷ್ಟಾಂಕಗಳೊಳಗೆ ಕ್ಷೇತ್ರದಲ್ಲಿ ಹಾಜರಾತಿ ಗುರುತಿಸಲು ಸೌಲಭ್ಯವನ್ನು ನೀಡುತ್ತದೆ.

## ರಾಜ್ಯದಲ್ಲಿ ವರುಣನ ಆರ್ಭಟ : ಈ ಜಿಲ್ಲೆಗಳಲ್ಲಿ ಶಾಲಾಗಳಿಗೆ ರಜೆ ಘೋಷಣೆ

ಬೆಂಗಳೂರು, : ರಾಜ್ಯದ ವಿವಿಧೆಡೆ ವರುಣನ ಆರ್ಭಟ ಮುಂದುವರೆದಿದ್ದು, ಭಾರೀ ಅವಾಂತರವನ್ನೇ ಸೃಷ್ಟಿಸಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಚಿಕ್ಕಮಗಳೂರು, ಮಡಿಕೇರಿ, ಮಂಗೂಳೂರು, ಉಡುಪಿ ಸೇರಿದಂತೆ ವಿವಿಧ ಜಿಲ್ಲೆಗಳ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಮಳೆ ನಿರಂತರವಾಗಿ ಸು-ರಿಯುತ್ತಿದ್ದು, ಮಲೆನಾಡು ಭಾಗದಲ್ಲಿ ಭೂ ಕುಸಿತ ಉಂಟಾಗಿ ಹಲವೆಡೆ ಸಂಪರ್ಕ ಕಡಿತಗೊಂಡಿದೆ. ಹಳ್ಳಕೊಳ್ಳಗಳು ಅಪಾಯದ ಮಟ್ಟ ಮೀರಿ ಹ-ರಿಯುತ್ತಿದೆ.

ಭಟ್ಕಳ ತಾಲ್ಲೂಕಿನ ಜಾಲಿ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಮನೆಯ ಮುಂದೆ ಆಟವಾಡುತ್ತಿದ್ದ ಎರಡು ವರ್ಷದ ಮಗು ಹಳ್ಳಕ್ಕೆ ಬಿದ್ದು ಮೃತಪಟ್ಟಿದೆ. ಅದೇ ರೀತಿ ತಾಲ್ಲೂಕಿನ ಬೆಳಲತಂಡದ ಮಾದೇವ ನಾರಾಯಣ ಎಂಬ ವ್ಯಕ್ತಿ ನೀರಿನಲ್ಲಿ ಕೊಚ್ಚಿ ಹೋಗಿದ್ದಾರೆ. ಉಡುಪಿ ಜಿಲ್ಲೆಯ ಉದ್ಯಾವರ ನಿವಾಸಿ ರೊನಾಲ್?ಡ ಫರ್ನಾಂಡೀಶ್ ಗುಂಡಿಗೆ ಬಿದ್ದು ಮೃತಪಟ್ಟಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಶಿರಸಿಯ ದೇವಿಮನೆ ಬಳಿ ಭೂ ಕುಸಿತ ಉಂಟಾಗಿ ಸಂಚಾರ ಅಸ್ತವ್ಯಸ್ತಗೊಂಡು ಸವಾರರು ಪರದಾಡುವಂತಾಯಿತು.

ಕಾಫಿನಾಡು ಚಿಕ್ಕಮಗಳೂರಿನಾದ್ಯಂತ ಮಳೆಯ ಆರ್ಭಟ ಜೋರಾಗಿದ್ದು, ಶೃಂಗೇರಿಯ ಸಾಲುಮರದಲ್ಲಿ ಗುಡ್ಡ ಕುಸಿತವಾಗಿ ಮಂಗಳೂರು-ಶಂಗೇರಿ ಮಾರ್ಗ ಬಂದ್ ಆಗಿದೆ. ಮಂಗಳೂರಿನ ಹೊರವಲಯದ ವಾಮಂಜೂರಿನ ಕೆತಿಕಲ್‌ನಲ್ಲಿ ಗುಡ್ಡ ಕುಸಿದಿದೆ. ಧರ್ಮಸ್ಥಳದ ನೇತ್ರಾವತಿ ಸ್ನಾನಘಟ್ಟದಲ್ಲಿ ನೀರಿನ ಹರಿವು ಹೆಚ್ಚಳವಾಗಿದೆ. ಕುಕ್ಕೆ ಸುಬ್ರಹ್ಮಣ್ಯದ ಕುಮಾರಧ್ವಾರ ನದಿ ಉಕ್ಕಿ ಹರಿಯುತ್ತಿದೆ.

ಬೆಳಗಾವಿ ಜಿಲ್ಲೆಯ ಖಾನಾಪುರ ಬಳಿ ಸೇತುವೆ ಕುಸಿತಗೊಂಡಿದ್ದು, ಬೆಳಗಾವಿ-ಗೋವಾ ಸಂಪರ್ಕ ಕಡಿತಗೊಂಡಿದೆ.

**ಎಲ್ಲೆಲ್ಲಿ ರಜೆ?:** ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದ್ದು, ಅಂಗನವಾಡಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟರಾಜ್ ತಿಳಿಸಿದ್ದಾರೆ. ಮಂಗಳೂರಿನ ಉಲ್ಲಾಳ, ಭಂಟ್ವಾಳ, ಮುಲ್ಕಿ, ಮೂಡಬಿದರೆ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಲ್ಲೈಮುಗಿಲನ್ ತಿಳಿಸಿದ್ದಾರೆ. ಉಡುಪಿ ಜಿಲ್ಲೆಯಲ್ಲೂ ಸಹ ಭಾರೀ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ರಜೆ ಘೋಷಿಸಲಾಗಿದೆ.

**ರೆಡ್ ಅಲರ್ಟ್:** ಕರಾವಳಿ ಭಾಗದ ಉತ್ತರಕನ್ನಡ, ಉಡುಪಿ, ದಕ್ಷಿಣಕನ್ನಡ ಜಿಲ್ಲೆಗಳಿಗೆ ಇಂದಿನಿಂದ 18ರವರೆಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಹಾಸನ, ಕೊಡುಗು, ಬೆಳಗಾವಿ, ಧಾರವಾಡ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಿದ್ದರೆ ತುಮಕೂರು, ಶಿವಮೊಗ್ಗ , ವಿಜಯನಗರ, ಬಳ್ಳಾರಿ, ಕೊಪ್ಪಳ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಯಲ್ಲೊ ಅಲರ್ಟ್ ಘೋಷಣೆ ಮಾಡಲಾಗಿದೆ.

ಉಳಿದ ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣವಿದ್ದು, ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾ ಇಲಾಖೆ ಮುನ್ಸೂಚನೆ ನೀಡಿದೆ.

## ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಶಿಕ್ಷಣ- ಆರೋಗ್ಯಕ್ಕೆ ಮೊದಲ ಆದ್ಯತೆ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ಸಾಮಾಜಿಕ ಬದ್ಧತೆಯನ್ನು ಬೆಳೆಸಿಕೊಳ್ಳಲು ಕರೆ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಿರುವೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣದ ಜೊತೆಗೆ ಸಾಮಾಜಿಕ ಬದ್ಧತೆಯನ್ನು ಬೆಳೆಸಿಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

2024-25ನೇ ಸಾಲಿನ ಎಸ್‌ಎಸ್-ಎಲ್ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇಕಡಾ 80ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಬೆಳಗಾವಿ ಗ್ರಾಮೀಣ ಮತಕ್ಷೇತ್ರದ 600ಕ್ಕೂ ಅಧಿಕ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಾತನಾಡಿದ ಸಚಿವರು, ಶಿಕ್ಷಣಕ್ಕೆ ಬಡತನ ಎಂದಿಗೂ ಅಡ್ಡಿಯಾಗುವುದಿಲ್ಲ. ಎಲ್ಲರೂ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಕರೆ ನೀಡಿದರು.

ಸಮಾಜಕ್ಕೆ ಏನಾದರೂ ಒಳ್ಳೆಯ ಕೆಲಸಗಳನ್ನು ಮಾಡಬೇಕು ಎಂಬ ಉದ್ದೇಶದಿಂದ ನಾನು ರಾಜಕೀಯಕ್ಕೆ ಬಂದೆ. ಬೆಳಗಾವಿ ಗ್ರಾಮೀಣ ಕ್ಷೇತ್ರದಿಂದ ಆಯ್ಕೆಯಾದ ಬಳಿಕ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಿದೆ. ಒಬ್ಬ ಗುಮಾಸ್ತನಾಗಲಿ ಅಥವಾ ಈ ದೇಶದ ರಾಷ್ಟ್ರಪತಿಯೇ ಆಗಲಿ, ಅವರು ಕನಸು ಕಾಣುವುದು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗಲಿ ಎಂದು. ಮಕ್ಕಳು ಶಾಲೆಯಲ್ಲಿ ಚೆನ್ನಾಗಿ ಓದಬೇಕು, ಅವರ ಕಷ್ಟ ಕಾರ್ಪಣ್ಯಗಳು ತನ್ನ ಮಕ್ಕಳಿಗೆ ಬರಬಾರದು ಎಂಬುದೇ ಪಾಲಕರ ಆಶಯವಾಗಿರುತ್ತದೆ ಎಂದು ಸಚಿವರು ಹೇಳಿದರು.

ತಂದೆ-ತಾಯಿ ಆಸ್ತಿ ಏನೆಂದು ಕೇಳಿದರೆ, ನಮ್ಮ ಮಕ್ಕಳು ಎನ್ನುತ್ತಾರೆ. ಅಪ್ಪ ಅಮ್ಮನ ಪಾಲಿಗೆ ಮಕ್ಕಳೇ ಆಸ್ತಿಯಾಗಿರುತ್ತಾರೆ. ಅದೇ ರೀತಿ ಮಕ್ಕಳು ಕೂಡ ಅಪ್ಪ ಅಮ್ಮನೇ ನಮ್ಮ ಆಸ್ತಿ ಎಂದು ಹೇಳುವಂತಾಗಬೇಕು. ಅಮ್ಮ, ಅಪ್ಪನ ಕನಸನ್ನು ಮಕ್ಕಳು ನನಸು ಮಾಡಬೇಕು. ಬೆಳಗಾವಿ ಗ್ರಾಮೀಣ ಕ್ಷೇತ್ರದ ಮಕ್ಕಳು ಇಡೀ ಕರ್ನಾಟಕ ರಾಜ್ಯದಲ್ಲಿ ಉತ್ತಮ ಹೆಸರು ಮಾಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ರಾಜಕಾರಣದಲ್ಲೂ ಒಳ್ಳೆಯದು ಕೆಟ್ಟದ್ದು ಇರುತ್ತದೆ. ನಾನು ಸದಾ ಕ್ಷೇತ್ರದ ಬಗ್ಗೆ ಹೆಚ್ಚು ಚಿಂತನೆ ಮಾಡುತ್ತೇನೆ. ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಸುವರ್ಣ ವಿಧಾನಸೌಧ, ವಿಮಾನ ನಿಲ್ದಾಣ, ವಿಟಿಯು ಇದ್ದರೂ ಅತ್ಯಂತ ಹಿಂದುಳಿದ ಕ್ಷೇತ್ರ ಎಂಬ ಹಣೆಪಟ್ಟಿಯನ್ನು ಹೊಂದಿದೆ. ಆದರೀಗ ಪರಿಸ್ಥಿತಿ ಬದಲಾಗಿದ್ದು, ಕ್ಷೇತ್ರ ಸಂಪೂರ್ಣ ಪ್ರಗತಿಯತ್ತ ಸಾಗುತ್ತಿದೆ ಎಂದು ಸಚಿವರು ಹೇಳಿದರು.

**ಶೀಘ್ರವೇ ಸ್ಮಾರ್ಟ್ ಕ್ಲಾಸ್ ತರಗತಿಗಳು ಆರಂಭ :** ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಕಳೆದ 7 ವರ್ಷಗಳಿಂದ ಶೈಕ್ಷಣಿಕ ಮೂಲಸೌಲಭ್ಯಗಳನ್ನು ಕಲ್ಪಿಸಲು ನಾನು ಸಾಕಷ್ಟು ಶ್ರಮವಹಿಸುತ್ತಿದ್ದೇನೆ. ಯಾವುದೇ ಶಾಲೆಗೆ ಕೊಠಡಿ ಸಮಸ್ಯೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ. ನೂರಾರು ಕೊಠಡಿಗಳನ್ನು ನಿರ್ಮಾಣ ಮಾಡಲಾಗಿದೆ, ಶಾಲಾ ಕಂಪೌಂಡ್, ಕುಡಿಯುವ ನೀರಿನ ಸೌಲಭ್ಯ, ಆಟದ ಮೈದಾನಗಳ ನಿರ್ಮಾಣ ಸೇ-ರಿದಂತೆ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.




ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಗಳನ್ನು ಆರಂಭಿಸುವುದು ನನ್ನ ಕನಸಾಗಿದೆ. ಅವಶ್ಯಕತೆ ಇರುವ ಕಡೆಗಳಲ್ಲಿ ಅತಿ ಶೀಘ್ರವೇ ಸ್ಮಾರ್ಟ್ ಕ್ಲಾಸ್ ತರಗತಿಗಳನ್ನು ಆರಂಭಿಸಲಾಗುವುದು ಎಂದರು. ಎಸ್‌ಎಸ್‌ಎಲ್‌ಸಿ, ಪಿಯುಸಿ ಪಾಸಾದ ಮಕ್ಕಳು ತಮ್ಮ ಆಸಕ್ತಿದಾಯಕ ವಿಷಯಗಳನ್ನು ಆರಿಸಿಕೊಳ್ಳಬೇಕು. ಜೀವನದಲ್ಲಿ ಅವಕಾಶಗಳು ಸಿಗುವುದು ತುಂಬಾ ವಿರಳ, ಸಿಕ್ಕ ಅವಕಾಶಗಳನ್ನು ಸೂಕ್ತವಾಗಿ ಬಳಸಿಕೊಂಡು ಯಶಸ್ವಿಯಾಗಬೇಕು. ಕಾಲೇಜಿನ ದಾಖಲಾತಿಗೆ ಯಾವುದೇ ಸಮಸ್ಯೆ ಬಂದರೆ ನನ್ನ ಗಮನಕ್ಕೆ ತರಬೇಕು ಎಂದು ಸಚಿವರು ಹೇಳಿದರು.

**ಶೇಕಡ 90 ರಷ್ಟು ಅಂಕಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ :** ಶೇಡಕ 90ಕ್ಕೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಲಕ್ಷ್ಮೀ ತಾಯಿ ಫೌಂಡೇಷನ್ ವತಿಯಿಂದ ನಗದು ಪುರಸ್ಕಾರ ನೀಡಲಾಗುವುದು ಎಂದು ಸಚಿವರು ಘೋಷಿಸಿದರು. ಇದೇ ವೇಳೆ ಪಿಯುಸಿಯಲ್ಲಿ ಶೇಕಡ 99 ಅಂಕ ಪಡೆದ ಮುತಗ ಗ್ರಾಮದ ವಿದ್ಯಾರ್ಥಿನಿ ಸೃಷ್ಟಿ ನಾರಾಯಣ ಅಮಟೇಕರ್ ಸೇರಿದಂತೆ, ಅಪ್ರತಿಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪಾಲಕರೊಂದಿಗೆ ವೇದಿಕೆಗೆ ಕರೆದ ಸಚಿವರು ಪ್ರಶಂಸೆ ವ್ಯಕ್ತಪಡಿಸಿದರು.

**ಶಿಕ್ಷಣದ ಜೊತೆಗೆ ಕ್ರೀಡೆಗೂ ಒತ್ತು: ಚನ್ನರಾಜ್ ಹಟ್ಟಿಹೊಳಿ :** ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಹೆಚ್ಚು ಒತ್ತು ನೀಡುತ್ತಿದ್ದಾರೆ. ಶಿಕ್ಷಣದ ಜೊತೆಗೆ ಮಕ್ಕಳ ಆರೋಗ್ಯದ ದೃಷ್ಟಿಯಿಂದ ತಾಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದೆ. ಕ್ರೀಡಾಂಗಣ ನಿರ್ಮಾಣ-ಕ್ಕಾಗಿ ಬೆಳೆಗುಂದಿ ಭಾಗದಲ್ಲಿ ಆರು ಎಕರೆ ಭೂಮಿಯನ್ನು ಈಗಾಗಲೇ ಕ್ರೀಡಾ ಇಲಾಖೆಗೆ ಹಸ್ತಾಂತರ ಮಾಡಲಾಗಿದ್ದು, ಸುಮಾರು 20 ಕೋಟಿ ರೂಪಾಯಿ ವೆಚ್ಚದಲ್ಲಿ ಶೀಘ್ರದಲ್ಲೇ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣಗೊಳ್ಳಲಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ್ ಹಟ್ಟಿಹೊಳಿ ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಲೀಲಾವತಿ ಹಿರೇಮಠ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕಾಂಬಳೆ, ಯುವರಾಜ್ ಕದಂ, ಶಂಕರಗೌಡ ಪಾಟೀಲ, ನಾಗೇಶ್ ದೇಸಾಯಿ, ಕ್ಷೇತ್ರ ಶಿಕ್ಷಣಾಧಿಕಾರಿ ದಾಸಪ್ಪನವರ್, ಸಿ.ಪಿ.ಆಯ್ ಔಟಿ, ಸುರೇಶ್ ಇಟಗಿ ಸೇರಿದಂತೆ ಹಲವು ಮಂದಿ ಉಪಸ್ಥಿತ-ರಿದ್ದರು.

## ಚಿಕ್ಕೊಪ್ಪ ಸಾಲಬಾಧೆ: ರೈತ ಆತ್ಮಹತ್ಯೆ

ಯರಗಟ್ಟಿ: ಸಮೀಪದ ಚಿಕ್ಕೊಪ್ಪ ಗ್ರಾಮದಲ್ಲಿ ಸಾಲಬಾಧೆ ತಾಳಲಾರದೆ ರೈತರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ನಡೆದಿದೆ.

ಮೃತ ರೈತ ಶಿವರುದ್ರಯ್ಯ ಶಿವಪು–ಜಯ್ಯ ಕುಂಟಯ್ಯನ್ನವರ (42) ಎಂದು ಗುರುತಿಸಲಾಗಿದೆ. ವ್ಯವಸಾಯಕ್ಕಾಗಿ ಕೇನರಾ ಬ್ಯಾಂಕ್ ಹಾಗೂ ಮೋದಗಾ ಸಹಕಾರಿ ಬ್ಯಾಂಕ್‌ನಲ್ಲಿ ಮೂರು ಲಕ್ಷ ಎಪ್ಪತ್ತುಸಾವಿರ ಬೆಳೆ ಸಾಲ ಮಾಡಿಕೊಂಡಿದ್ದರು. ಸಾಲ ಮರುಪಾವತಿ ಸಲಾಗಿದೆ ಮನನೊಂದಿದ್ದರು. ಜಮೀನಿನಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಸಿಪಿಐ ಆಯ್ ಎಂ ಮಠಪತಿ, ಜಿ. ಎಸ್. ಆಲದಕಟ್ಟಿ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮುರಗೋಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವಿಶ್ವ ಅಪ್ಪಂದಿರ ದಿನ ಆಚರಿಸಿದ



## ಅವಳಿ ಸಹೋದರಿಯರು

ವಿಜಯಪುರ: ವಿಶ್ವದ ಎಲ್ಲದ ಅಪ್ಪಂದಿ–ರಿಗೆ ಅಭಿನಂದಿಸುತ್ತಾ ಜೂನ್ 15 ರಂದು ವಿಶ್ವ ಅಪ್ಪಂದಿರ ದಿನವನ್ನು ಎಲ್ಲೆಡೆ ಆಚರಿಸಲಾಗುತ್ತದೆ. ಈ ನಿಮಿತ್ತ ತಾಲೂಕಿನ ನಾಗಠಾಣ ಗ್ರಾಮದ ಅವಳಿ ಸಹೋದರಿಯರಾದ ಅನುಶ್ರೀ–ಶ್ರೀನಿಧಿ ಬಂಡೆ ಅವರು ತಮ್ಮ ತಂದೆ ಸಂತೋಷ ಬಂಡೆ ಅವರಿಗೆ ಸಿಹಿ ತಿನ್ನಿಸಿ, ವಿಶ್ವ ಅಪ್ಪಂದಿರ ದಿನವನ್ನು ಆಚರಿಸಿದರು.

ಪುರಾಣ ಕಾಲದಿಂದಲೂ ತಂದೆ ಮಕ್ಕಳ ಸಂಬಂಧ ಶ್ರೇಷ್ಠ ಎನಿಸಿಕೊಂಡಿದೆ. ತನ್ನ ನೋವ ನುಂಗಿ ಮಕ್ಕಳಿಗೆ ಪ್ರೀತಿ ಧಾರೆ ಎರೆಯುವ ತಂದೆಗೆ ಮಕ್ಕಳ ಭವಿಷ್ಯವೇ ಮುಖ್ಯ. ಅಪ್ಪ ಅಂ–ದರೆ ಆಸರೆ, ಅಪ್ಪ ಎಂದರೆ ತ್ಯಾಗ, ಅಪ್ಪ ಅಂದರೆ ಗಾಂಭೀರ್ಯ, ಅಪ್ಪ ಅಂದರೆ ಪ್ರೀತಿ, ಅಪ್ಪ ದೇವರು ಕೊಟ್ಟ ವರ. ತಂದೆ ಜೊತೆಗಿದ್ದರೆ ಸಾಕು ಪ್ರಪಂಚದಲ್ಲಿ ಏನು ಬೇಕಾದರೂ ಸಾಧಿಸುತ್ತೇನೆ ಎಂಬ ವಿಶ್ವಾಸ ಸದಾ ಇರುತ್ತದೆ.

ಅಪ್ಪ ಅಂದರೆ ಕೇವಲ ಜೀವ ಕೊಟ್ಟವನಲ್ಲ. ಬದುಕು ರೂಪಿಸಿದವ. ಜೀವನದ ದಾರಿ ತೋ–ರಿಸಿದವ. ಬಾಲ್ಯದಲ್ಲಿ ಕೈ ಹಿಡಿದು ಹೆಜ್ಜೆ ಹಾಕಲು ಹೇಳಿಕೊಟ್ಟವ. ಧೈರ್ಯವಾಗಿ ಎಲ್ಲರ ಎದುರು ನಿಲ್ಲಲು ದಾರಿ ತೋರಿದವ. ಕಿರು ಬೆರಳ ಹಿಡಿದು ಮುನ್ನಡೆಸಿದ ಅಕ್ಕರೆಯ ಅಪ್ಪನಿಗೊಂದು ಕೃತಜ್ಞತೆ ಹೇಳುವ ದಿನವಿದು.

### ಜೂನ್ 16ರಿಂದ ಉಚಿತ ಯೋಗ ತರಬೇತಿ ಶಿಬಿರ:ಆಶಾದೇವಿ



ಜಮಖಂಡಿ: ನಗರದ ಬಸವಭವನ ಸಭಾಭವನದ ಆವರಣದಲ್ಲಿ ರಾಣಿಚೆನ್ನಮ್ಮಾ ಮಹಿಳಾ ಮಂಡಳ ಆಶ್ರಯದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಜೂನ 16 ರಿಂದ ಸತತವಾಗಿ 11 ದಿನಗಳವರೆಗೆ ಬೆಳಿಗ್ಗೆ 6 ಗಂಟೆಯಿಂದ 7 ಗಂಟೆವರೆಗೆ ಉಚಿತ ಯೋಗ ತರಬೇತಿ ನಡೆಯಲಿದೆ ಎಂದು ರಾಣಿಚೆನ್ನಮ್ಮಾ ಮಹಿಳಾ ಮಂಡಳ ಅಧ್ಯಕ್ಷ ಆಶಾದೇವಿ ಜಗದೀಶ ಗುಡಗುಂಟಿ, ಉಪಾಧ್ಯಕ್ಷರಾದ ಸವಿತಾ ಸನದಿ, ಕಸ್ತೂರಿ ಹೊಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಹಾವೇರಿ: : ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ, ಸಂಸ್ಕೃತಿ ಹಾಗೂ ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆಮಾಡಿದ ಮಕ್ಕಳಿಂದ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ 31–07–2025ಕ್ಕೆ ಅನ್ವಯವಾಗುವಂತೆ ಐದು ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿನ ಸಾಧನೆ ಮಾಡಿದ ಎಲ್ಲಾ ಮಕ್ಕಳು ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ದಿನಾಂಕ 31–07–2025ರೊಳಗಾಗಿ ಆನ್‌ಲೈನ್ **https://swards.gov.in**ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತ : ಆರೈಕೆದಾರರಿಗೆ ಪ್ರೋತ್ಸಾಹಧನ

ಬಾಗಲಕೋಟ : : ಪ್ರಕಸ್ತ ಸಾಲಿನಲ್ಲಿ ಸೆರೆಬ್ರಲ್ ಪಾಲ್ಸಿ, ಮಸ್ಕ್ಯೂಲರ್ ಡಿಸ್ಟ್ರೋಪಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಲೆರೋಸಿಸ್, ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರೋತ್ಸಾಹ ಧನವನ್ನು ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಕಾರಣ ಜಿಲ್ಲೆಯ ಮೇಲ್ಕಾಣಿಸಿದ ವಿಕಲಚೇತನರು ಜೂನ್ 30 ರೊಳಗಾಗಿ ಪ್ರಸಕ್ತ ಸಾಲಿಗೆ ಅರ್ಹ ಫಲಾನುಭವಿಗಳು ನಿಗದಿತ ಅರ್ಜಿ ನಮೂನೆಯೊಂದಿಗೆ ಯು.ಡಿ.ಐ.ಡಿ ಕಾರ್ಡ, ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರ, ವಿಕಲಚೇತನ ವ್ಯಕ್ತಿಗಳ ಹಾಗೂ ಆರೈಕೆದಾರರ ಆಧಾರ ಕಾರ್ಡ ಮತ್ತು ಜಂಟಿ ಭಾವಚಿತ್ರ, ಆರೈಕೆದಾರರ ಬ್ಯಾಂಕ್ ಖಾತೆಯ ವಿವರ, ಆರೈಕೆ ಪಡೆಯುವವರ ಆರೈಕೆ ಮಾಡುವವರ ಪರಸ್ಪರ ಒಪ್ಪಿರುವ ಬಗ್ಗೆ ಹಾಗೂ ಉತ್ತಮ ಆರೈಕೆ ಒದಗಿಸುವ ಬಗ್ಗೆ ಲಿಖಿತ ಪ್ರಮಾಣ ಪತ್ರದೊಂದಿಗೆ ಸಲ್ಲಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆತಿಥ್ಯ ನೀಡುವುದರಲ್ಲಿ ಬಂಟರ ಸಮುದಾಯ ಪ್ರಸಿದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## ಬಂಟರ ಭವನದ ಉದ್ಘಾಟನಾ ಸಮಾರಂಭದಲ್ಲಿ ಸಚಿವರ ಹೇಳಿಕೆ




ಬೆಳಗಾವಿ: ಯಾವುದೇ ಭೇದ ಭಾವವಿಲ್ಲದೆ ಆತಿಥ್ಯ ನೀಡುವುದರಲ್ಲಿ ಬಂಟರ ಸಮುದಾಯ ಹೆಸರುವಾಸಿ. ಈ ಸಮುದಾಯದವರು ಅತ್ಯಂತ ಶ್ರಮಜೀವಿಗಳು, ಅತಿಥಿ ದೇವೋಭವ ಎನ್ನುವ ಹಾಗೆ ಅತಿಥಿಗಳನ್ನು ದೇವರ ರೀತಿ ಭಾವಿಸುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿಯ ಬಂಟರ ಯಾನೆ ನಾಡವರ ಸಂಘದ ವತಿಯಿಂದ ರಾಷ್ಟ್ರೀಯ ಹೆದ್ದಾರಿ 4 ರ ನ್ಯೂ ಗಾಂಧಿ ನಗರದಲ್ಲಿ ನವೀಕೃತಗೊಂಡಿರುವ ಬಂಟರ ಭವನದ ಉದ್ಘಾಟನಾ ಸಮಾರಂಭ ಹಾಗೂ ಮಾಣಿಕ್ಯ ಸಂಭ್ರಮದಲ್ಲಿ ಮಾತನಾಡಿದ ಸಚಿವರು, ಚಿಕ್ಕ ವಯಸ್ಸಿನಲ್ಲೇ ಮನೆಬಿಟ್ಟು ಹೋಗಿ ಸ್ವಂತ ಕಾಲಮೇಲೆ ನಿಲ್ಲುವ ಸ್ವಾಭಿಮಾನಿಗಳು. ದೇಶದ ವಿವಿಧೆಡೆ ಸ್ವಾವಲಂಬಿ ಬದುಕನ್ನು ಕಟ್ಟಿಕೊಂಡಿದ್ದಾರೆ ಎಂದು ಹೇಳಿದರು.

ಸಂಸ್ಕೃತಿ, ಕಲೆಯಲ್ಲಿ ನಿಮ್ಮ ಸಮಾಜಕ್ಕೆ ಇರುವ ಆಸಕ್ತಿ ನೋಡಿ ಮಂತ್ರಮುಗ್ಧಳಾಗಿದ್ದೇನೆ. ಈ ಸಮುದಾಯದವರು ನಿಸ್ವಾರ್ಥ–ರ್ಗಗಳು, ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆಯಾಗಿರುವುದು ನನ್ನ ಪೂರ್ವ ಜನ್ಮದ ಪುಣ್ಯ. ಉಡುಪಿ ಶ್ರೀ ಕೃಷ್ಣ, ಕಟೀಲು ದುರ್ಗಾಪರಮೇಶ್ವರಿ, ಕಾಪು ಮಾರಿಗುಡಿ ದೇವರ ದರ್ಶನ ಭಾಗ್ಯ ನನಗೆ ಸಿಗುತ್ತಿದೆ. ಭೂತಾರಾಧನೆ ಸೇ–ರಿದಂತೆ ಕರಾವಳಿಯ ಸಂಸ್ಕೃತಿ ಬಂಟರ ಸಮುದಾಯದವರಿಂದ ಶ್ರೀಮಂತವಾಗಿದೆ ಎಂದು ಹೇಳಿದರು.

ಬಂಟರ ಸಮುದಾಯದ ಸಂಖ್ಯೆ ಕಡಿಮೆ ಇದ್ದರೂ ಇಡೀ ವಿಶ್ವದ ಹೃದಯವನ್ನು ಗೆದ್ದಿದ್ದೀರಾ. ದೇಶಕ್ಕೆ ರಾಜ್ಯಕ್ಕೆ ಬಂಟರು ಗುರುತರ ಕಾಣಿಕೆ ನೀಡಿದ್ದಾರೆ. ಸ್ವಾತಂತ್ರ್ಯ ಹೋರಾಟಕ್ಕೆ, ಕಲೆ, ಸಾಹಿತ್ಯಕ್ಕೂ ಕೊಡುಗೆ ನೀಡಿದ್ದಾರೆ. ಹೃದಯ ಶ್ರೀಮಂತಿಕೆ ಮರೆವ, ಆತಿಥ್ಯಕ್ಕೆ ಹೆಸರಾದ ಸಮಾಜ ನಿಮ್ಮದು. ಹೊಟೇಲ್ ಉದ್ಯಮವನ್ನು ಯಶಸ್ವಿಯಾಗಿ ನಿರ್ವಹಿಸುವುದರಲ್ಲಿ ಬಂಟರು ನಿಸ್ಸೀಮರು ಎಂದು ಹೇಳಿದರು.

ಭಗವಂತನ ಕೃಪಾಶೀರ್ವಾದ ನಿಮ್ಮ ಮೇಲಿದೆ. ಯಾವುದೇ ಊರಿಗೆ ಹೋದರೂ ಎಲ್ಲರನ್ನೂ ಪ್ರೀತಿ ವಿಶ್ವಾಸದಿಂದ ನೋಡುತ್ತೀರಿ. ಎಲ್ಲರನ್ನು ಒಟ್ಟಿಗೆ ಕರೆದೊಯ್ಯುತ್ತೀರಿ. ಇದು ಬಂಟರ ಸಮುದಾಯದವರಿಗೆ ಇರುವ ಕಲೆ ಎಂದರು.

ಕಾರ್ಯಕ್ರಮದಲ್ಲಿ ಸಿಎಂಡಿ ಅಂಡ್ ಎಂಆರ್ ಜಿ ಗ್ರೂಪ್ ನ ಡಾ.ಕೆ ಪ್ರಕಾಶ ಶೆಟ್ಟಿ, ಶಾಸಕರಾದ ಆಸಿಫ್ ಸೇಠ್, ಉದ್ಯಮಿಗಳಾದ ಜಯಶೀಲ ಶೆಟ್ಟಿ, ಮುಂಬೈ ಬಂಟರ ಸಂಘದ ಅಧ್ಯಕ್ಷರಾದ ಪ್ರವೀಣ ಬೋಜ್ ಶೆಟ್ಟಿ, ಸಂಗೀತ ನಿರ್ದೇಶಕರಾದ ಗುರುಕಿರಣ್, ಡಾ.ಮಹಾಬಳೇಶ್ ಶೆಟ್ಟಿ, ಗೌರವಾಧ್ಯಕ್ಷರಾದ ವಿಠ್ಠಲ ಹೆಗ್ಡೆ, ಅಧ್ಯಕ್ಷರಾದ ವಿಜಯ ಶೆಟ್ಟಿ, ಶ್ರೀಧರ್ ಶೆಟ್ಟಿ, ಹಸ್ತ ಶೆಟ್ಟಿ, ಪ್ರಸನ್ನ ಶೆಟ್ಟಿ, ಚೇತನ ಶೆಟ್ಟಿ, ಕರುಣಾಕರ್ ಶೆಟ್ಟಿ, ಪ್ರಣಯ ಶೆಟ್ಟಿ ಬಂಟ ಸಮುದಾಯದ ಅನೇಕರು ಉಪಸ್ಥಿತರಿದ್ದರು.

## ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರದಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ : ಜಗದೀಶ ಪಂಪಣ್ಣವರ




ಮುದ್ದೇಬಿಹಾಳ : ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ,ಜನೌಷಧಿ ಕೇಂದ್ರಗಳು,ಉಚಿತ ಅಕ್ಕಿ ಕೊಡುವ ಯೋಜನೆ, ಭೀಮಾ ಪಸಲ್, ಆಯುಷ್ಮಾನ್ ಆರೋಗ್ಯ ಕಾರ್ಡ, ಇಶ್ರಮ ಕಾರ್ಡ, ಇಂತಹ ನೂರಾರು ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರದಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ತಾಲ್ಲೂಕು ಜಗದೀಶ ಪಂಪಣ್ಣವರ ಹೇಳಿದರು.

ಪಟ್ಟಣದ ಬಿಜೆಪಿ ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್ ಪಾಟೀಲ ನಡಹಳ್ಳಿ ಅವರು ನಿವಾಸದಲ್ಲಿ ಇರುವ ಬಿಜೆಪಿ ಕಾರ್ಯಾಲಯದಲ್ಲಿ ಶನಿವಾರ ಸಂಜೆ ಬಿಜೆಪಿ ಸರ್ಕಾರ ಕೇಂದ್ರದಲ್ಲಿ 11 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಉದ್ದೇಶಿಸಿ ಅವರು ಮಾತನಾಡಿದ,

ಐದು ಲಕ್ಷ ರೂ.ಗಳವರೆಗೆ ಆರೋಗ್ಯ ವಿಮೆ ಕಲ್ಪಿಸುವ ಯೋಜನೆಯನ್ನು ಮೋದಿ ಸರ್ಕಾರ ಜಾ–ರಿಗೊಳಿಸಿದೆ. ಗ್ಯಾರಂಟಿ ಯೋಜನೆಗಳೆಂಬ ಕಾಂಗ್ರೆಸ್ ಸರ್ಕಾರ ಮರಳು ಮಾಡಲು ಮುಂದಾಗಿದೆ ಎಂದು ಆರೋಪಿಸಿದರು. 35 ವ್ಯಾಟ್ ಇದ್ದದ್ದು 75 ವ್ಯಾಟ್ ವಿದ್ಯುತ್‌ನ್ನು ಉಚಿತವಾಗಿ ಕೇಂದ್ರ ಸರ್ಕಾರ ಬಡವ–ರಿಗೆ ಅನೇಕ ಯೋಜನೆಗಳನ್ನು ಕೊಡುತ್ತಿದೆ ಎಂದರು.

ಮುಖಂಡ ಗಂಗಾಧರ ನಾಡಗೌಡ ಮಾತನಾಡಿ, ಬಿಜೆಪಿ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ನಕಲು ಮಾಡುತ್ತಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಪ್ರಭು ಕಡಿ, ಕೆ ಆರ್ ಬಿರಾದಾರ, ಬಿಜೆಪಿ ರೈತ ಮೋರ್ಚಾ ತಾಲ್ಲೂಕು ಅಧ್ಯಕ್ಷ ಎಸ್ ಎಸ್ ಶಿವಣಗಿ, ಮಲ್ಲಿಕಾರ್ಜುನ ತಂಗಡಗಿ,ಗಿರೀಶಗೌಡ ಪಾಟೀಲ,ಮಧುಸ್ವಾಮಿ, ಸಿದ್ದು ಹಿರೇಮಠ, ಗೌರಮ್ಮ ಹುನಗುಂದ,ಅಶೋಕ ರಾಠೋಡ,ಲಕ್ಷ್ಮಣ ಬಿಜ್ಜೂರ, ಸಂಜೀವ ಬಾಗೇವಾಡಿ,ನಾಗೇಶ ಕವಡಿಮಟ್ಟಿ,ಸೇ–ರಿದಂತೆ ಉಪಸ್ಥಿತರಿದ್ದರು.

## ಮೋದಿಯಿಂದ ದೇಶದ ಸುರಕ್ಷಿತ ಸಾಧ್ಯ



ರಬಕವಿ–ಬನಹಟ್ಟಿ,ಜೂ15: ಪ್ರಧಾನಿ ನರೇಂದ್ರ ಮೋದಿಯಿಂದ ಮಾತ್ರ ದೇಶದ ಅಭಿವೃದ್ಧಿ ಮತ್ತು ಸುರಕ್ಷತೆ ಸಾಧ್ಯ. ಹನ್ನೊಂದು ವರ್ಷದಲ್ಲಿ ಮೋದಿ ದೇಶವನ್ನು ಅಭಿವೃದ್ಧಿಯತ್ತ ತೆಗೆದುಕೊಂಡು ಹೋಗಿದ್ದಾರೆ. ಮೋದಿ ಯೋಜನೆಗಳನ್ನು ಬಿಜೆಪಿ ಕಾರ್ಯಕರ್ತರು ಮನೆ ಮನೆಗೆ ಮುಟ್ಟಿಸುವ ಕಾರ್ಯವನ್ನು ಮಾಡಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಶನಿವಾರ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ಮೋದಿ ಸರ್ಕಾರಕ್ಕೆ ಹನ್ನೊಂದು ವರ್ಷ ಕಾರ್ಯಕ್ರಮದಲ್ಲಿ ಮಾತನಾಡಿದರು. ಭಾರತ ಮಾತೆಯೇ ನಮಗೆ ನಿಜವಾದ ದೇವರು. ಭಾರತ ಉಳಿದರೆ ಮಾತ್ರ ದೇಶದಲ್ಲಿ ಧರ್ಮ, ದೇವರು, ಸಂಸ್ಕೃತಿ ಉಳಿಯಲು ಸಾಧ್ಯ. ಪಕ್ಷ ದ್ರೋಹಿಗಳು ಕಾರ್ಯ ಬೇಡ. ದೇಶದಲ್ಲಿ ಇಂದು ವಂದೇ ಭಾರತ ರೇಲ್ವೆಗಳು ಓಡಾಡುತ್ತಿವೆ. ಕಾರ್ಯಕರ್ತರು ಮನೆ ಮನೆಗೆ ಹೋಗಿ 70 ವರ್ಷ ಮೇಲ್ಪಟ್ಟವರನ್ನು ಗುರುತಿಸಿ ಅವರಿಗೆ ಆಯುಷ್ಮಾನ ಭಾರತ ಸೌಲಭ್ಯ ದೊರೆಯುವಂತೆ ಮಾಡಬೇಕು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ನಮ್ಮ ಕಡೆಯಿಂದ ಹಣವನ್ನು ಪಡೆದುಕೊಂಡು ಅದನ್ನು ಗ್ಯಾರಂಟಿಗಳ ಮೂಲಕ ನಮಗೆ ನೀಡುತ್ತಿದೆ. ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಗಳು ಬರುತ್ತಿಲ್ಲ. ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಬಿಜೆಪಿ ಮುಖಂಡ ಶಿವಾನಂದ ಗಾಯಕವಾಡ ಮಾತನಾಡಿ, ಮೂರು ಬಾರಿ ಗುಜರಾಥ್ ರಾಜ್ಯದ ಮುಖ್ಯಮಂತ್ರಿಗಳಾಗಿ ದೇಶ ಸೇವೆಗೆ ಹೋಗುತ್ತಿರುವಾಗ ತಾವು ಉಳಿಸಿದ ಹಣವನ್ನು ಸಮಾಜ ಸೇವೆಗೆ ನೀಡಿದರು. ಇಂದು ದೇಶದಲ್ಲಿ ವೈದ್ಯಕೀಯ ಕಾಲೇಜುಗಳು, ವಿಮಾನ ನಿಲ್ದಾಣಗಳು, ಅಮೃತ ಭಾರತ ರೇಲ್ವೆಗಳು, ಬಡವರಿಗಾಗಿ ಜನೌಷಧ ಕೆಂದ್ರಗಳು ಸೇರಿದಂತೆ ಮೂರು ನೂರಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ದೇಶದ ಅಭಿವೃದ್ಧಿಗಾಗಿ ದೇಶದ ಜನತೆಯಅಭಿವೃದ್ಧಿಗಾಗಿ ನೀಡಿದ್ದಾರೆ. ಅವೆಲ್ಲವುಗಳನ್ನು ಮನೆ ಮನೆಗೆ ತಲುಪಿಸುವ ಕಾರ್ಯವನ್ನು ಕಾರ್ಯಕರ್ತರು ಮಾಡಬೇಕು ಎಂದು ತಿಳಿಸಿದರು. ಜಿಲ್ಲಾ ಘಟಕದ ಉಪಾಧ್ಯಕ್ಷ ಈಶ್ವರ ಆದೆಪ್ಪನವರ ಮಾತನಾಡಿದರು. ಶ್ರೀಶೈಲ ಬೀಳಗಿ, ಸರೇಶ ಅಕ್ಕಿವಾಟ, ಶಂಕ್ರೆಪ್ಪ ಭುಜರುಕ, ಜಯವಂತ ಮಿಳ್ಳಿ, ಶಂಕರಗೌಡ ಪಾಟೀಲ, ಪರಶುರಾಮ ಬಸವ್ವಗೋಳ, ಪವಿತ್ರಾ ತುಕ್ಕನ್ನವರ, ವಿದ್ಯಾ ಧಬಾಡಿ, ಮಹಾನಂದ ಹೊರಟ್ಟಿ, ವೈಷ್ಣವಿ ಬಾಗೇವಾಡಿ, ಯಲ್ಲಪ್ಪ ಕಟಗಿ, ಶೇಖರ ಅಂಗಡಿ, ಗೌರಿ ಮಿಳ್ಳಿ, ದುರ್ಗವ್ವ ಹ–ರಿಜನ, ಶಶಿಕಲಾ ಸಾರವಾಡ, ಜಯಶ್ರೀ ಬಾಗೇವಾಡಿ, ಮಹಾದೇವ ಕೋಟ್ಯಾಳ, ಭೀಮಶಿ ಪಾಟೀಲ, ಪ್ರಭು ಪೂಜಾರಿ, ಈರಣ್ಣ ಚಿಂಚಖಂಡಿ ಸೇರಿದಂತೆ ಅನೇಕರಿದ್ದರು.

## ರಾಜ್ಯಮಟ್ಟದ ವಿಚಾರ ಸಂಕಿರ್ಣದಲ್ಲಿ ಬಿಎಲ್.ಡಿ ವಿದ್ಯಾರ್ಥಿಗಳು




ಜಮಖಂಡಿ: ಬಾಗಲಕೋಟ ವಿಶ್ವವಿದ್ಯಾಲಯದ ವತಿಯಿಂದ ಬಳ್ಳಾರಿಯ ನಂದಿಹಳ್ಳಿಯಲ್ಲಿ ನಡೆದ ಡಾ.ಬಿ.ಆರ್. ಅಂಬೇಡ್ಕರ ಚಿಂತನೆಗಳು ಮತ್ತು ಪ್ರಸ್ತುತ ಭಾರತ ಎರಡು ದಿನಗಳ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಬಿ. ಎಲ್.ಡಿ.ಇ.ಸಂಸ್ಥೆ ಶಿಕ್ಷಣ ಮಹಾವಿದ್ಯಾಲಯ ಪ್ರಶಿಕ್ಷಣಾರ್ಥಿಗಳಾದ ಸಂಗಮೇಶ ಪಾಟೀಲ ಮತ್ತು ಶ್ರುತಿ ಗುಡದಿ ಭಾಗವಹಿಸಿದ್ದಾರೆ. ವಿದ್ಯಾರ್ಥಿಗಳ ವಿಶೇಷ ಸಾಧನೆಗೆ ಬಿ.ಎಲ್.ಡಿ.ಇ. ಸಂಸ್ಥೆ ಆಡಳಿತಾಧಿಕಾರಿ ಶ್ರೀಕಾಂತ ಲಗಳಿ, ಕಾಲೇಜಿನ ಅಭಿವೃದ್ಧಿ ಸಮಿತಿ ಅಧ್ಯಕ್ಷ ಅರುಣಕುಮಾರ ಶಹಾ, ಪ್ರಾಂಶುಪಾಲ ಡಾ.ಡಿ.ಎಚ್.ಹುಸೇನಮಿಯ್ಯಾ ಅಭಿನಂದಿಸಿದ್ದಾರೆ.

## ಯುವ ಪೀಳಿಗೆಗೆ ರಕ್ತದಾನದ ಜಾಗೃತಿ ಅಗತ್ಯ




ರಬಕವಿ–ಬನಹಟ್ಟಿ,ಜೂ15: ರಕ್ತದಾನದಿಂದ ಪ್ರತಿಯೊಬ್ಬರು ಸಮಾಜ ಸೇವೆ ಮಾಡಲು ಸಾಧ್ಯ. ರಕ್ತದಾನದಿಂದ ದಾನಿಗಳು ಮತ್ತೊಬ್ಬರ ಜೀವವನ್ನು ಉಳಿಸಲು ಸಾಧ್ಯವಾಗುತ್ತದೆ. ಯುವ ಪೀಳಿಗೆಗೆ ರಕ್ತದಾನದ ಕುರಿತು ಜಾಗೃತಿ ಮುಖ್ಯವಾಗಿದೆ ಎಂದು ಇಲ್ಲಿನ ಮಹೇಶ್ವರಿ ಸೇವಾ ಸಂಘದ ಅಧ್ಯಕ್ಷ ಗೋಪಾಲ ಲಡ್ಡಾ ತಿಳಿಸಿದರು.

ಅವರು ಭಾನುವಾರ ಸ್ಥಳೀಯ ಬಂಗಾರೆವ್ವ ತಟ್ಟಿಮನಿ ಸಭಾ ಭವನದಲ್ಲಿ ಮಹೇಶ್ವರಿ ಸೇವಾ ಸಂಘದವರು ಹಮ್ಮಿಕೊಂಡ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಮುಧೋಳದ ರಾಮನಗೌಡ ಆಸ್ಪತ್ರೆಯ ರಕ್ತ ಭಂಡಾರದ ಡಾ. ಮಹಾದೇವ ಪೂಜಾರಿ ಮಾತನಾಡಿ, ರಕ್ತವನ್ನು ಕೃತವಾಗಿ ನಿರ್ಮಾಣ ಮಾಡಲು ಸಾಧ್ಯವಿಲ್ಲ. ಆದ್ದರಿಂದ ದಾನಿಗಳಿಂದ ರಕ್ತವನ್ನು ಪಡೆದುಕೊಳ್ಳಲಾಗುತ್ತದೆ. 18 ರಿಂದ 60 ವರ್ಷದ ಪ್ರತಿಯೊಬ್ಬ ಆರೋಗ್ಯವಂತರು ರಕ್ತದಾನವನ್ನು ಮಾಡಬಹುದಾಗಿದೆ. ಪ್ರತಿಫಲದ ಅಪೇಕ್ಷೆ ಇಲ್ಲದೆ ಮಾನವೀಯತೆಯ ದೃಷ್ಟಿಯಿಂದ ಬೇರೆಯವರಿಗೆ ರಕ್ತ ನೀಡುವುದೆ ದಾನವಾಗಿದೆ. ಮಹೇಶ್ವರಿ ಸಮಾಜದ ಯುವಕರು ಪ್ರತಿವರ್ಷ ರಕ್ತದಾನವನ್ನು ಶಿಬಿರದ ಮೂಲಕ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಂಕಜ ತೊತ್ಲಾ, ಶ್ಯಾಮ ಭೂತಡಾ, ಶಿವು ಭದ್ರನ್ನವರ, ಗೋಪಾಲ ಭಟ್ಟಡ, ಬದರಿ ಲಡ್ಡಾ, ಗೋವಿಂದ ಕಾಬರಾ, ರಾಜು ಖಡಕಬಾವಿ, ಮಲ್ಲು ಭದ್ರನ್ನವರ, ರಾಜು ಮರ್ದಾ, ವಿಜಯ ರಾಠಿ, ಶ್ರೀನಾಥ ರಾಠಿ, ನಟವರ ಲೋಯಾ, ವಿಜಯ ಕಾಬರಾ, ಗೋವಿಂದ ಕಾಬರಾ, ನಟವರ ಕಾಬರಾ, ಸೇರಿದಂತೆ ಅನೇಕರಿದ್ದರು. ಸುಮಾರು 150 ಕ್ಕೂ ಅಧಿಕ ಜನರು ಸ್ವಯಂಪ್ರೇರಿತ ರಕ್ತದಾನ ಮಾಡಿದರು.

## ಬಣಜಿಗ ಸಮಾಜದ ನೂತನ ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆ



ಮುದ್ದೇಬಿಹಾಳ, ಪಟ್ಟಣದ ತಾಲೂಕಾ ಬಣಜಿಗ ಸಮಾಜದ ನೂತನ ಕಾರ್ಯಕಾರಿಣಿ ಮಂಡಳಿಯ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಇಲ್ಲಿಯ ಹೊಸಮಠದಲ್ಲಿ ನಡೆದ ರವಿವಾರರಂದು ನಡೆದ ಈ ಈ ಸಭೆಯಲ್ಲಿ ತಾಲೂಕಾ ಘಟಕದ ನೂತನ ಗೌರವಾಧ್ಯಕ್ಷರನ್ನಾಗಿ ನ್ಯಾಯವಾದಿ ಎಂ.ಎಸ್. ನಾವದಗಿ, ಅಧ್ಯಕ್ಷರನ್ನಾಗಿ ಅಶೋಕ ಚಟ್ಟೇರ, ಉಪಾಧ್ಯಕ್ಷರನ್ನಾಗಿ ಬಿ.ಎಸ್. ಚಿನಿವಾರ, ಪ್ರಧಾನ ಕಾರ್ಯದರ್ಶಿಯನ್ನಾಗಿ ರಾಜು ಬಳ್ಳೊಳ್ಳಿ, ಖಜಾಂಚಿಯನ್ನಾಗಿ ಸಂತೋಷ ನಾಯನೇಗಲಿ ಹಾಗೂ ಯುವ ಘಟಕದ ಅಧ್ಯಕ್ಷರನ್ನಾಗಿ ಶಂಕರ ಕಡಿ, ಉಪಾಧ್ಯಕ್ಷರನ್ನಾಗಿ ನ್ಯಾಯವಾದಿ ಬಸವರಾಜ ದಡ್ಡಿ, ಪ್ರಧಾನ ಕಾರ್ಯದರ್ಶಿಯನ್ನಾಗಿ ಸುಚೇತ ಚಳಗೇರಿ, ಹಾಗೂ ಮಹಿಳಾ ಘಟಕದ ಅಧ್ಯಕ್ಷರನ್ನಾಗಿ ಶ್ರೀಮತಿ ಶೋಭಾ ನಾಗಠಾಣ, ಉಪಾಧ್ಯಕ್ಷರನ್ನಾಗಿ ಕವಿತಾ ದಡ್ಡಿ, ಪ್ರಧಾನ ಕಾರ್ಯದರ್ಶಿಯನ್ನಾಗಿ ರೇಖಾ ಗಡೇದ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಇದೇ ಸಮಯದಲ್ಲಿ ಆಯ್ಕೆಯಾದ ಎಲ್ಲ ಪಧಾಧಿಕಾ–ರಿಗಳಿಗೆ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ನಿಕಟಪೂರ್ವ ಅಧ್ಯಕ್ಷ ಪ್ರಭುರಾಜ ಕಲ್ಬುರ್ಗಿ ವಹಿಸಿದ್ದರು. ಮುಖಂಡರಾದ ಬಸವರಾಜ ನಾವದಗಿ, ರುದ್ರೇಶ ಕಿತ್ತೂರ,ದಾನಪ್ಪ ನಾಗಠಾಣ,ಎಸ್.ಎಸ್.ಹುನಗುಂದ, ರಾಜು ಜೋಳದ, ಸಂಗಮೇಶ ನಾವದಗಿ,ಡಿ.ಎಸ್.ಚಳಗೇರಿ,ಲೋಹಿತ ನಾಲತವಾಡ, ಉಮೇಶ ತಾರನಾಳ,ಸರೋಜಾ ಕೋರಿ, ಜ್ಯೋತಿ ದಡ್ಡಿ ಮೊದಲಾದವರು ಇದ್ದರು.

## ಸಾಧನೆಗೈದ ವಿದ್ಯಾರ್ಥಿಗಳು ಉನ್ನತ ಹುದ್ದೆ ಅಲಂಕರಿಸಲಿ: ರೂಡಗಿ

ಜಮಖಂಡಿ:ಶಿಕ್ಷಣಕ್ಷೇತ್ರದಲ್ಲಿ ಸಾಧನೆಗೈದ ಮಕ್ಕಳು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಬಣಜಿಗ ಸಮಾಜದ ಮಕ್ಕಳು ಹೆಚ್ಚಿನ ಅಂಕಗಳನ್ನು ಪಡೆದುಕೊಂಡು ನಮ್ಮ ಸಮಾಜಕ್ಕೆ ಮಾದರಿಯಾಗಿದ್ದಾರೆಂದು ಬಣಜಿಗ ಸಮಾಜದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ರೂಡಗಿ ಹೇಳಿದರು. ನಗರದ ಶ್ರೀದಾನಮ್ಮದೇವಿ ಸಭಾಭವನದಲ್ಲಿ ಬಣಜಿಗ ದೈವಮಂಡಳಿ ಮತ್ತು ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ



ಉದ್ಘಾಟಿಸಿ ಮಾತನಾಡಿದರು. ಮಕ್ಕಳು ಉನ್ನತ ಸ್ಥಾನದ ಅಧಿಕಾ–ರಿಗಳಾಗುವ ಕನಸು ಕಂಡುಕೊಳ್ಳಬೇಕು. ಮನೆಯಲ್ಲಿ ತಂದೆ–ತಾಯಂದಿಯರ ಕರ್ತವ್ಯ ಬಹಳಷ್ಟು ಮುಖ್ಯವಾಗಿದೆ. ಪ್ರತಿಭಾ ಪುರಸ್ಕಾರ ಪಡೆದ ಮಕ್ಕಳನ್ನು ಸಮಾಜದಲ್ಲಿ ಒಳ್ಳೆಯ ವ್ಯಕ್ತಿಗಳನ್ನಾಗಿ ರೂಪಿಸುವ ಮತ್ತು ಸ್ಪೂರ್ತಿಗೊಳಿಸುವ ಪ್ರಯತ್ನ ನಮ್ಮದಾಗಬೇಕು. ನನ್ನನ್ನು ರಾಜ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ, ಸಮಾಜವನ್ನು ಮುನ್ನಡೆ ನಡೆಸಿಕೊಂಡು ಸಾಗುವ ಮಹತ್ತರವಾದ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದರು. ಮುತ್ತಿನಕಂ ತಿಮಠದ ಪಂಡಿತರಾಧ್ಯ ಶಿವಲಿಂಗ ಶಿವಾಚಾರ್ಯರು, ಓಲೇಮಠದ ಆನಂದದೇವರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯಲ್ಲಿ ಪ್ರತಿಭಾಪುರಸ್ಕಾರ ಸಮೀತಿ ಅಧ್ಯಕ್ಷ ಉಮೇಶ ಬಾಂಗಿ, ಬಸವರಾಜ ನ್ಯಾಮಗೌಡ, ಧರ್ಮಲಿಂಗಯ್ಯ ಗುಡಗುಂಟಿ, ಸಮಾಜದ ಅಧ್ಯಕ್ಷ ಜಿ.ಆರ್. ಅನಂತಪೂರ, ಶಿವಾನಂದ ಜಿರಲಿ, ಸಿದ್ರಾಮಪ್ಪ ಶಿರೋಳ, ಮೇಘಾ ಮಹಾಬಳಶೆಟ್ಟಿ, ನಿಖಿತಾ ಅನಂತಪೂರ, ಮಲ್ಲಪ್ಪ ಮುದಕಣ್ಣವರ, ಸಂಗಮೇಶ ಹಲವಾಯಿ, ಮಲ್ಲು ಜೈನಾಪೂರ, ನಾಗೇಂದ್ರ ಶಿರಗಣ್ಣವರ, ಬಸವರಾಜ ಕೋತಿನ, ಷಣ್ಮುಖಪ್ಪ ಮಹಾಬಳಶೆಟ್ಟಿ, ಗಿರೀಶ ಬಾಂಗಿ, ಶಂಕರ ಜಿರಲಿ, ಪ್ರಭು ಕಲ್ಯಾಣಶೆಟ್ಟಿ, ಸದಾಶಿವ ಬಾಗೇವಾಡಿ, ಶಿವಾನಂದ ಗೊಂದಿ, ಮಲ್ಲಿಕಾರ್ಜುನ ಇಂಗಳಗಾಂವಿ, ಮುರಗೇಪ್ಪ ಕುರಿ, ರಮೇಶ ಉಪ್ಪಿನ, ಉಮೇಶ ಮುರಗೋಡ, ಬಸವರಾಜ ಹರಕಂಗಿ, ಸಂಜಯ ಕಂಕಣವಾಡಿ, ಬಸವರಾಜ ನರಗುಂದ, ರಾಜು ಕರಣಿ, ಮುರಗೇಶ ಕಲ್ಯಾಣಶೆಟ್ಟಿ ಸಹಿತ ಹಲವರು ಇದ್ದರು.

ದಂಡಮ್ಮಾ ಕಲ್ಯಾಣಶೆಟ್ಟಿ ಪ್ರಾರ್ಥಿಸಿದರು. ಮಲ್ಲಿಕಾರ್ಜುನ ಜಿರಲಿ ಸ್ವಾಗತಿಸಿದರು. ಹಿರಿಯ ನ್ಯಾಯವಾದಿ ಸಿ.ಎಸ್. ಬಾಂಗಿ ಪ್ರಾಸ್ತಾವಿಕ ಮಾತನಾಡಿದರು. ನಿವೃತ್ತ ಶಿಕ್ಷಕ ಚಂದ್ರಶೇಖರ ಜತ್ತಿ ನಿರೂಪಿಸಿದರು. ಸದಾಶಿವ ಬಾಗೇವಾಡಿ ವಂದಿಸಿದರು.

# ಬಣಜಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳ ಬೆನ್ನೆಲುಬಾಗಿ ಕಾರ್ಯ ನಿರ್ವಹಿಸಬೇಕು



ಗೋಕಾಕ: ಸಮಾಜ ಬಾಂಧವರು ಸಂಘಟನಾತ್ಮಕವಾಗಿ ಕಾರ್ಯನಿರ್ವಹಿಸುವ ಮೂಲಕ ಆರ್ಥಿಕವಾಗಿ ಹಿಂದುಳಿದಿರುವ ಬಣಜಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳ ಬೆನ್ನೆಲುಬಾಗಿ ಕಾರ್ಯ ನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಸಂಸದ ಜಗದೀಶ ಶೆಟ್ಟರ ಕರೆ ನೀಡಿದರು.

ರವಿವಾರ ಇಲ್ಲಿನ ಗೋಕಾಕ ಶಿಕ್ಷಣ ಸಂಸ್ಥೆಯ ಬಿಎಡ್ ಮಹಾವಿದ್ಯಾಲಯ ಸಭಾ ಭವನದಲ್ಲಿ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಗೋಕಾಕ ತಾಲ್ಲೂಕು ಘಟಕ ಹಮ್ಮಿಕೊಂಡಿದ್ದ ಬಣಜಿಗ ಸಮಾಜದ 18ನೇ ವಾರ್ಷಿಕೋತ್ಸವ ಆಚರಣೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯು ಪರೀಕ್ಷೆಯಲ್ಲಿ ಕ್ರಮವಾಗಿ ಶೇ. 85 ಮತ್ತು ಶೇ.80ಗಿಂತಲೂ ಅಧಿಕ ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜವು ಪ್ರತಿಯೊಬ್ಬ ಪ್ರತಿಭೆಯ ಬೆಂಬಲಕ್ಕೆ ನಿಂತಾಗ ಪ್ರತಿಭಾನ್ವಿತರು ಸಾಧನೆ ಈಡೇರಿಕೆಗೆ ಒತ್ತು ನೀಡುವಂತೆ ಕಿವಿಮಾತು ಹೇಳಿದರು. ಇತ್ತೀಚಿನ ವರ್ಷಗಳಲ್ಲಿ ಎಲ್ಲ ಸಮುದಾಯಗಳು ಪ್ರತಿಭೆಗಳನ್ನು ಗುರ್ತಿಸಿ ಪ್ರೋತ್ಸಾಹಿಸಿ ಪುರಸ್ಕರಿಸುತ್ತಿರುವುದು ಪ್ರಗತಿಯ ಸಂಕೇತ ಎಂದು ಅರ್ಥೈಸಿದ ಸಂಸದರು, ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಪ್ರತಿಭೆಗಳಿಗೆ ಆಧಾರವಾಗಿ ನಿಲ್ಲಬೇಕು ಎಂದು ಸಲಹೆ ನೀಡಿದರು. ತಾಲ್ಲೂಕು ಘಟಕದಿಂದ ಬಣಜಿಗರ ಜನಗಣತಿ ಕಾರ್ಯ ನಡೆಸಬೇಕು. ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಬಣಜಿಗ ಸಮಾಜದ ವಿದ್ಯಾರ್ಥಿಗಳಿಗೆ 2ಎ ಮೀಸಲಾತಿ ಸೌಲಭ್ಯ ನಿರಂತರವಾಗಿ ದೊರೆಯುತ್ತಿದೆ, ಇದುವೇ ಸರ್ಕಾರಿ ಸೇವೆಗೂ ವಿಸ್ತರಣೆ ಆಗಬೇಕು ಎಂದು ಒತ್ತಾಯಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ರೂಡಗಿ ಅವರು ಮಾತನಾಡಿ, ಆರ್ಥಿಕವಾಗಿ ಹಿಂದುಳಿದ ಸಮಾಜ ಬಾಂಧವರನ್ನು ಮೇಲೆತ್ತಿ ಮುಖ್ಯ ವಾಹಿನಿಗೆ ಕರೆ ತರುವುದೇ ಸಂಘದ ಮುಖ್ಯ ಧ್ಯೇಯೋದ್ದೇಶವಾಗಿದೆ ಎಂದು ಹೇಳಿದರು.

ವೇದಿಕೆಯನ್ನು ಉದ್ದೇಶಿಸಿ ಸಂಘದ ಮಹಿಳಾ ಘಟಕ ಅಧ್ಯಕ್ಷೆ ಮಹಾದೇವಿ ಉಪ್ಪಿನ ಮತ್ತು ಯುವ ಮುಖಂಡ ರಾಹುಲ ಜಾರಕಿಹೊಳಿ ಮಾತನಾಡಿ ಸಂಘದ ಚಟುವಟಿಕೆಗಳನ್ನು ಶ್ಲಾಘಿಸಿದರು.

ವರ್ತಕ ಮಹಾಂತೇಶ ತಾಂವಶಿ ಅವರು ಮಾತನಾಡಿ, ತಾಲ್ಲೂಕು ಘಟಕದಿಂದ ಬಣಜಿಗ ಬಾಂಧವರ ಯಾದಿ ಮಾಡುವ ಕಾರ್ಯ ಕೈಗೊಂಡಲ್ಲಿ ಅಂಥ ಚಟುವಟಿಕೆಯ ವೆಚ್ಚವನ್ನು ಭರಿಸುವ ಘೋಷಣೆ ಮಾಡಿದರು.

ಕಳೆದ ಮಾರ್ಚ್/ಏಪ್ರೀಲ್ ಮಾಹೆಯಲ್ಲಿ ಜರುಗಿದ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯು ಪರೀಕ್ಷೆಯಲ್ಲಿ ಕ್ರಮವಾಗಿ ಶೇ.85 ಮತ್ತು ಶೇ80.ಗಿಂತಲೂ ಅಧಿಕ ಅಂಕಗಳನ್ನು ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಪ್ರೋತ್ಸಾಹಿಸಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಬಣಜಿಗ ಸಮಾಜ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಘಟಕ ಅಧ್ಯಕ್ಷ ಪ್ರೊ. ಚನ್ನಪ್ಪ ಕೌಜಲಗಿ ಅವರು ಪ್ರಾಸ್ತಾವಿಕವಾಗಿ ಮತ್ತು ಅಧ್ಯಕ್ಷೀಯ ಮಾತುಗಳನ್ನಾಡಿ, ಸಂಘದ ಶ್ರೇಯಸ್ಸಿಗಾಗಿ ಒಗ್ಗಟ್ಟಿನಿಂದ ಶ್ರಮಿಸೋಣ ಎಂದು ಹೇಳಿದರು.

ವೇದಿಕೆಯಲ್ಲಿ ಸಂಘದ ರಾಜ್ಯ ವಿಶ್ವಸ್ಥ ಮಂಡಳಿ ಸದಸ್ಯ ಬಸನಗೌಡ ಪಾಟೀಲ, ಗೋ.ಶಿ. ಸಂಸ್ಥೆ ಚೇರಮನ್ ವಿಶ್ವನಾಥ ಕಡಕೋಳ, ಡಾ. ವಿ ಬಿ ಉಪ್ಪಿನ, ತಾಲ್ಲೂಕು ಯುವ ಘಟಕ ಅಧ್ಯಕ್ಷ ಮಲ್ಲಿಕಾರ್ಜುನ (ಬಾಬು) ಶೆಟ್ಟಿ ಮೊದಲಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಂಘದ ಸಲಹಾ ಸಮಿತಿ ಸದಸ್ಯರಾದ ಎಂ ಡಿ ಚುನಮರಿ, ಸಿ ಸಿ ಕೊಣ್ಣೂರ, ವಿ ಎಸ್ ಬಿದರಿ, ಜೆ ಎಂ ಮುನವಳ್ಳಿ, ಎ ಬಿ ದಯನ್ನವರ, ಆರ್ ಎಂ ಕಲ್ಯಾಣಶೆಟ್ಟಿ ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಪೂರ್ಣಿಮಾ ತಾಂವಶಿ, ಸುಹಾಸಿನಿ ನಂದಿ ಮತ್ತು ರೇಖಾ ವಾಲಿ ನಿರೂಪಿಸಿದರು. ಪ್ರಾಚಾರ್ಯ ಪ್ರಕಾಶ ಲಕ್ಷೆಟ್ಟಿ ವಂದಿಸಿದರು.

# ಮಕ್ಕಳ ಭಾವನಾತ್ಮಕ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಹಿರಿದು-ನಲವಡೆ



ಮುದ್ದೇಬಿಹಾಳ, ಮಕ್ಕಳ ಜೀವನದಲ್ಲಿ ಹಾಗೂ ಮಕ್ಕಳ ಶ್ರೇಯೋಭಿವೃದ್ಧಿಗೆ ಮಾರ್ಗದರ್ಶನ ನೀಡುವಲ್ಲಿ ಅತ್ಯಂತ ಮಹತ್ವವಾದ ಪಾತ್ರವನ್ನು ಪಾಲಕರಿ ವಹಿಸುತ್ತಾರೆ ಅಂತಹ ತಂದೆ ತಾಯಿಯನ್ನು ಗೌರವಿಸುವ ಕೆಲಸವನ್ನು ಪ್ರತಿಯೊಬ್ಬ ಮಕ್ಕಳು ಮಾಡಬೇಕೆಂದು ಸಮಾಜ ಸೇವಕ ಹಾಗೂ ಉದ್ಯಮಿದಾರರಾದ ನೇತಾಜಿ ನಲವಡೆ ಅವರು ಹೇಳಿದರು.


ಪಟ್ಟಣದ ಪತ್ರಕರ್ತ ಅನೀಲ್ ತೆಲಂಗಿ ಅವರ ತಂದೆ ತಾಯಿಯವರಾದ ಮಲ್ಲಣ್ಣ ಹಾಗೂ ಸಿದ್ದಮ್ಮ ದಂಪತಿಗಳ 50 ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡುತ್ತಿದ್ದ ಅವರು ತಂದೆ ತಾಯಿ ಮಕ್ಕಳ ಜೀವನದ ಭಗ್ಗೆ ಅಂತ್ಯಂತ ಕಾಳಜಿ ಹಾಗೂ ಸುರಕ್ಷಿತ ವಾತಾವರಣ ನೀಡುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತಾರೆ ಮಕ್ಕಳಿಗೆ ಜೀವನದ ಪಾಠ ಹಾಗೂ ಸರಿಯಾದ ಮಾರ್ಗದಲ್ಲಿ ನಡೆಯಲು ಪ್ರೇರೆಪಣೆ ನೀಡುವದರೊಂದಿಗೆ ಮಕ್ಕಳಲ್ಲಿ ಆತ್ಮವಿಶ್ವಾಸ, ಜೀವನದಲ್ಲಿ ಯಶಸ್ವಿಯಾಗಲು ಕಾರಣೀಬೂತರಾಗಿ ಮಕ್ಕಳ ಭವಿಷ್ಯವನ್ನು ರೂಪಿಸುವಲ್ಲಿ ತಂದೆ ತಾಯಿಯ ಕೆಲಸ ಮರೆಯಲಾರದಂತಹದ್ದು ಅಂತಹ ತಂದೆ ತಾಯಿಯ ತ್ಯಾಗ, ಪ್ರೀತಿ, ಮಾರ್ಗದರ್ಶನವಿಲ್ಲದೇ ಯಾವ ಮಕ್ಕಳೂ ಸಮಾಜದಲ್ಲಿ ಬೆಳೆಯಲು ಸಾಧ್ಯವಿಲ್ಲ ಅವರ ಮಹತ್ವವನ್ನು ಅರಿತು ಅವರನ್ನು ಗೌರವಿಸುವುದು ಪ್ರತಿಯೊಬ್ಬ ಮಕ್ಕಳ ಕರ್ತವ್ಯವಾಗಿದೆ ಎಂದರು.

ಇನ್ನೋರ್ವ ಸಮಾಜ ಸೇವಕ ಹಾಗೂ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷರಾದ ರಾಜಶೇಖರ ಮ್ಯಾಗೇರಿ ಅವರು ಮಾತನಾಡಿ ತಂದೆ ತಾಯಿ ಮಕ್ಕಳ ಸಂತೋಷಕ್ಕಾಗಿ ಎಲ್ಲವನ್ನು ತ್ಯಾಗಮಾಡಲು ಸಿದ್ದರಿರುತ್ತಾರೆ ಮಕ್ಕಳಿಗೆ ಸರಿಯಾದ ಹಾದಿಯಲ್ಲಿ ನಡೆಯಲು ಹಾಗೂ ಮಕ್ಕಳ ಬೆಳವಣಿಗೆಗಾಗಿ ಶ್ರಮಿಸಿ ಒಳ್ಳೆಯ ಮಾರ್ಗದರ್ಶನ ನೀಡುವಲ್ಲಿ ಮುಂದಾಗುತ್ತಾರೆ ಅಂತಹ ತಂದೆ ತಾಯಿಯ ಪ್ರೀತಿ ವಾತ್ಸಲ್ಯಕ್ಕೆ ಮಕ್ಕಳು ಗೌರವವನ್ನು ನೀಡುತ್ತಾ ಅವರ ತ್ಯಾಗ ಶ್ರಮವನ್ನು ಎಂದಿಗೂ ಮರೆಯಬಾರದು ಎಂದು ಹೇಳಿದರಲ್ಲದೇ ನಮ್ಮ ಭಾರತದಲ್ಲಿ ತಂದೆ ತಾಯಿಗೆ ದೇವರ ಸ್ಥಾನವನ್ನು ನೀಡಿ ಪೂಜಿಸಲಾಗುತ್ತದೆ ಅಂತಹ ತಂದೆತಾಯಿಯ ಋಣವನ್ನು ಎಂದಿಗೂ ತೀರಿಸಲು ಅಸಾಧ್ಯವೆಂದು ಹೇಳಿದರು.

ಈ ಸಮಯದಲ್ಲಿ ಎಲ್ಲ ಗೆಳೆಯರ ಬಳಗದ ವತಿಯಿಂದ ಹಿರಿಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಮಯದಲ್ಲಿ ರಾಜು ಬಳ್ಳೊಳ್ಳಿ, ಸಂಗಣ್ಣ ಬಿರಾದಾರ, ಮಾಣಿಕಚಂದ ದಂಡಾವತಿ, ವಿಕ್ರಮ್ ಓಸ್ವಾಲ್, ಪ್ರಕಾಶ ಕೆಂದೂಳಿ, ಶಂಕರ ಕಡಿ, ರವಿ ತೆಲಂಗಿ, ಮಹೇಶ ತೆಲಂಗಿ ಸೇರಿದಂತೆ ಎಲ್ಲ ಹಿರಿಯರು ಭಾಗವಹಿಸಿದ್ದರು.

# ಗ್ರಹಸ್ತಾಶ್ರಮ, ಅಪೇಕ್ಷಿತ ಗುರಿ ಸಾಧಿಸುವ ವಿಧಾನ-ಗುಳೇದಗುಡ್ಡಶ್ರೀ



ತಾಳಿಕೋಟೆ, ಮೋಕ್ಷ ಎನ್ನುವದು ಸಾಧಿಸಬೇಕಾದ ಗುರಿಗಳಲ್ಲಿ ಒಂದಾಗಿದ್ದು ಗ್ರಹಸ್ತಾಶ್ರಮವು ಒಬ್ಬ ವ್ಯಕ್ತಿಯು ತನ್ನ ಅಪೇಕ್ಷಿತ ಗುರಿಯನ್ನು ಸಾದಿಸಲು ಆರಿಸಿಕೊಳ್ಳಬೇಕಾದ ಜೀವನದ ವಿದಾನಗಳಲ್ಲಿ ಒಂದಾಗಿದೆ ಎಂದು ಗುಳೆದಗುಡ್ಡ ಹಾಗೂ ತಾಳಿಕೋಟೆ-ಮೈಲೇಶ್ವರ ಗಚ್ಚಿನಮಠದ ಪೀಠಾಧಿಪತಿಗಳಾದ ಶ್ರೀ ಕಾಶಿನಾಥ ಮಹಾಸ್ವಾಮಿಗಳು ನುಡಿದರು.

ರವಿವಾರರಂದು ಪಟ್ಟಣದ ನಮಾಜಟ್ಟಿ ಹಾಲ್‌ನಲ್ಲಿ ಏರ್ಪಡಿಸಲಾದ ಪುರಸಭಾ ಮಾಜಿ ಸದಸ್ಯ ಇಬ್ರಾಹಿಂ ಮನ್ಸೂರ ಅವರ ಪುತ್ರಿ ಉಮ್ಮೇಆನಿ ಹಾಗೂ ಲಾಳೆಮಶ್ಯಾಕ ವಾಲಿಕಾರ ಅವರ ಪುತ್ರ ನಬಿಸಾಬ ಇವರ ಕುರಿತು ಏರ್ಪಡಿಸಲಾದ ವಿವಾಹ ಮಹೋತ್ಸವದಲ್ಲಿ ಪಾಲ್ಗೊಂಡು ಸನ್ಮಾನ ಸ್ವಿಕರಿಸಿ ಮಾತನಾಡುತ್ತಿದ್ದ ಶ್ರೀಗಳು ಮಾನವನಿಗೆ ಅಗತ್ಯವಾದಂತಹ ಆಶ್ರಮಗಳಲ್ಲಿ ಹುಟ್ಟಿನಿಂದ 25 ವರ್ಷ ಮೊದಲನೆಯ ಭಾಗವಾಗಿದ್ದ ಬ್ರಹ್ಮಚಾರಿ ಆಶ್ರಮದಲ್ಲಿ ಶಿಕ್ಷಣ ತರಬೇತಿ ಮತ್ತು ಸ್ವ ಸಯಂ ಅನ್ನುವದು ಅಲ್ಲದೇ ಇಂದ್ರಿಗಳ ನಿಯಂತ್ರಣದ ಹಾಗೂ ಅಗತ್ಯವಿರುವ ವ್ಯಕ್ತಿತ್ವ ನಿರ್ಮಾಣಕ್ಕೆ ಈ ಆಶ್ರಮ ಮಿಸಲಿಡಲಾಗಿದೆ ಎಂದರು. ಗ್ರಹಸ್ತ ಎನ್ನುವದು ಮಧುವೆ ಮತ್ತು ಕುಟುಂಬದ ಜವಾಬ್ದಾರಿಯನ್ನು ಸ್ವಿಕರಿಸುವದಾಗಿದೆ ವ್ಯಕ್ತಿಯ ಮುಂದಿನ 25 ವರ್ಷ ಇದು ಸೂಚಿಸುವದೇನಂದರೆ ಮಧುವೆಯಾಗುವ ಕಾನೂನು ಬದ್ದ ಆದಾಯಗಳಿಸುವಂತಹ ಮಕ್ಕಳನ್ನು ಬೆಳೆಸುತ್ತಾ ಸಮಾಜ ಸೇವೆಯಲ್ಲಿ ಮನ್ನಡೆಯುವಂತಹದ್ದಾಗಿದೆ ಅಂತಹ ಸಾಮಾಜಿಕ ಕ್ಷೇತ್ರದಲ್ಲಿ ತಮ್ಮದೇ ಆದ-ಂತಹ ಚಾಪು ಮೂಡಿಸಿದಂತಹ ಇಬ್ರಾಹಿಂ ಮನ್ಸೂರ ಅವರು ಜನಮೆಚ್ಚುಗೆಗೆ ಪಾತ್ರರಾಗಿದ್ದಾರೆ ಏರ್ಪಡಿಸಿದಂತಹ ವಿವಾಹದಲ್ಲಿ ಪುತ್ರಿ ಅಳಿಯ ಈ ಜೊಡಿಯು ಒಳ್ಳೆಯ ಜೋಡಿಯಾಗಿದ್ದು ಇಂತಹ ಕಾರ್ಯಕ್ರಮದಲ್ಲಿ ಹಿಂದೂ-ಮುಸ್ಲಿಂ ಬಾಂದವರು ಸೇರಿ ಭಾವೈಕ್ಯತೆ ಸಾರುವಂತಹ ಕಾರ್ಯವನ್ನು ಇಬ್ರಾಹಿಂ ಮನ್ಸೂರ ಅವರು ಮಾಡಿದ್ದಾರೆಂದರು.

ಇನ್ನೋರ್ವ ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ ಶಕೀಲಅಹ್ಮದ ಖಾಜಿ ಅವರು ಮಾತನಾಡಿ ದೇವರು ಸೃಷ್ಟಿಸಿದಂತಹ ಹೆಣ್ಣು ಗಂಡು ಎಂಬುದು ಆದಿ ಕಾಲದಿಂದಲೂ ಬಂದಿದ್ದಾಗಿದೆ ಶಾಂತಿ ಸೌಹಾರ್ದತೆ ಜೀವನದಲ್ಲಿ ಸಂತೋಷದಿಂದ ಯಾವುದೇ ತಪ್ಪು ತಡೆ ಮಾಡದೇ ಒಳ್ಳೆಯ ಸಂಸಾರ ನಡೆಸುವದೇ ಗ್ರಹಸ್ತಾಶ್ರಮದ್ದಾಗಿದೆ ಸಂಸಾರ ಎಂಬುದಲ್ಲಿ ಒಂದು ಒಳ್ಳೆಯ ಕೊಡುಗೆ ಕೊಡಬೇಕು ಸತಿ ಪತಿ ಎಂಬವರು ತಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯಾಬುದ್ದಿ ನೀಡಿ ಮಮತೆ ಪ್ರೀತಿ ನೀಡುತ್ತಾ ಸಮಾಜದ ಉನ್ನತಿಗಾಗಿ ಶ್ರಮಿಸುತ್ತಾ ಜನಮೆಚ್ಚುಗೆಗೆ ಪಾತ್ರರಾಬೇಕೆಂದರು.

ಧಾರ್ಮಿಕ ಮುಖಂಡ ಸೈಯದ ಪಶುಉದ್ದೀನ ಖಾಜಿ, ಕೊಡೇಕಲ್ಲ ದುರದುಂಡೇಶ್ವರ ಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು, ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ವೇ,ಮುರುಘೇಶ ವಿರಕ್ತಮಠ, ಸಿ.ಬಿ.ಅಸ್ಕಿ, ಡಾ.ಪ್ರಭುಗೌಡ ಲಿಂಗದಳ್ಳಿ, ಅಬ್ದುಲ್‌ಗನಿಸಾಬ ಲಾಹೋರಿ, ಮುತ್ತಪ್ಪ ಚಮಲಾಪೂರ, ಪರಶುರಾಮ ತಂಗಡಗಿ, ಲಾಲಹುಸೇನ ಕಂದಗಲ್ಲ, ಹಸನಸಾಬ ಕೊರ್ಕಿ, ಬಿ.ಎಸ್.ಪಾಟೀಲ(ಯಾಳಗಿ), ಸಿದ್ದನಗೌಡ ಪಾಟೀಲ(ನಾವದಗಿ), ಅಲ್ಲಾಬಕ್ಷ ನಮಾಜಕಟ್ಟಿ, ಅಬ್ದುಲ್‌ರಹೇಮಾನ ನಮಾಜಕಟ್ಟಿ, ಪ್ರಭುಗೌಡ ಮದರಕಲ್ಲ, ನಬಿರಸೂಲ ಲಾಹೋರಿ, ಆರ್.ಎಸ್.ಪಾಟೀಲ(ಕೂಚಬಾಳ), ಜಿಪಂ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಅಬುಬಕರ ಲಾಹೋರಿ, ಎಂ.ಎಚ್. ಕೇಂಭಾವಿ, ಎಸ್.ಎನ್.ಡೋಣಿ, ಕೆ.ಎಚ್.ಪಾಟೀಲ(ಮೂಕೀಹಾಳ, ಎಂ.ಕೆ. ಕೇಂಭಾವಿ, ಖಾಜಾಹುಸೇನ ಚೌದ್ರಿ, ಬಾಬುರಾವ್ ಶಿಂಧೆ, ಮಾನಸಿಂಗ್ ಕೊಕಟನೂರ, ಪ್ರಕಾಶ ಹಜೇರಿ, ಎ.ಬಿ.ಕಲಾಲ, ಕೆ.ಆಯ್.ಸಗರ, ಹಸನ ಮನಗೂಳಿ, ನಬಿಸಾಬ ಮಣಿಯಾರ, ಮೊದಲಾದವರು ಉಪಸ್ಥಿತರಿದ್ದು ವಿವಾಹ ಮಹೋತ್ಸವಕ್ಕೆ ಶುಭ ಹಾರೈಸಿದರು.

# ನಮ್ಮ ಸ್ಮಶಾನ ಭೂಮಿ ನಮಗೆ ಸಲ್ಲಬೇಕು; ಶಹಾಪೂರ ಗ್ರಾಮಸ್ಥರಿಂದ ಪಂಚಾಯತಿ ಎದುರು ಪ್ರತಿಭಟನೆ




ಮೋಳೆ;- ಕಳೆದ ಅನೇಕ ದಿನಗಳಿಂದ ವಿವಾದಕ್ಕೆ ಕಾರಣವಾಗಿರುವ ಶಹಾಪೂರ ಸ್ಮಶಾನ ಭೂಮಿ ವಿವಾದ ತಾರಕ್ಕೇರಿದ್ದು, ನಮ್ಮ ಗ್ರಾಮದ ಸ್ಮಶಾನ ಭೂಮಿ ನಮಗೆ ಬೇಕು ಎಂದು ಶಹಾಪೂರ ಗ್ರಾಮಸ್ಥರು ಜುಗೂಳ ಗ್ರಾಮ ಪಂಚಾಯತ್ ಎದುರು ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ದ ಧಿಕ್ಕಾರಗಳನ್ನು ಕೂಗುವ ಮೂಲಕ ತಮ್ಮ ಆಕ್ರೋಶ ವ್ಯಕ್ತ ಪಡಿಸಿದರು.

ಸೋಮವಾರ ದಿ. 16 ರಂದು ಕಾಗವಾಡ ತಾಲೂಕಿನ ಜುಗೂಳ ಗ್ರಾಮದ ಪಂಚಾಯತಿ ವ್ಯಾಪ್ತಿಯ ಶಹಾಪೂರ ಗ್ರಾಮಸ್ಥರು ನಮ್ಮ ಸ್ಮಶಾನ ಭೂಮಿ ನಮ್ಮ ಗ್ರಾಮಕ್ಕೆ ಸೇರಬೇಕೆಂದು ಪಂಚಾಯತಿ ಎದುರು ಪ್ರತಿಭಟನೆ ನಡೆಸಿದರು.

ಬೆಳಿಗ್ಗೆ ಶಹಾಪೂರದಿಂದ ಜುಗಳ ಗೃಆಮ ಪಂಚಾಯತಿಯವರೆಗೆ ಅಧಿಕಾರಿಗಳ ವಿರುದ್ದ ಧಿಕ್ಕಾರಗಳನ್ನು ಕೂಗುತ್ತ ಪ್ರತಿಭಟನೆ ಮೂಲಕ ಗ್ರಾಮ ಪಂಚಾಯತಿ ಎದುರಿಗೆ ಧರಣಿ ಕುಳಿತರು.

ಈ ವೇಳೆ ಗ್ರಾ.ಪಂ. ಸದಸ್ಯ ವಿಜಯ ನಾಯಿಕ ಮಾತನಾಡಿ, 200 ವರ್ಷಗಳ ಹಿಂದೆ ಸಂಕೇಶ್ವರದ ಜಗದ್ದುರುಗಳು ನಮಗೆ ಈ ಜಮೀನನ್ನು ದಾನ ನೀಡಿದ್ದು, ಲಿಂಗಾಯತ ಸ್ಮಶಾನ ಭೂಮಿಯಾಗಿದ್ದು, ಅದು ಕೇವಲ ಶಹಾಪೂರ ಗ್ರಾಮಸ್ಥರಿಗೆ ಸೇ-ರಿದೆ. ಅದರಲ್ಲಿ ಜುಗೂಳ ಗ್ರಾಮಸ್ಥರಿಗೆ ಯಾವುದೇ ಅಧಿಕಾರ ಇರುವುದಿಲ್ಲ. ಅಷ್ಟಾಗಿಯೂ ಜುಗೂಳ ಗ್ರಾಮದ ಜನರಿಗೆ ಇಲ್ಲಿಯ ವರೆಗೆ ಸಹಕಾರ ನೀಡಿ, ಶವಸಂಸ್ಕಾರಕ್ಕೆ ಅನುವು ಮಾಡಿಕೊಟ್ಟಿದ್ದೇವು.ಆದ-ರೆ ಈಗ ಏಕಾಏಕಿಯಾಗಿ ರಾಜಕೀಯ ಒತ್ತಡಕ್ಕೆ ಮಣಿದು ನಮಗೆ ಸೇರಿದ ಸ್ಮಶಾನ ಭೂಮಿಯನ್ನು ಜುಗೂಳ ಗ್ರಾಮಸ್ಥರಿಗೆ ನೀಡುವ ಹುನ್ನಾರ ಮಾಡಿ, ನಾವು ಹಾಕಿರುವ ತಂತಿ ಬೇಲಿಯನ್ನು ಪೋಲಿಸರ ರಕ್ಷಣೆಯಲ್ಲಿ ತೆರವುಗೊಳಿಸಿದ್ದಾರೆ. ಅದನ್ನು ಪ್ರಶ್ನಿಸಲು ಹೋದರೆ ನಮಗೆ ಬೆದರಿಕೆ ನೀಡುತ್ತಿದ್ದಾರೆ. ಆದ್ದರಿಂದ ನಮ್ಮ ಗ್ರಾಮಕ್ಕೆ ಸೇರಿದ ಸ್ಮಶಾನ ಭೂಮಿ ನಮಗೆ ಸೇರಬೇಕು. ಅದು ಸರ್ಕಾರಿ ಜಾಗೆ ಅಲ್ಲ ಇದನ್ನು ಅಧಿಕಾರಿಗಳು ಅರ್ಥಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು. ಮತ್ತು ನಮ್ಮ ಸಮಸ್ಯೆಗೆ ಕೂಡಲೇ ಸ್ಪಂದಿಸದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಕಾಗವಾಡ ತಹಸೀಲ್ದಾರ ಕಚೇರಿ ಎದುರು ಉಗ್ರ ಹೋರಾಟದ ಎಚ್ಚರಿಕೆ ನೀಡಿದರು.

ಸ್ಥಳಕ್ಕೆ ತಾ.ಪಂ.ಇಓ ವೀರಣ್ಣ ವಾಲಿ,ಉಪತಹಶೀಲ್ದಾರ ರಶ್ಮಿ ಜಕಾತೆ, ಉಪತಹಶೀಲ್ದಾರ ಅಣ್ಣಾಸಾಬ ಕೋರೆ, ಪಿಡಿಓ ಶೈಲಶ್ರೀ ಬಜಂತ್ರಿ ಆಗಮಿಸಿ, ಪ್ರತಿಭಟನಾಕಾರ ಮನವೊಲಿಸಿ, ತಮ್ಮ ಸಮಸ್ಯೆಯನ್ನು ಶೀಘ್ರವೇ ಪರಿಹರಿಸುವುದಾಗಿ ಭರವಸೆ ನೀಡಿದ್ದರಿಂದ ಪ್ರತಿಭಟನೆ ತಾತ್ಕಾಲಿಕವಾಗಿ ಹಿಂಪಡೆರು.

ಈ ಸಮಯದಲ್ಲಿ ಮುಖಂಡರಾದ ದೀಪಕ ಪಾಟೀಲ, ಮಾದಗೌಡಾ ಪಾಟೀಲ, ಸಂತೋಶ ಪಾಟೀಲ, ಬಬನ ಕಮತೆ, ಪ್ರಮೋದ ಪಾಟೀಲ, ಬಾಬು ಕಾಂಬಳೆ, ತುಕಾರಾಮ ಕಾಂಬಳೆ, ಕಲ್ಲಪ್ಪಾ ದೊಡಮನಿ, ತಾತ್ಯಾಸಾಬ ಜಾಧವ, ರಾಮಚಂದ್ರ ಸನದಿ, ಶ್ರೀಪಾಲ ಸನದಿ, ಸುಶೀಲಾ ಕಾಂಬಳೆ, ಗುಣವಂತಿ ಕಾಂಬಳೆ, ವಿಜಯಾ ಕಾಂಬಳೆ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಪಿಎಸ್‌ಐ ಗಂಗಾ ಬಿರಾದರ ಸೂಕ್ತ ಬಂದೋಬಸ್ತ ಕೈಗೊಂಡಿದ್ದರು.

## ಕೀಟ ಸಂಗ್ರಹಕ ಹುದ್ದೆಗೆ ಗುತ್ತಿಗೆ ಆಧಾರದ ನೇಮಕಕ್ಕೆ ಅರ್ಜಿ ಆಹ್ವಾನ

ಹಾವೇರಿ: : ಕೀಟಜನ್ಯ ರೋಗಗಳ ಸಂಗ್ರಹಣೆಗಾಗಿ ಕೀಟ ಸಂಗ್ರಹಕ ಒಂದು ಹುದ್ದೆಯನ್ನು ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು 40 ವರ್ಷದೊಳಗಿರಬೇಕು, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸೊಳ್ಳೆ/ಕೀಟಗಳ ಸಂಗ್ರಹಣೆಗಾಗಿ ಕಚೇರಿ ಸಮಯ ಹೊರತುಪಡಿಸಿ ಮುಂಜಾನೆ 5 ಗಂಟೆಗೆ ಹಾಗೂ ರಾತ್ರಿ 8 ಗಂಟೆಯ ಸಮಯದಲ್ಲಿ ಕಾರ್ಯ ನಿರ್ವಹಿಸಬೇಕು. ಸಂದರ್ಭಕ್ಕೆ ಅನುಸಾರವಾಗಿ ವಾಸ್ತವ್ಯವಿರಬೇಕು. ತಿಂಗಳಲ್ಲಿ ಕನಿಷ್ಠ 16 ದಿನ ಪ್ರವಾಸ ಮಾಡುವುದು ಕಡ್ಡಾಯವಾಗಿದೆ. ಗಣಕಯಂತ್ರ ನಿರ್ವಹಣೆ ಜ್ಞಾನ ಹೊಂದಿರಬೇಕು. ಎಸ್.ಎಸ್. ಎಲ್.ಸಿ ಮತ್ತು ಪಿ.ಯು.ಸಿ ವಿಜ್ಞಾನದ ಅಂಕಪಟ್ಟಿ, ಕಂಪ್ಯೂಟರ್ ಪ್ರಮಾಣ ಹಾಗೂ ಪತ್ರ ಅನುಭವದ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಆಪ್ ಲೋಡ್ ಮಾಡಬೇಕು.

ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ದಿನಾಂಕ 17-06-2025 ರಿಂದ ದಿನಾಂಕ 24-06-2025ರ ಸಾಯಂಕಾಲ 5 ಗಂಟೆಯೊಳಗಾಗಿ ವೆಬ್‌ಸೈಟ್ **www.haveri.nic.in**ನಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ನೋಡಬಹುದು ಎಂದು ಜಿಲ್ಲಾ ರೋಗವಾಹಕ ರೋಗಗಳ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಾಲಕ-ಕಂ-ನಿರ್ವಾಹಕ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಹಾವೇರಿ ; ವಾಕರಸಾಸಂಸ್ಥೆಯಲ್ಲಿ ಚಾಲಕ-ಕಂ-ನಿರ್ವಾಹಕ (ಪಜಾ-ಹಿಂಬಾಕಿ) ಮತ್ತು ಚಾಲಕ ಹುದ್ದೆಗಳಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಪಟ್ಟಿಯ ಪ್ರವರ್ಗವಾರು ಹಾಗೂ ಶೇಕಡಾವಾರು **(Cut Off)** ವಿವರಗಳನ್ನು ಹಾಗೂ ಕೌನ್ಸಲಿಂಗ್ ನಡೆಯುವ ದಿನಾಂಕಗಳ ವಿವರಗಳನ್ನು ಸಂಸ್ಥೆಯ ವೆಬ್ಸೈಟ್ ವಿಳಾಸ ***"www. nwkrtc.karnataka.gov.in"*** ನಲ್ಲಿ ಪ್ರಕಟಿಸಲಾಗಿದೆ. ಸಂಬಂಧಪಟ್ಟ ಅಭ್ಯರ್ಥಿಗಳು ಕೌನ್ಸಲಿಂಗ್ ಪ್ರಕ್ರಿಯೆಗೆ ತಪ್ಪದೇ ನಿಗದಿತ ದಿನಾಂಕದಂದು ಹಾಜರಾಗಬೇಕು ಎಂದು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಂಥಾಲಯ ಜ್ಞಾನ ನೀಡುವ ದೇಗುಲ;ಶಾಸಕ ರಾಜು ಕಾಗೆ




ಮೋಳೆ ;- ಬೆಳಿಗ್ಗೆ ಎದ್ದು ಬಸ್ ನಿಲ್ದಾಣದಲ್ಲೋ, ಗಾಂಧಿ ಚೌಕಿನಲ್ಲೋ ನಿಂತು ಹರಟೆ ಹೊಡೆಯವುದಕ್ಕಿಂದ ಗ್ರಂಥಾಲಯಗಳಿಗೆ ಹೋಗಿ ಪುಸ್ತಕಗಳನ್ನು ಓದಿದರೆ ನಿಮ್ಮ ಜ್ಞಾನ ವೃದ್ದಿಯಾಗುತ್ತದೆ. ಅದಕ್ಕಾಗಿಯೇ ಐನಾಪುರದಲ್ಲಿ ಹಸಿರು ಗ್ರಂಥಾಲಯವನ್ನು ಪ್ರಾರಂಭಿಸಿದ್ದೇವೆ, ಯುವಕರು ಅದರ ಸದುಪಯೋಗ ಪಡೆದುಕೊಳ್ಳುವಂತೆ ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು, ಸೋಮವಾರ ದಿ. 16 ರಂದು ತಾಲೂಕಿನ ಐನಾಪೂರ ಪಟ್ಟಣದಲ್ಲಿ ಅರಣ್ಯ ಇಲಾಖೆ ಅಭಿವೃದ್ಧಿ ಪಡಿಸಿರುವ ಟ್ರೀ ಪಾರ್ಕನಲ್ಲಿ ಹಸಿರು ಗ್ರಂಥಾಲಯವನ್ನು ಉದ್ಘಾಟಿಸಿ, ಇಲಾಖೆಯವ-ರಿಂದ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದರು.

ರಾಜ್ಯದಲ್ಲಿಯೇ ಪ್ರಥಮ ಹಸಿರು ಗ್ರಂಥಾಲಯ ನಮ್ಮ ಕ್ಷೇತ್ರದಲ್ಲಿ ಪ್ರಾರಂಭಗೊಳ್ಳುತ್ತಿದೆ. ಗ್ರಾಮೀಣ ಭಾಗದಲ್ಲಿ ಪ್ರತಿಭೆಗಳಿಗೆ ಕೊರತೆ ಇಲ್ಲಾ. ಆದರೆ ಅವರನ್ನು ಪ್ರೋತ್ಸಾಹಿಸುವ ಕೆಲಸ ಮಾಡಬೇಕಿದೆ. ಈ ನಿಟ್ಟಿನಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಾದ ಯುಪಿಎಸ್‌ಸಿ, ಕೆಪಿ-ಎಸ್‌ಸಿ, ಸೇನೆ, ಪೋಲಿಸ್ ಸೇರಿದಂತೆ ಎಲ್ಲ ತರಹದ ಸ್ಪರ್ಧಾತ್ಮಕ ಪರೀಕ್ಷೆಗಳ ಅಭ್ಯಾಸ ಮಾಡಲು ನೆರವಾಗುವ ಪುಸ್ತಕಗಳನ್ನು ಇಲ್ಲಿ ಇಡಲಾಗಿದ್ದು, ವಿದ್ಯಾರ್ಥಿಗಳು ಇದರ ಲಾಭ ಪಡೆದುಕೊಳ್ಳಬೇಕೆಂದ ಅವರು ಗ್ರಂಥಾಲಯಗಳು ಅಜ್ಞಾನ ಕಳೆಯುವ ದೇಗುಲಗಳಾಗಿವೆ.ಓದಿನ ಹಸಿವು ನೀಗಿಸುವ ತಾಣವಾದ ಗ್ರಂಥಾಲಯದಲ್ಲಿ ನಿತ್ಯ ಮುರ್‍ನಾಲ್ಕು ಗಂಟೆಗಳಾದರೂ ಓದಿನಲ್ಲಿ ತೊಡಗಿದರೆ ಜ್ಞಾನ ಹೆಚ್ಚಾಗುತ್ತದೆ ಎಂದು ಶಾಸಕ ರಾಜು ಕಾಗೆ ವಿದ್ಯಾರ್ಥಿಗಳಿಗೆ ಹೇಲಿದರು. ಅರಣ್ಯಾಧಿಕಾರಿ ರಾಕೇಶ ಅರ್ಜುನವಾಡ ಮಾತನಾಡಿ, ಈ ಗ್ರಂಥಾಲಯದಲ್ಲಿ ಈಗಾಗಲೇ 350 ಕ್ಕೂ ಹೆಚ್ಚು ಪುಸ್ತಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದ ಪುಸ್ತಕಗಳನ್ನು ಸಂಗ್ರಹಿಸಲಾಗಿದ್ದು, ವಿದ್ಯಾರ್ಥಿಗಳ ಬೇಡಿಕೆಗೆ ಅನುಸಾರವಾಗಿ ಇನ್ನಷ್ಟು ಪುಸ್ತಕಗಳನ್ನು ಹೆಚ್ಚಿಸಲಾಗುವುದು. ಗ್ರಾಮೀಣ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಈ ಸಮಯದಲ್ಲಿ ಅರಣ್ಯಾಧಿಕಾರಿ ರಾಕೇಶ ಅರ್ಜುನವಾಡ ತಾ.ಪಂ. ಇಓ ವೀರಣ್ಣಾ ವಾಲಿ, ಉಪತಹಶೀಲ್ದಾರ ಅಣ್ಣಾಸಾಬ ಕೋರೆ,ಮುಖಂಡರಾದ ಚಮನರಾವರ ಪಾಟೀಲ,ರಾಜುಗೌಡ ಪಾಟೀಲ,ಅರುಣ ಗಾಣಿಗೇರ, ಸಂಜಯ ಭಿರಡಿ, ಡಾ.ಅರವಿಂದರಾವ ಕಾರ್ಚಿ,, ಸುರೇಶ ಅಡಿಶೇರಿ ಸಂಜು ಕುಸನಾಳೆ, ನವೀನ ಗಾಣಿಗೇರ, ಪ್ರಕಾಶ ಕೋರ್ಬು, ವಿಶ್ವನಾಥ ನಾಮದಾರ,ಅನೀಲಕುಮಾರ ಸತ್ತಿ, ಪಾರೀಸ ಬಿಷ್ಟಾಣಿ, ಪ್ರಕಾಶ ಚಿನಗಿ,ಸುನೀಲ ಅವಟಿ, ಕುಮಾರ ಜಯಕರ, ದಾದಾ ಜಂತೆನ್ನವರ,ಪ್ರಕಾಶ ಗಾಣಿಗೇರ, ಅಮಗೌಂಡ ಒಡಿಯರ, ಸಹಕಾಯ ಅರಣ್ಯ ಅಧಿಕಾರಿಗಳಾದ ಎನ್.ಬಿ. ನದಾಫ, ಎ.ಐ. ಧಲಾಯತ, ಆರ್. ಎಂ. ಹೊಸಪೇಟೆ, ಹಣಮಂತಗೌಡಾ ಮಾಡಗಿ, ವಿನೋದ ಮಾಲಗಾಂವೆ, ಸೇರಿದಂತೆ ಅನೇಕರು ಉಪಸ್ಥಿತ-ರಿದ್ದರು.

# ಸಕ್ಕರೆ ಕಾರ್ಖಾನೆ ಮುಂಭಾಗ ತೂಕದ ಯಂತ್ರ ಅಳವಡಿಕೆ ಬಗ್ಗೆ ಪರಿಶೀಲಿಸಿ: ಜಿಲ್ಲಾಧಿಕಾರಿ




ಕಾರವಾರ, ಜೂ.16 (ಕರ್ನಾಟಕ ವಾರ್ತೆ):- ಜಿಲ್ಲೆಯ ಕಬ್ಬು ಬೆಳಗಾರರ ಪ್ರಮುಖ ಬೇಡಿಕೆಯಾದ ಸಕ್ಕರೆ ಕಾರ್ಖಾನೆಯ ಮುಂಭಾಗದಲ್ಲಿ ತೂಕದ ಯಂತ್ರ ಅಳವಡಿಸುವ ಕುರಿತಂತೆ, ಸದ್ರಿ ಸ್ಥಳದ ಪರಿಶೀಲನೆ ನಡೆಸುವಂತೆ ಕಂದಾಯ, ಪೊಲೀಸ್ ಮತ್ತು ಆಹಾರ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇ-ರಿಯಲ್ಲಿ ನಡೆದ, ಜಿಲ್ಲೆಯ ಕಬ್ಬು ಬೆಳಗಾರರ ಮತ್ತು ಸಕ್ಕರೆ ಕಾರ್ಖಾನೆಯ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಳಿಯಾಳದ ಐ.ಇ.ಡಿ ಪ್ಯಾರಿ ಸಕ್ಕರೆ ಕಾರ್ಖಾನೆಯ ಒಳಭಾಗದಲ್ಲಿ ಕಬ್ಬು ತೂಕ ಮಾಡುವ ಯಂತ್ರವನ್ನು ಅಳವಡಿಸಿದ್ದು ಇದ-ರಿಂದಾಗಿ ಕಬ್ಬಿನ ತೂಕದ ಪ್ರಮಾಣದ ಪ್ರತಿ ಬಾರಿ ಗೊಂದಲವಾಗುತ್ತಿದ್ದು, ಇದನ್ನು ಬಗೆಹರಿಸುವ ದೃಷ್ಠಿಯಿಂದ ಕಾರ್ಖಾನೆಯ ಮುಂಭಾಗದಲ್ಲಿ ತೂಕದ ಯಂತ್ರ ಅಳವಡಿಸುವ ಬಗ್ಗೆ ಕಬ್ಬು ಬೆಳೆಗಾರರ ಪ್ರತಿನಿಧಿಗಳು ಕೋರಿದ್ದು, ಈ ಕು-ರಿತಂತೆ ಕಾರ್ಖಾನೆಯ ಮುಂಭಾಗದಲ್ಲಿ ಸೂಕ್ತ ಸ್ಥಳ ಇಲ್ಲವೆಂದು ಕಾರ್ಖಾನೆಯ ಪ್ರತಿನಿಧಿಗಳು ತಿಳಿಸಿದರು. ಈ ಬಗ್ಗೆ ಕಂದಾಯ, ಪೊಲೀಸ್ ಮತ್ತು ಆಹಾರ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡುವಂತೆ ಜಿಲ್ಲಾಧಿಕಾರಿ ತಿಳಿಸಿದರು.

ಹಿಂದಿನ ಸಾಲಿನ ಕಬ್ಬು ಅರೆಯುವ ಹಂಗಾಮು ಪ್ರಾರಂಭದಿಂದ ಮುಕ್ತಾಯದವರೆಗಿನ ಸಕ್ಕರೆ ಇಳುವರಿ ಕುರಿತಂತೆ ವಿವಿಧ ತಂಡಗಳಿಂದ ತಪಾಸಣೆ ನಡೆಸಲಾಗಿದ್ದು ಈ ಕುರಿತಂತೆ ಯಾವುದೂ ದೂರುಗಳು ಬಂದಿಲ್ಲ, ತೂಕ ಮತ್ತು ಅಳತೆ ಇಲಾಖೆ ವತಿಯಿಂದ ಸಕ್ಕರೆ ಕಾರ್ಖಾನೆಯ ತೂಕ ಯಂತ್ರದ ತಪಾಸಣೆ ನಡೆಸಿದ್ದು ಯಾವುದೇ ಉಲ್ಲಂಘನೆ ಕಂಡು ಬಂದಿರುವುದಿಲ್ಲ ಎಂದರು.

ಕಳೆದ ಸಾಲಿನ ಕಬ್ಬಿನ ಉಪ ಉತ್ಪನ್ನಗಳ ಉತ್ಪಾದನೆ ಮತ್ತು ಮಾರಾಟದ ಬಗ್ಗೆ ವಿವರಗಳನ್ನು ಸಲ್ಲಿಸುವಂತೆ ಕಾರ್ಖಾನೆಯ ಪ್ರತಿನಿಧಿಗಳಿಗೆ ಸೂಚಿಸಿದ ಜಿಲ್ಲಾಧಿಕಾ-ರಿಗಳು, ಸಕ್ಕರೆ ಕಾರ್ಖಾನೆಯ ನೀರು ರೈತರ ಜಮೀನುಗಳಿಗೆ ಹೋಗುವ ಕುರಿತಂತೆ ತಪಾಸಣೆ ನಡೆಸಿ ಹಾಗೂ ಪರಿಸರದಲ್ಲಿ ಯಾವುದೇ ಮಾಲಿನ್ಯ ಉಂಟಾದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಪರಿಸರ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.


ಕಬ್ಬು ಕಟಾವಿನ ಕುರಿತ ಲಗಾಣಿಯಲ್ಲಿ ಯಾವುದೇ ದೂರುಗಳು ಬಂದಲ್ಲಿ ಸಂಬಂಧಪಟ್ಟವರ ವಿರುದ್ದ ಸೂಕ್ತ ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಶಾರ್ಟ್ ಸರ್ಕ್ಯೂಟ್ ಮೂಲಕ 43 ಗ್ರಾಮಗಳಲ್ಲಿ 1278 ಟನ್ ಕಬ್ಬು ಹಾಳಾಗಿದ್ದು ಈ ಬಗ್ಗೆ ಹೆಸ್ಕಾಂ ನಿಂದ ನೀಡಿರುವ ಪರಿಹಾರದ ಬಗ್ಗೆ ವರದಿ ಪಡೆಯುವಂತೆ ತಿಳಿಸಿದರು.

ಕಬ್ಬು ಸಾಗಾಣಿಕೆ ವೆಚ್ಚ ಪಾವತಿ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು, ದಾಂಡೇಲಿ ಭಾಗದಲ್ಲಿ ಕಾಡಾನೆಗಳ ಹಾವಳಿ ಅಧಿಕವಾಗಿದ್ದು ಇವುಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವಂತೆ ಹಾಗೂ ಹಾನಿಗೆ ಸೂಕ್ತ ಪರಿಹಾರ ನೀಡುವಂತೆ ಕಬ್ಬು ಬೆಳಗಾರರು ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಉಪ ವಿಭಾಗಾಧಿಕಾರಿ ಕನಿಷ್ಕ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕ ಮಂಜುನಾಥ ರೇವಣಕರ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಕಬ್ಬು ಬೆಳಗಾರರ ಸಂಘದ ಪ್ರತಿನಿಧಿಗಳು ಮತ್ತು ಕಬ್ಬು ಬೆಳಗಾರರು ಉಪಸ್ಥಿತರಿದ್ದರು.

## ದಾಸೋಹಿ ಕೃಷಿ ಪರಿಕರಗಳ ಮಾರಾಟ ಕೇಂದ್ರದ ಉದ್ಘಾಟನೆ

# ಪರಿಸರಾತ್ಮಕ ಕೃಷಿ ಪರಂಪರೆ ಮುನ್ನೆಡೆಸಲು ಎಫ್.ಪಿ.ಓ ಮಾಧ್ಯಮವಾಗಬೇಕು-ರೂಪಾ



ಮುದ್ದೇಬಿಹಾಳ : ರಸಗೊಬ್ಬರ, ಬೀಜ ಮತ್ತು ಸಸ್ಯ ಸಂರಕ್ಷಗಳ ಬಳಕೆಯಲ್ಲಿ ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಿ ಉತ್ತಮ ಗುಣಮಟ್ಟದ ಕೃಷಿಪರಿಕರಗಳನ್ನು ಒದಗಿಸುವ ಮೂಲಕ ರೈತರ ಆದಾಯ ಹೆಚ್ಚಿಸುವುದರೊಂದಿಗೆ ಪರಿಸರಾತ್ಮಕ ಕೃಷಿ ಪರಂಪರೆ ಮುನ್ನೆಡೆಸಲು ಎಫ್.ಪಿ.ಓ ಮಾಧ್ಯಮವಾಗಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಎಲ್ ರೂಪಾ ಹೇಳಿದರು.

ಇಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವಾಣಿಜ್ಯ ಮಳಿಗೆಗಳ ಮುಂಬಾಗದಲ್ಲಿ ಏರ್ಪಡಿಸಲಾಗಿದ್ದ ದಾಸೋಹಿ ರೈತ ಉತ್ಪಾದಕ ಕಂಪನಿಯ ವತಿಯಿಂದ ಸ್ಥಾಪಿಸಲಾದ ದಾಸೋಹಿ ಕೃಷಿ ಪರಿಕರಗಳ ಮಾರಾಟ ಕೇಂದ್ರದ ಪ್ರಾರಂಭೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು ಕೃಷಿ ವಿಜ್ಞಾನ ಆಧರಿತ ಸಮಗ್ರ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಸುಸ್ಥಿರ ಬದುಕು ಕಟ್ಟಿಕೊಳ್ಳಲು ರೈತರ ನೆರವಿಗೆ ಧಾವಿಸುವ ರೈತ ಉತ್ಪಾದಕ ಕಂಪನಿಗಳಿಗೆ ಇಲಾಖೆಯಿಂದ ಎಲ್ಲ ರೀತಿಯ ಸಹಕಾರ ನೀಡಲಾಗುವುದೆಂದರು.

ಮುಖ್ಯ ಅತಿಥಿಯಾಗಿದ್ದ ಕೃಷಿ ಇಲಾಖೆಯ ಉಪ ನಿರ್ದೇಶಕ ಪ್ರಕಾಶ ಚವ್ಹಾಣ ಮಾತನಾಡಿ ಸದಸ್ಯ ರೈತರ ಅಗತ್ಯತೆಗಳಿಗೆ ಅನುಗುಣವಾಗಿ ಗುಣಮಟ್ಟದ ಸೇವೆಗಳನ್ನು ನೀಡಲು ಸಮಂಜಸವಾದ ಮತ್ತು ಕಾರ್ಯಸಾಧ್ಯತೆಯಿಂದ ಕೂಡಿದ ವ್ಯವಹಾರ ಮಾದರಿಗಳನ್ನು ರೂಪಿಸಿ ಯಶಸ್ವಿಯಾಗಿ ಮುನ್ನೆಡೆಸುತ್ತಿರುವ ದಾಸೋಹಿ ರೈತ ಉತ್ಪಾದಕ ಕಂಪನಿ ಇತರರಿಗೆ ಮಾದ-ರಿಯಾಗಿದ್ದು ಭವಿಷ್ಯದಲ್ಲಿ ರೈತರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಒಂದೇ ಸೂರಿನಡಿ ಸಿಗುವಂತಾಗಲೆಂದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ ಭಾವಿಕಟ್ಟಿ ಮಾತನಾಡಿ ನೂತನ ಕೃಷಿ ತಾಂತ್ರಿಕತೆ ಹಾಗೂ ಆದ-ನಿಕ ಸೌಲಭ್ಯಗಳನ್ನು ರೈತರ ಕ್ಷೇತ್ರಗಳಿಗೆ ತಲುಪಿಸುವ ಜವಾಬ್ದಾರಿಯನ್ನು ಹೊತ್ತು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ದಾಸೋಹಿ ಎಫ್.ಪಿ.ಓದೊಂದಿಗೆ ಇಲಾಖೆ ಸಹವರ್ತಿಯಾಗಿ ಕಾರ್ಯನಿರ್ವಹಿಸಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ದಾಸೋಹಿ ಒಕ್ಕೂಟ ರೈತ ಉತ್ಪಾದಕ ಕಂಪನಿ ಅಧ್ಯಕ್ಷ ಅರವಿಂದ ಕೊಪ್ಪ ಮಾತನಾಡಿ ಕೃಷಿ ವೆಚ್ಚ ತಗ್ಗಿಸುವ, ಇಳುವರಿಯನ್ನು ಅಧಿಕಗೊಳಿಸುವ ಮತ್ತು ವಿಕಸಿತ ಸುಸ್ಥಿರಗೊಳಿಸುವ ಬದ್ಧತೆಯೊಂದಿಗೆ ಕ್ರಮಬದ್ಧ ಹೆಜ್ಜೆಗಳನ್ನಿಡಲು ಸಂಕಲ್ಪಿತರಾಗಿ ಮುಂಬರುವ ದಿನಗಳಲ್ಲಿ ಸದಸ್ಯ ರೈತರ ಸಾಮಾಜಿಕ ಮತ್ತು ಆರ್ಥಿಕ ಮಟ್ಟಗಳನ್ನು ಉನ್ನತೀಕರಿಸಲು ಬೇಕಿರುವ ಹಲವು ಯೋಜನೆಗಳನ್ನು ಆದ್ಯತೆ ಮೇರೆಗೆ ಅನುಷ್ಠಾನ ಗೊಳಿಸಲಾಗುತ್ತಿದೆ ಎಂದರು.

ವೇದಿಕೆಯ ಮೇಲೆ ತಾಲೂಕಾ ಜಂಗಮ ಸಮಾಜದ ಅಧ್ಯಕ್ಷ ದಾನಯ್ಯ ಹಿರೇಮಠ, ವೇ. ಶರಣಯ್ಯ ಹಿರೇಮಠ, ಮಹದೇವಯ್ಯ, ವ್ಯವಸ್ಥಾಪಕ ನಿರ್ದೇಶಕಿ ರಶ್ಮಿ ಕೊಪ್ಪ, ಕೃಷಿ ಅಧಿಕಾರಿ ಸೋಮನಗೌಡ ಬಿರಾದಾರ, ಎ.ಪಿ.ಎಂ.ಸಿ ನಿವೃತ್ತ ಅಧಿಕಾರಿ ಜಿ.ಎಂ ಯಡವಣ್ಣವರ, ನಿವೃತ್ತ ಉಪ ತಹಸೀಲ್ದಾರ ಆರ್.ಬಿ ಸಜ್ಜನ, ದಾಸೋಹಿ ಎಫ್.ಪಿ.ಓ ನಿರ್ದೇಶಕರಾದ ಕಲ್ಲಣ್ಣ ಪ್ಯಾಟಿ, ಆನಂದ ಸೂಳಿಭಾವಿ, ಸೋಮನಗೌಡ ಬಿರಾದಾರ(ಮಡಿಕೇಶ್ವರ), ಶ್ರೀಶೈಲ ಮೇಟಿ(ಚೊಂಡಿ), ಗೋಲಪ್ಪ ಗಂಗನಗೌಡರ, ಬಸವರಾಜ ಕುಂಟೋಜಿ(ಇಂಗಳಗೇರಿ), ಭೀಮಣ್ಣ ಮಳಗೌಡರ, ಜಗದೀಶ ಪಂಪಣ್ಣವರ, ಕಾಶೀಬಾಯಿ ರಾಂಪೂರ, ಗುರಯ್ಯ ಮುದ್ದನೂರಮಠ, ರವೀಂದ್ರ ಕೋಳೂರ ಉಪಸ್ಥಿತರಿದ್ದರು.

ನಿವೃತ್ತ ಮುಖ್ಯ ಶಿಕ್ಷಕ ರವೀಂದ್ರ ರೂಡಗಿ ಸ್ವಾಗತಿಸಿದರು. ಉಪನ್ಯಾಸಕ ಗಿರೀಶ ವಾಗಣಗೇರಿ ನಿರೂಪಿಸಿದರು. ದಾಸೋಹಿ ಎಫ್.ಪಿ.ಓ ನಿರ್ದೇಶಕ ಗುಂಡಪ್ಪ ಬಿರಾದಾರ ವಂದಿಸಿದರು.

# ನಿವೃತ್ತಿ ಶಿಕ್ಷಕರಿಗೆ ಗೌರವಪೂರ್ಣ ಸನ್ಮಾನ



ಇಂಡಿ: ತಾಲೂಕಿನ ಕಪನಿಂಬರಗಿ ಗ್ರಾಮದ ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ನಿವೃತ್ತ ಶಿಕ್ಷಕರ ಸನ್ಮಾನ ಕಾರ್ಯಕ್ರಮ ಜರುಗಿತು.

ಈ ಶಾಲೆಯಲ್ಲಿ 30 ವರ್ಷಗಳ ಕಾಲ ಶಿಕ್ಷಕರಾಗಿ ಅಪಾರ ಸೇವೆ ಸಲ್ಲಿಸಿ, ನಿವೃತ್ತಿ ಹೊಂದಿದ ಶಿಕ್ಷಕ ನಬಿಲಾಲ ಎಂ ಹರನಾಳ ಅವರನ್ನು ಗೌರವಿಸುವ ಭಾವಪೂರ್ಣ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮವು ಗ್ರಾಮ ಪಂಚಾಯತ್ ಅಧ್ಯಕ್ಷರ ಪತಿಯವರಾದ ಶ್ರೀ ಜ್ಞಾನೇಶ್ವರ ಠೋಕೆ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಸ್ಥಳೀಯ ಗಣ್ಯರು, ಪೋಷಕರು, ಸಹಶಿಕ್ಷಕರು ಹಾಗೂ 100ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಶ್ರೀ ಎನ್ ಎಂ ಹರನಾಳರ ಶಿಕ್ಷಣ ಸೇವೆಯನ್ನು ಸ್ಮರಿಸಿ ಪ್ರೀತಿಯಿಂದ ನುಡಿನಮನ ಸಲ್ಲಿಸಿದರು. ಶಾಲಾ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶ್ರೀ ನಬಿಲಾಲ ಎಂ ಹರನಾಳ ಅವರು, "ಶಿಕ್ಷಕನ ಪಾತ್ರ ಕೇವಲ ಪಾಠ ಹೇಳುವದು ಮಾತ್ರವಲ್ಲ, ಬದಲಾಗಿ ವಿದ್ಯಾರ್ಥಿಗಳ ಬದುಕಿನಲ್ಲಿ ಬೆಳಕಿನ ದಾರಿ ತೋ-ರಿಸುವ ದೀಪವಾಗಿದೆ" ಎಂದು ತಮ್ಮ ಅನುಭವವನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಊರಿನ ಗಣ್ಯರಾದ ಶ್ರೀ ಬಿ.ಎನ್.ಮಹಿಷಿ ಯವರು ಮಾತನಾಡಿ ಹರನಾಳ ಸರ್ ಅವರ ನಿಷ್ಠೆ ಮತ್ತು ಕಠಿಣ ಪರಿಶ್ರಮವು ಶಾಲೆಗೆ ಮಾದರಿಯಾಗಿದೆ. ಇಂಥ ಶಿಕ್ಷಕರು ಶಿಕ್ಷಣ ಕ್ಷೇತ್ರದಲ್ಲಿ ದೀಪಸ್ತಂಭರಾಗಿ ಇರುವಂತವರು," ಎಂದು ಹೊಗಳಿದರು.

ಹಳೆಯ ವಿದ್ಯಾರ್ಥಿನಿ ರಕ್ಷಿತಾ ಜಾಧವ ಮತ್ತು ಪ್ರಣಾವತಿ ಕದಂ ಮಾತನಾಡಿ, "ಅವರು ಕಲಿಸಿದ್ದ ಪಾಠಗಳು ಇಂದಿಗೂ ನಮ್ಮೊಂದಿಗೆ ಜೀವಂತವಾಗಿವೆ. ಜೀವನದ ಎಂಥಾ ಘಟ್ಟದಲ್ಲಾದರೂ ಅವರ ಮಾರ್ಗದರ್ಶನ ಮರೆಯಲಾಗದು," ಎಂದು ಭಾವನಾತ್ಮಕವಾಗಿ ಹೇಳಿದರು.

ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಶ್ರೀ ಕೆ.ಜಿ.ರಾಠೋಡರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ವ್ಹಿ ಎಸ್ ನಾಯಿಕ ಶಿಕ್ಷಕರು ವೇದಿಕೆ ಮೇಲೆ ಇರುವ ಅತಿಥಿಗಳನ್ನು ಸ್ವಾಗತಿಸಿದರು. ಮತ್ತು ಹಾಜರಿದ್ದ ಎಲ್ಲರೂ ಕೃತಜ್ಞತೆಯ ನುಡಿಗಳನ್ನು ವ್ಯಕ್ತಪಡಿಸಿದರು. ಈ ಕಾರ್ಯಕ್ರಮವು ಎಲ್ಲರ ಮನಸ್ಸಿಗೆ ಸ್ಪರ್ಶಿಸಿ, ಗುರುಗೌರವದ ನೆನಪಿನ ಕ್ಷಣವಾಗಿ ಉಳಿಯಿತು. ಈ ಕಾರ್ಯಕ್ರಮದಲ್ಲಿ ಊರಿನ ಗಣ್ಯರಾದ ಗಿರೀಶಗೌಡ ಬಿರಾದಾರ,ದಾದಾಸಾಹುಕಾರ ಖಾನಾಪುರ,ಕರಿಯಪ್ಪ ಹೊಸೂರು ಶ್ರೀಮತಿ ಕೆ ಎಸ್ ಮುರಾಳ, ಮುಖ್ಯ ಶಿಕ್ಷಕಿ ಎ ಎನ್ ಬಿರಾದಾರ ಶಿಕ್ಷಕರು,ಧನಗೊಂಡ, ಸಂಗಂ ,ಯಶೋಧಾ ಮೇಡಂ, ಸಂತೋಷ್ ಜಾಧವ ಹಾಗೂ ಗ್ರಾಮ ಪಂಚಾಯತ್ ಸರ್ವ ಸದಸ್ಯರು ಊರಿನ ಗಣ್ಯರು, ಬೇರೆ ಶಾಲೆಯ ಶಿಕ್ಷಕರು, ಬಹಳಷ್ಟು ಜನ ಹಳೆಯ ವಿದ್ಯಾರ್ಥಿಗಳು ಹಾಜರಿದ್ದರು .ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ಸಂತೋಷ್ ಬಿರಾದಾರ ಶಿಕ್ಷಕರು ನಡೆಸಿಕೊಟ್ಟರು. ವಂದನಾರ್ಪಣೆಯನ್ನು ಶ್ರೀ ಎಸ್ ಎಚ್ ಸಿನಖೇಡ ಸರ್ ನೆರವೇರಿಸಿದರು.

## ಬೇಡ ಜಂಗಮ ಮೀಸಲಾತಿಗೆ ತಾರತಮ್ಯ ಬೇಡ-ಅಮ್ಮಣಗಿ



ರಬಕವಿ-ಬನಹಟ್ಟಿ,ಜೂ15: ನ್ಯಾಯಾಲಯದ ಸಹಮತದೊಂದಿಗೆ ರಾಜ್ಯದಲ್ಲಿ ಬೇಡ ಜಂಗಮಕ್ಕೆ ಮೀಸಲಾತಿ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ಕಾರ್ಯ ನಡೆಸಬೇಕು. ಬದಲಾಗಿ ಜಾಗತಿಕ ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಎಸ್.ಎಂ. ಜಾಮದಾರರು ಜಂಗಮರು ಶ್ರೀಮಂತ ಸಮಾಜವೆಂದು ಹೇಳುತ್ತಿರುವದು ತಪ್ಪೆಂದು ರಬಕವಿ-ಬನಹಟ್ಟಿ ಬೇಡಜಂಗಮದ ತಾಲೂಕಾಧ್ಯಕ್ಷ ಎಸ್.ಜಿ. ಅಮ್ಮಣಗಿಮಠ ತಿಳಿಸಿದರು.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಜಂಗಮರು ಭಕ್ತರ ಮನೆಯಲ್ಲಷ್ಟೇ ಬೇಡುತ್ತಾರೆ ಅದೂ ಸ್ವಯಂ ಪಾಕಭಿಕ್ಷೆ ಹಾಗು ಕಜ್ಜಾಯದಲ್ಲಿ ಭಿಕ್ಷೆಯೆಂದು ಎರಡು ಭಿಕ್ಷೆಗಳು ಅವರಲ್ಲಿವೆ ಎನ್ನುವ ಎಸ್.ಎಂ. ಜಾಮದಾರರು ನೈಜ ಪರಿಸ್ಥಿತಿ ಹಾಗು ಅಂದಿನಿಂದ ಇಂದಿನವರೆಗೂ ಅದೇ ಪರಿಸ್ಥಿತಿಯಲ್ಲಿ ರಾಜ್ಯದ ಬೇಡ ಜಂಗಮರು ಮುನ್ನಡೆಯುತ್ತಿದ್ದಾರೆ.

ನೆರೆಯ ರಾಜ್ಯಗಳಲ್ಲಿ ಈಗಾಗಲೇ ಬೇಡ ಜಂಗಮರನ್ನು ಪರಿಸ್ಥಿತಿ ಜಾತಿಗೆ ಗುರ್ತಿಸಿದ್ದಾರೆ. ಶನಿವಾರ ಬೆಂಗಳೂರಿನಲ್ಲಿ ಜರುಗಿದ ಸಭೆಯಲ್ಲಿ ಬೇಡ ಜಂಗಮ ಹೆಸರಿನಲ್ಲಿ ಇಡೀ ದಲಿತ ಸಮುದಾಯವನ್ನು ವಂಚಿಸುತ್ತಿದ್ದಾರೆಂಬ ಹೇಳಿಕೆ ಅಕ್ಷಮ್ಯ. ಅನುಭವಿ ಹಾಗು ಪಾರದರ್ಶಕವಾಗಿ ಸರ್ಕಾರದ ಹಾಗು ಮೀಸಲಾತಿಯ ಕೊಂಡಿಂ-ಮಾಗಿರುವ ಜಾಮದಾರ ಅವರು ಇದೆನ್ನಲ್ಲ ಅರಿತು ಬೇಡ ಜಂಗಮರಿಗೆ ನೈಜ ನ್ಯಾಯ ಒದಗಿಸಬೇಕೆಂದರು.

## ವಿಶ್ವಕರ್ಮ ಜಿಲ್ಲಾಧ್ಯಕ್ಷರಾಗಿ ಅರವಿಂದ ಪತ್ತಾರ



ರಬಕವಿ-ಬನಹಟ್ಟಿ,ಜೂ16: ಬಾಗಲಕೋಟೆ ಜಿಲ್ಲಾ ವಿಶ್ವಕರ್ಮ ಸಮಾಜದ ನೂತನ ಅಧ್ಯಕ್ಷರಾಗಿ ಮತ್ತು ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ನಿರ್ದೇಶಕರಾಗಿ ಬನಹಟ್ಟಿಯ ಉದ್ಯಮಿ ಅರವಿಂದ ಪತ್ತಾರ ಆಯ್ಕೆಯಾಗಿದ್ದಾರೆ. ಈಚೆಗೆ ಬೆಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ವಿಶ್ವಕರ್ಮ ಸಮಾಜದ ಸಭೆಯಲ್ಲಿ ಪತ್ತಾರ ಅವರನ್ನು ಆಯ್ಕೆ ಮಾಡಲಾಯಿತು. ಇವರು ಶಿರಸಿಂಗಿಯ ವಿಶ್ವಕರ್ಮ ವಿಕಾಸ ಸಂಸ್ಥೆಯ ಅಧ್ಯಕ್ಷರಾಗಿಯೂ ಈಗಾಗಲೇ ಸೇವೆ ಸಲ್ಲಿಸುತ್ತಿದ್ದಾರೆ.

### ಡಾ. ಸತ್ಯಾನಂದ ಪಾತ್ರೋಟ ಅವರಿಗೆ 'ಹುಲಗಬಾಳಿ ಶರಣಶ್ರೀ' ಪ್ರಶಸ್ತಿ : ಜುಲೈನಲ್ಲಿ ಪ್ರಶಸ್ತಿ ಪ್ರದಾನ



ರಬಕವಿ-ಬನಹಟ್ಟಿ,ಜೂ16: ಕನ್ನಡ ಸಾಹಿತ್ಯ ಪರಿಷತ್ತು ಬೆಂಗ ಳೂರು, ಜಿಲ್ಲಾ ಘಟಕ ಬಾಗಲಕೋಟೆ, ತಾಲೂಕಾ ಘಟಕ ರಬಕವಿ- ಬನಹಟ್ಟಿ, ವಲಯಗಳು ತೇರದಾಳ, ಮಹಾಲಿಂಗಪುರ ಹಾಗೂ ಬಸವ ಸಂಪದ ಬಳಗ ಬನಹಟ್ಟಿ ಇವರ ಸಂಯುಕ್ತಾಶ್ರಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಆರ್.ಎಸ್. ಹುಲಗಬಾಳಿ ಶರಣಶ್ರೀ ಪ್ರಶಸ್ತಿ ಪ್ರದಾನ ಮತ್ತು ದತ್ತಿನಿಧಿ ಉಪನ್ಯಾಸ ಸಮಾರಂಭವನ್ನು ರಬಕವಿ-ಬನಹಟ್ಟಿ ಸರಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯದಲ್ಲಿ ಜುಲೈ ತಿಂಗಳಿನಲ್ಲಿ ಹಮ್ಮಿಕೊಳ್ಳಲಾಗುವುದೆಂದು ಕಸಾಪ ತಾಲೂಕಾ ಅಧ್ಯಕ್ಷ ಮ.ಕೃ. ಮೇಗಾಡಿ, ಬನಹಟ್ಟಿ ಬಸವ ಸಂಪದ ಬಳಗದ ಅಧ್ಯಕ್ಷ ಕಿರಣ ಶ್ರೀಶೈಲ ಆಳಗಿ ತಿಳಿಸಿದ್ದಾರೆ. ಪತ್ರಿಕೆಯೊಂದಿಗೆ ಮಾತನಾಡಿದ ಅವರು ಬಾಗಲಕೋಟೆಯ ಹಿರಿಯ ಸಾಹಿತಿಗಳು, ಜಾಜಿ ಮಲ್ಲಿಗೆ ಖ್ಯಾತಿ ಕವಿ, ಡಾ. ಸತ್ಯಾನಂದ ಪಾತ್ರೋಟ ಅವ-ರಿಗೆ ಹುಲಗಬಾಳಿ ಶರಣಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದೆಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಬಸವ ಸಂಪದ ಬಳಗದ ಗೌರವಾಧ್ಯಕ್ಷರು, ಹಿರಿಯ ಸಾಹಿತಿ ಮಲ್ಲಿಕಾರ್ಜುನ ಹುಲಗಬಾಳಿ, ತಾಲೂಕಾ ಕಸಾಪ ಮಾಧ್ಯಮ ಕಾರ್ಯದರ್ಶಿ ಮಲ್ಲಿಕಾರ್ಜುನ ತುಂಗಳ, ಗೌರವ ಕಾರ್ಯದರ್ಶಿ ಶ್ರೀಶೈಲ ಬುರ್ಲಿ, ಸಂಘಟನಾ ಕಾರ್ಯದರ್ಶಿ ಈರಣ್ಣ ಗಣಮುಖಿ, ಶರತ್ ಜಂಬಗಿ ಇದ್ದರು.

# ಅತಿಕ್ರಮಣ ತೆರವು ಮಾಡಿ ಹದ್ದುಬಸ್ತಿ ಗುರುತಿಸಲು ಅಗ್ರಹ



ಬೈಲಹೊಂಗಲ : ಸಮೀಪದ ಹೊಸೂರ ಗ್ರಾಮದಿಂದ ಬೈಲಹೊಂಗಲ ಪಟ್ಟಣಕ್ಕೆ ಸಂಪರದಕಿಸುವ ಹಳೆಯ ಸಂತಿ ರಸ್ತೆಯ ಅತಿಕ್ರಮಣ ತೆರವುಗೊಳಿಸಿ ರಸ್ತೆಯ ಹದ್ದುಬಸ್ತಿ ಗುರೂತಿಸುವಂತೆ ಆಗ್ರಹಿಸಿ ಗ್ರಾಮದ ರೈತರು ಉಪವಿಭಾಗಧಿಕಾರಿಗಳಿಗೆ ಸೋಮವಾರ ಮನವಿ ಅರ್ಪಿಸಿದರು.

ಮನವಿ ನೀಡುವ ಸಂದರ್ಭದಲ್ಲಿ ಗ್ರಾಮದ ರೈತ ಮುಖಂಡರಾದ ಮಡಿವಾಳಪ್ಪ ಬೂದಿಹಾಳ ಬಸವರಾಜ ದುಗ್ಗಾಣಿ, ಮಹಾದೇವಪ್ಪ ಕಮತಗಿ ಮಾತನಾಡಿ,

ಹೊಸೂರ ಗ್ರಾಮದಿಂದ ಬೈಲಹೊಂಗಲ, ಆನಿಗೋಳ, ವಕ್ಕುಂದ ಗ್ರಾಮಕ್ಕೆ ಹಾಗೂ ನೂರಾರೂ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ಹಳೆ ಬೈಲಹೊಂಗಲ ರಸ್ತೆ (ಸಂತಿರಸ್ತೆ) ಸರಿ ಸುಮಾರು 33ಅಡಿ ಅಗಲ ಹೊಂದಿದ್ದ ರಸ್ತೆ ಇಂದು ಅತಿ-ಕ್ರಮಣವಾಗಿ ವಾಹನ, ಚಕ್ಕಡಿ, ದನಕರುಗಳು ಚಲನವಲನಕ್ಕೆ ಹಾಗೂ ರೈತರ ಕೃಷಿ ಚಟುವಟಿಕೆಗೆ ಅತ್ಯಂತ ತೊಂದರೆಯಾಗಿದೆ. ಈ ರಸ್ತೆ ಬ್ರಿಟಿಷ್ ಸರ್ಕಾರಕ್ಕೆ ಮುಂಚೆ ಇದ್ದು ನಂತರ ಇದಕ್ಕೆ ಪರ್ಯಾಯವಾಗಿ ಬೈಲಹೊಂಗಲ- ಮುನವಳ್ಳಿ ಬೇರೆ ರಸ್ತೆ ನಿರ್ಮಾಣವಾಗಿದ್ದರಿಂದ ಇದು ಆನಿಗೋಳ, ವಕ್ಕುಂದ, ಚಿಕ್ಕೊಪ್ಪ ಹಾಗೂ ಬೈಲಹೊಂಗಲ ಹದ್ದಿಯ ಜಮೀನುಗಳಿಗೆ ಪ್ರಮುಖ ಸಂಪರ್ಕ ರಸ್ತೆಯಾಗಿದೆ. ಈ ರಸ್ತೆಯನ್ನು ಬೈಲಹೊಂಗಲ ಹಳೆ ಸಂತಿ ರಸ್ತೆ ಎಂದು ಕರೆಯಲಾಗುತಿದ್ದು, ಈ ರಸ್ತೆಯ ಬದಿಯಲ್ಲಿರುವ ಕೆಲ ರೈತರು ಈ ರಸ್ತೆಯನ್ನು ಅತಿಕ್ರಮಣ ಮಾಡಿದ್ದರಿಂದ ರಸ್ತೆಯಲ್ಲಿ ಸಂಚಾರಮಾಡಲು ಆಗುತ್ತಿಲ್ಲ. ರಸ್ತೆ ಬದಿಯ ಗಟಾರು ಮುಚ್ಚಿದ್ದರಿಂದ ಮಳೆ ನೀರು ರಸ್ತೆಯ ಮೇಲೆ ಹರಿಯುತ್ತಿದ್ದು ರಸ್ತೆಯ ಮಣ್ಣು ಕೊಚ್ಚಿಕೊಂಡು ಹೋಗಿದ್ದು ಸಂಚಾರಕ್ಕೆ ಅಡಚಣೆಯಾಗಿದೆ.

ಆದ್ದರಿಂದ ರಾಜ್ಯ ಸರ್ಕಾರ ಈಗಾಗಲೆ ಜಮೀನುಗಳಿಗೆ ಹೋಗುವ ರಸ್ತೆಗಳ ಅತಿ-ಕ್ರಮಣ ತೆರುವಿಗೆ ಬಿಗಿಯಾದ ಕಾನೂನು ತಂದಿದ್ದು ಅದರಂತೆ ತಾಲೂಕಾ ಸರ್ವೆಕಛೇರಿಯ ದಾಖಲೆಗಳಲ್ಲಿರುವ ಅಳತೆಯ ಪ್ರಕಾರ ತಕ್ಷಣವಾಗಿ ಈ ರಸ್ತೆಯ ಅಗಲ ಮತ್ತು ನಕ್ಷೆಯ ಪ್ರಕಾರ ಇದು ಇರುವ ಅಸ್ತಿತ್ವವನ್ನು ಗುರುತಿಸಿ ಹದ್ದುಬಸ್ತು ಮಾಡಿ ರಸ್ತೆ ಅಭಿವೃದ್ಧಿಗೊಳಿಸಿ ರೈತರ ಕೃಷಿ ಚಟುವಟಿಕೆಗಳಿಗೆ ಸುಗಮ ದಾರಿ ಮಾಡಿಕೊಡಬೇಕೆಂದರು.

ಮಲ್ಲಿಕಾರ್ಜುನ ಕರಡಿಗುದ್ದಿ, ಶ್ರೀಶೈಲ ಪಣದಿ, ಮಹಾಂತೇಶ ಹುರಕಡ್ಲಿ, ಬಸವರಾಜ ಮೂಗಬಸವ, ನಾಗಪ್ಪ ಹೊಸಮನಿ ಮಾತನಾಡಿ ಈ ರಸ್ತೆಯು ಅಗಲಿಕರಣಕ್ಕೆ ವಿಳಂಬವಾದಲ್ಲಿ ರೈತರ ಕೃಷಿ ಚಟುವಟಿ-ಕೆಗೆ ಅಪಾರ ತೊಂದರೆಯಾಗಿ ರೈತರು ನಷ್ಟ ಅನುಭವಿಸಬೇಕಾಗುತ್ತದೆ. ಅಲ್ಲದೆ ರೈತರು ಅನಿವಾರ್ಯವಾಗಿ ಬಿದಿಗಿಳಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ರೈತರು ತಮಗಾಗೂವ ರಸ್ತೆಯ ತೊಂದರೆಯನ್ನು ಉಪವಿಭಾಗಧಿಕಾರಿಗಳ ಮುಂದೆ ಆಕ್ರೋಶವ್ಯಕ್ತಪಡಿಸಿದರು.

ಮನವಿ ಸ್ವೀಕರಿಸಿದ ಉಪವಿಭಾಗಧಿಕಾರಿಗಳು ಈ ರಸ್ತೆಯ ಸರ್ವೆ ಕಾರ್ಯವನ್ನು ಆದ-ಷ್ಟು ಬೇಗನೆ ಮಾಡಿ ರಸ್ತೆಯ ಅಭಿವೃದ್ಧಿಗೆ ಸಂಬದಿಸಿದ ಇಲಾಖೆಯ ಗಮನಕ್ಕೆ ತಂದು ರೈತರಿಗೆ ಅನಕೂಲ ಮಾಡಿಕೊಡುವದಾಗಿ ಭರವಸೆ ನೀಡಿದರು.

ರೈತ ಮುಖಂಡರಾದ, ಯಲ್ಲಪ್ಪ ಮೂಗಬಸವ, ಈರಪ್ಪ ಚಿಕ್ಕೊಪ್ಪ, ಮಹಾದೇವಪ್ಪ ಗೌಡರ, ಶಿವಬಸಪ್ಪ ಬುಡಶೆಟ್ಟಿ, ಮಹಾದೇವ ಅಪೋಜಿ, ಮೂರಾದಲಿ ಜಮಾದಾರ, ಮಡಿವಾಳಪ್ಪ ಚಿಕ್ಕೊಪ್ಪ, ಮಡಿವಾಳಪ್ಪ ಕಮತಗಿ, ಮಡಿವಾಳಪ್ಪ ಜೋಬಾಳಿ ಸೇರಿದಂತೆ ಮುಂತಾದವರು ಇದ್ದರು.



ರಾಯಬಾಗ: ಪಟ್ಟಣದ ಪ್ರಾದೇಶಿಕ ಅರಣ್ಯ ವಲಯ ವಿಭಾಗಕಚೇರಿಆವರಣದಲ್ಲಿ ಸಾಮಾಜಿಕಅರಣ್ಯ ವಲಯ ಮತ್ತು ಪ್ರಾದೇಶಿಕ ಅರಣ್ಯ ವಲಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನ ಅಂಗವಾಗಿ ಶಾಸಕರಾದ ಡಿ.ಎಮ್.ಐಹೊಳೆ ಹಾಗೂ ಮಹೇಂದ್ರತಮ್ಮಣ್ಣವರಅವರು ಸಸಿ ನೆಟ್ಟು, ನೀರು ಹಾಕಿದರು. ತಹಶೀಲ್ದಾರ ಸುರೇಶ ಮುಂಜೆ, ತಾ.ಪಂ.ಇಒ ಡಾ.ಸುರೇಶಕದ್ದು, ಅರಣ್ಯಾಧಿಕಾರಿಗಳಾದ ಉಮೇಶ ಪ್ರಧಾನಿ, ಶಿವಕುಮಾರ ಡಿ., ಎಇಇ ಆರ್.ಬಿ.ಮನವಡ್ಡರ ಹಾಗೂ ಅರಣ್ಯ ಸಿಬ್ಬಂದಿ ಇದ್ದರು.

# ಜ್ಞಾನದಿಂದ ಜೀವನದಲ್ಲಿ ಸಾರ್ಥಕತೆಯನ್ನು ಕಂಡುಕೊಳ್ಳಲು ಸಾಧ್ಯ



ಯರಗಟ್ಟಿ : ಮನುಷ್ಯ ಆದ-ಧ್ಯಾತ್ಮಿಕ ಜ್ಞಾನದೊಂದಿಗೆ ಜಾತಿ, ಧರ್ಮ ಸಮಾನವಾಗಿ ಕಾಣಬೇಕು. ಧ್ಯಾನ ಮತ್ತು ಜ್ಞಾನದಿಂದ ಜೀವನದಲ್ಲಿ ಸಾರ್ಥಕತೆಯನ್ನು ಕಂಡುಕೊಳ್ಳಲು ಸಾಧ್ಯ ಎಂದು ಭಾಗೋಜ-ಕೊಪ್ಪ ಡಾ. ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.


ಸಮೀಪದ ಕೋ.ಶಿವಾಪೂರ ಗ್ರಾಮದ ಉಜ್ಜಯಿನಿ ಶಾಖಾ ಹಿರೇಮಠ ಆವರಣದಲ್ಲಿ ಆಯೋಜಿಸಿದ್ದ ಜಡೆತಲೆ ಮರುಳಸಿದ್ದ ಶಿವಾಚಾರ್ಯ ಸ್ವಾಮೀಜಿ ಅವರ 21 ದಿನಗಳ ಮೌನ ಅನುಷ್ಠಾನ ಮತ್ತು ಲಿಂಗಪೂಜಾ ಸಮಾರೋಪ ಮಂಗಲ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಂತರ ಸತ್ತಿಗೇರಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿದ ಅವರು ಮೌನ ಹಾಗೂ ತಮ್ಮ ನಡೆ-ನುಡಿ, ತತ್ವ ಆದರ್ಶಗಳಿಂದ ಜಗತ್ತನ್ನೆ ಗೆದ್ದ ಮಹಾ ದಾರ್ಶನಿಕರು. ಲೋಕಕಲ್ಯಾಣಕ್ಕಾಗಿ ಬರೆದ ಗ್ರಂಥ ಇಂದು ಇಡೀ ದೇಶದಲ್ಲಿ ಖ್ಯಾತಿ ಪಡೆದಿದೆ. ಆದ್ದರಿಂದ ಗುರು ತೋ-ರಿದ ಮಾರ್ಗದಲ್ಲಿ ನಡೆದರೆ ಉತ್ತಮ ಫಲ ಪ್ರಾಪ್ತಿಯಾಗಿ ಜೀವನ ಉನ್ನತಿ ಹೊಂದುವುದು ಎಂದು ಹೇಳಿದರು.

ಮನುಷ್ಯ ಇಂದು ಹಣ ಅಧಿಕಾರದ ಬೆನ್ನು ಹತ್ತಿ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾನೆ. ಮಠ ಮಾನ್ಯಗಳು ಇರುವುದು ಸಮಾಜವನ್ನು ಸರಿದಾರಿಗೆ ತರುವುದಕ್ಕೆ ಹೊರತು ಬೇರೆಯದಕ್ಕಲ್ಲ. ಮನೆ ಮತ್ತು ಮಠಗಳಿಗೆ ನಿಕಟವಾದ ಸಂಪರ್ಕ ಬಹಳ ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಇಂಥ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಮಠಾಧೀಶರು ನೀಡುವ ಸಂದೇಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪಾಲಿಸಿದಾಗ ಬದುಕು ಸಾರ್ಥಕತೆ ಪಡೆಯಲಿದೆ ಎಂದರು.

ಈ ವೇಳೆ ಹಣ್ಣಿಕೇರಿ ಶ್ರೀಮಠದ ರೇವಣಸಿದ್ದ ಶಿವಾಚಾರ್ಯ ಸ್ವಾಮಿಜಿ, ಮೊರಬ ಜಡಿಮಠದ ಮಹೇಶ್ವರ ಶಿವಾಚಾರ್ಯ ಸ್ವಾಮಿಜಿ, ಯರಗಟ್ಟಿ ರಾಜರಾಜೇಶ್ವರಿ ಆಶ್ರಮದ ಗಣಪತಿ ಮಹಾರಾಜರು, ಕಪ್ಪರಟ್ಟಿ-ಕಳ್ಳಿಗುದ್ದಿ ಬಸವರಾಜಸ್ವಾಮಿಜಿ, ಬಸಯ್ಯ ಹಿರೇಮಠ, ಮಹಾದೇವಪ್ಪ ಗಡ್ಡಿ, ಮಹಾಂತೇಶ ತೋಟಗಿ, ಶಿವಾನಂದ ಕಟ್ಟಿಮನಿ, ನಾಗಪ್ಪ ಹಂಜಿ, ಶಿಂಗಯ್ಯ ಮಠಪತಿ, ಫಕ್ಕಿರಪ್ಪ ಇಟ್ಟಣಗಿ, ಮಲ್ಲಿಕಾರ್ಜುನ ಅಂಗಡಿ, ಪ್ರಜ್ವಲ ಹಿರೇಮಠ, ಪ್ರವೀಣ ವಿಭೂತಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಇದ್ದರು.

# ಶಾಲಾ ಸಂಸತ್ ಹಾಗು ಸಾಂಸ್ಕ್ರತಿಕ ಕಾರ್ಯಕ್ರಮ




ರಬಕವಿ-ಬನಹಟ್ಟಿ,ಜೂ15: ರಬಕವಿ-ಹೊಸೂರಿನ ಪದ್ಮಾವತಿ ಇಂಟರನ್ಯಾಷನಲ್ ಶಾಲೆಯಲ್ಲಿ ಶಾಲಾ ಸಚಿವ ಸಂಪುಟದ ಪ್ರಮಾನವಚನ ಹಾಗೂ ಶಾಲಾ ಸಾಂಸ್ಕೃತಿಕ ಚಟುವಟಿಕೆಗಳ ಸಮಾರಂಭ ಜರುಗಿತು.

ಹಲವಾರು ಚಟುವಟಿಕೆಗಳ ಮೂಲಕ ಎಲ್ಲರ ಗಮನ ಸೆಳೆಯಿತು. ಶಾಲೆಯ ನಿಯಮಗಳಿಗೆ ಅನುಸಾರ ವಿದ್ಯಾರ್ಥಿಗಳ ನಾಲ್ಕು ವಿಭಿನ್ನ ಗುಂಪುಗಳು ಬೇರೆ-ಬೇರೆ ಸಮವಸ್ತ್ರಗಳನ್ನು ಧರಿಸಿ ಸರ್ವರನ್ನು ಆಕರ್ಷಿಸಿದರು. ನಂತರ ಬಂದ ಅತಿಥಿಗಳಿಂದ ಹಾಗೂ ಪ್ರಾಚಾರ್ಯರಿಂದ ಪ್ರತಿಜ್ಞಾ ಸ್ವೀಕರಿಸಿದರು. ಅತಿಥಿಗಳಾಗಿ ಆಗಮಿಸಿದ ವಿನೋದ ಪತ್ತಾರ ರವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಶಾಲೆಯ ನಿಯಮಗಳ ಪಾಲನೆ ಹಾಗೂ ಶಿಸ್ತಿನ ಬಗ್ಗೆ ತಿಳಿಹೇಳಿದರು.

ಪ್ರವೀಣ ಹಜಾರೆ, ಆಡಳಿತಾಧಿಕಾರಿಗಳಾದ ಭಾರತಿ ತಾಳಿಕೋಟಿ ಹಾಗೂ ಪ್ರಾಚಾರ್ಯರಾದ ಬಸವರಾಜ ಕಲಾದಗಿ ಯವರು ಉಪಸ್ಥಿತರಿದ್ದರು.

ಸಂಭ್ರಮ ಯರಗಾಣಿ ಮತ್ತು ಕುಮಾರಿ ಸಮೃದ್ಧಿ ಸವದಿ ನಿರೂಪಿಸಿದರು. ಕುಮಾರಿ ಸಿಂಚನಾ ಸತಾನಿ ಹಾಗೂ ಕುಮಾರಿ ಸಿಂಚನಾ ವಸ್ತ್ರದ ಸ್ವಾಗತಿಸಿದರು. ಕುಮಾರಿ ತನ್ವಿ ಹೊರಟ್ಟಿ ವಂದಿಸಿದರು.

****

# ವಿಶ್ವ ಯೋಗ ದಿನಾಚರಣೆಗೆ ಸಿದ್ದತೆ ಕೈಗೊಳ್ಳಿ: ಅಪರ ಜಿಲ್ಲಾಧಿಕಾರಿ

ಕಾರವಾರ, : ಜೂನ್ 21 ರಂದು ನಡೆಯುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಕಾರವಾರದ ಪೊಲೀಸ್ ಕಲ್ಯಾಣ ಮಂಟಪದಲ್ಲಿ ಆಯೋಜಿಸಲು ಎಲ್ಲಾ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳುವಂತೆ ಆಯುಷ್ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ, ಅಂತಾರಾಷ್ಟ್ರೀಯ ಯೋಗ ದಿಚಾರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರದ ಮುನ್ಸೂಚನೆಯಂತೆ ಕೋವಿಡ್ 19 ಮುನ್ನೆಚ್ಚರಿಕೆ ನಿಯಮಗಳನ್ನು ಅನುಸರಿಸಿ ಪೊಲೀಸ್ ಕಲ್ಯಾಣ ಮಂಟಪದಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮ ಆಚರಿಸಬೇಕು, ಜಿಲ್ಲೆಯ ನರ್ಸಿಂಗ್ ವಿದ್ಯಾರ್ಥಿಗಳು, ಎನ್.ಸಿ.ಸಿ. ರೋಟರಿ ಕ್ಲಬ್, ಯೋಗ ತರಬೇತಿ ನೀಡುವ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ನಿಗಧಿತ ಸಂಖ್ಯೆಯ ಸಾರ್ವಜನಿಕರನ್ನು ಒಳಗೊಂಡು ಕಾರ್ಯಕ್ರಮ ಆಯೋಜಿಸುವಂತೆ ಮತ್ತು ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ



ಯೋಗಾಭ್ಯಾಸ ಮಾಡಲು ಅಗತ್ಯ ಪೂರಕ ವ್ಯವಸ್ಥೆಗಳನ್ನು ಕೈಗೊಳ್ಳುವಂತೆ ಹಾಗೂ ತರಬೇತಿ ನೀಡಲು ಯೋಗ ಶಿಕ್ಷಕರನ್ನು ನಿಯೋಜಿಸುವಂತೆ ತಿಳಿಸಿದರು.

ಕೆಮ್ಮು, ನೆಗಡಿ, ಶೀತಜ್ವರದಿಂದ ಬಳಲುತ್ತಿರುವವರು ತಮ್ಮ ಮನೆಯಲ್ಲಿಯೇ ಯೋಗಾಭ್ಯಾಸ ಮಾಡುವಂತೆ ತಿಳಿಸಿದ ಅವರು, ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಮತ್ತು ಸ್ವಯಂ ಸೇವಾ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಮತ್ತು ಸಾರ್ವಜನಿಕರು ತಮ್ಮ ಮನೆಗಳಲ್ಲಿ ಯೋಗಾಭ್ಯಾಸ ಮಾಡುವ ಜಿಲ್ಲೆಯ ಎಲ್ಲಾ ಜನತೆ ವಿಶ್ವ ಯೋಗ ದಿನಾಚರಣೆಯಲ್ಲಿ ಪಾಲ್ಗೊಳಬೇಕು ಎಂದರು.

ನೌಕರರು ತಮ್ಮ ಕೆಲಸದ ಅವಧಿಯಲ್ಲಿನ ಒತ್ತಡವನ್ನು ಕಡಿಮೆ ಮಾಡಿಕೊಳ್ಳಲು ಮತ್ತು ಹೆಚ್ಚಿನ ಉತ್ಸಾಹದಿಂದ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಆಯುಷ್ ಸಚಿವಾಲಯವು ಯೋಗದ 5 ನಿಮಿಷದ ಅವಧಿಯ ಸರಳ ಆಸನಗಳನ್ನು ಪರಿಚಯಿಸಿದ್ದು ಇದರಲ್ಲಿ ಪ್ರಾಣಾಯಾಮ ಮತ್ತು ಧ್ಯಾನದ ಅಭ್ಯಾಸಗಳಿದ್ದು, ಜ-ಃಡಿಜಚಿಞ ಥಿಂರಚಿ ಆಪ್ ಬಳಕೆ ಮಾಡುವ ಮೂಲಕ ಎಲ್ಲಾ ನೌಕರರು ಮತ್ತು ಸಾರ್ವಜನಿಕರು ಇದರ ಪ್ರಯೋಜನ ಪಡೆಯುವಂತೆ ತಿಳಿಸಿದರು.

ಸಭೆಯಲ್ಲಿ ಡಿವೈಎಸ್ಪಿ ಗಿರೀಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀರಜ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಭಾರತಿ, ಜಿಲ್ಲಾ ನೋಡಲ್ ಅಧಿಕಾರಿ ಡಾ. ಜಗದೀಶ್ ಯಾಜಿ, ಆಯುಷ್ ಇಲಾಖೆಯ ಸಹಾಯಕ ಆಡಳಿತಾಧಿಕಾರಿ ಸಂಜು ನಾಯ್ಕ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸ್ವಯಂ ಸೇವಾ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅಶೋಕ ಪಾಟೀಲ ಅವರನ್ನು ಹತ್ಯೆ ಮಾಡಿದ ಆರೋಪಿಗಳ ಕೂಡಲೇ ಬಂಧಿಸಲು ಆಗ್ರಹ



ರಾಯಬಾಗ: ಪಟ್ಟಣದ ವಕೀಲರ ಸಂಘದಕಿರಿಯ ಸದಸ್ಯ ಸಂತೋಷ ಅಶೋಕ ಪಾಟೀಲ ಅವರನ್ನು ಹತ್ಯೆ ಮಾಡಿದ ಆರೋಪಿಗಳನ್ನು ಕೂಡಲೇ ಬಂಧಿಸಿ, ಉನ್ನತತನಿಖೆಗಾಗಿಪ್ರಕರಣವನ್ನುಎಸ್.ಐ.ಟಿ ಗೆ ವರ್ಗಾವಣೆ ಮಾಡಬೇಕೆಂದು ಆಗ್ರಹಿಸಿ ವಕೀಲರ ಸಂಘದ ಸದಸ್ಯರು ಸೋಮವಾರ ಗ್ರೇಡ್-2 ತಹಶೀಲ್ದಾರ ಪರಮಾನಂದ ಮಂಗಸೂಳಿ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಬೆಳಿಗ್ಗೆ ವಕೀಲರ ಸಂಘದ ಸಭಾಭವನದಲ್ಲಿತುರ್ತು ಸಭೆ ನಡೆಸಿ, ವಕೀಲ ಸಂತೋಷ ಪಾಟೀಲ ಹತ್ಯೆಯನ್ನು ಖಂಡಿಸಿ, ನ್ಯಾಯಾಲಯದ ಕಾರ್ಯಕಲಾಪಗಳಿಂದ ಹೊರಗಳಿದು, ನ್ಯಾಯಾಲಯದ ಮುಂದಿರುವರಾಯಬಾಗ-ಕಂಕಣವಾಡಿರಸ್ತೆ ಬಂದ ಮಾಡಿ, ಮಳೆಯಲ್ಲಿಯೇ ಪ್ರತಿಭಟನೆ ನಡೆಸಿದರು.

ಹಿರಿಯ ವಕೀಲರಾದಎಲ್.ಬಿ.ಚೌಗುಲೆ ಅವರು ಮಾತನಾಡಿ, ಏ.29 ರಂದುತಾಲೂಕಿನ ಶಾಹುಪಾರ್ಕ ಹತ್ತಿರ ವಕೀಲ ಸಂತೋಷ ಪಾಟೀಲ ಅವರನ್ನು ಆರೋಪಿಗಳು ಅಪಹರಣಗೊಳಿಸಿದ್ದರು. ಆದ-'ರೆ ಪೋಲೀಸರ ವೈಫಲ್ಯತೆಯಿಂದಅವರನ್ನು ಪತ್ತೆ ಹಚ್ಚಲು ಸಾಧ್ಯವಾಗಿರಲಿಲ್ಲ. ಆದ-'ರೆ ಜೂ.6 ರಂದು ವಕೀಲ ಸಂತೋಷ ಪಾಟೀಲ ಇವರು ಹತ್ಯೆಯಾಗಿರುವುದಾಗಿ ತಿಳಿದು ಬಂದಿದ್ದು, ಜೂ.11 ರಂದುಡಿ-ಎನ್ಎ ಪರೀಕ್ಷೆಯಿಂದದೃಢಪಟ್ಟಿರುತ್ತದೆ. ಕಾರಣ ಹತ್ಯೆಯನ್ನು ಮಾಡಿರುವ ಆರೋಪಿಗಳು ಎಷ್ಟೇ ಪ್ರಭಾವಿಗಳಾಗಿದ್ದರೂ ಕೂಡಅವರನ್ನುಕೂಡಲೇ ಪೋಲೀಸರು ಬಂಧಿಸಬೇಕು ಮತ್ತು ಈ ಪ್ರಕರಣದಲ್ಲಿ ವಕೀಲರೆಪ್ರಮುಖಆರೋಪಿಗಳಾಗಿದ್ದ-ರಿಂದ ಉನ್ನತ ಮಟ್ಟದತನಿಖೆಗಾಗಿ ಈ ಪ್ರಕರಣವನ್ನುಎಸ್.ಐ.ಟಿ ಗೆ ವರ್ಗಾವಣೆ ಮಾಡಬೇಕೆಂದು ಆಗ್ರಹಿಸಿದರು.

ವಕೀಲ ಆರ್.ಎಸ್.ಶಿರಗಾಂವೆ ಮಾತನಾಡಿ, ಹತ್ಯೆಯಾದ ವಕೀಲ ಸಂತೋಷ ಪಾಟೀಲ ಅವರಕುಟುಂಬಕ್ಕೆ ನ್ಯಾಯದೊರಕಬೇಕಾದರೆ ಈ ಪ್ರಕರಣವನ್ನುಎಸ್.ಐ.ಟಿ ಗೆ ವಹಿಸಿ, ಸೂಕ್ತ ಮತ್ತು ನ್ಯಾಯಯುತತನಿಖೆ ನಡೆಸಿ, ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿದರು. ಪ್ರಮುಖ ಆರೋಪಿಗಳನ್ನು ಪೋಲೀಸರು ಬಂಧಿಸುವವರೆಗೆ ಅನಿರ್ದಿಷ್ಟ ಕಾಲ ಹೋರಾಟ ನಡೆಸಲಾಗುವುದು-ಎಂದುಎಚ್ಚರಿಸಿದರು.

ಪ್ರತಿಭಟನೆಯಲ್ಲಿವಕೀಲರ ಸಂಘದಅಧ್ಯಕ್ಷ ಪಿ.ಎಮ್.ದರೂರ, ಉಪಾಧ್ಯಕ್ಷ-ಎಸ್.ವಿ.ಪೂಜಾರಿ, ಕಾರ್ಯದರ್ಶಿ ಎಸ್.ಬಿ.ಬಿರಾದಾರ ಪಾಟೀಲ, ಸಹಕಾರ್ಯದರ್ಶಿ ಬಿ.ಕೆ.ಶಿಂಗಾಡೆ, ಖಜಾಂಜಿಯು.ಎನ್.ಉಮ್ರಾಣೆ, ಹಿರಿಯ ವಕೀಲರಾದ ಎ.ಬಿ.ಮಂಗಸೂಳೆ, ಪಿ.ಎಮ್.ಪಾಟೀಲ, ಆರ್.ಜಿ.ಕುಲಕರ್ಣಿ, ಎಮ್.ಕೆ.ಖೊಂಬಾರೆ, ಎಸ್.ಜಿ.ಉಗಾರೆ, ಆರ್.ಎಚ್.ಗೊಂಡೆ, ಎಸ್.ಕೆ.ರೆಂಟೆ, ಆರ್.ಎಮ್.ಹೆಗಡೆ, ಎಸ್.ಎಸ್.ನಾಯಿಕ, ವಿ.ಎಸ್.ಪೂಜಾರಿ, ಎಸ್.ಬಿ.ಹೊಳ್ಕರ, ಬಿ.ಎನ್.ಬಂಡಗರ, ಎಮ್.ಎಮ್. ಚಿಂಚಲಿಕರ, ಎನ್.ಎಸ್.ಒಡಯರ, ಎಮ್.ಪಿ.ತೇಲಿ, ಎ.ಬಿ.ನಡೋಣಿ, ಬಿ.ಬಿ.ಈಟಿ, ಆರ್.ಬಿ.ಪವಾರ, ಜಿ.ಎಸ್. ಖಿಚಡೆ ಹಾಗೂ ಹಿರಿಯ ಮತ್ತುಕಿರಿಯ ವಕೀಲರು ಭಾಗವಹಿಸಿದ್ದರು.

# ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭ



ಬೆಂಗಳೂರು 16 ಸಮಾಜದ ಅಭಿವೃದ್ಧಿ ಹಾಗೂ ಬಡವ ಹಿಂದುಳಿದ ವರ್ಗಗಳ ಒಳತಿಗಾಗಿ ಪ್ರಾಮಾಣಿಕವಾಗಿ ಕೆಲಸ ಕಾರ್ಯ ಮಾಡುವರನ್ನು ಸಮಾಜದಲ್ಲಿ ಗುರುತಿಸಿ ಪ್ರಶಸ್ತಿ ಸನ್ಮಾನ ಮಾಡಿದರೆ ಮತ್ತಷ್ಟು ಸ್ಫೂರ್ತಿ ನೀಡಿದಂತಾಗುತ್ತ ದೆಂದು ಬೆಂಗಳೂರ್ ಓರಿಯೆಂಟಲ್ ಪೌಂಡೇಶನ್ ಸಂಸ್ಥಾಪಕ ರವಿಕುಮಾರ ಹೇಳಿದರು.

ಅವರು ರವಿವಾರದಂದು ಬೆಂಗಳೂರ ಕನ್ನಡ ಸಾಹಿತ್ಯ ಪರಿಷತ್ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಸರಕಾರದ ಮಾನ್ಯತೆ ಪಡೆದ ಓರಿಯೆಂಟಲ್ ಪೌಂಡೇಶನ್ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕ-ರಿಗೆ ಪ್ರಶಸ್ತಿ ಪ್ರಧಾನ ಸಮಾರಂಭನಲ್ಲಿ ಮಾತನಾಡಿ ಸಮಾಜದಲ್ಲಿ ಸಾಮಾಜಿಕ ಕಳಕಳಿ ಇಟ್ಟುಕೊಂಡು ನೊಂದ ಬೆಂದವರ ಬಾಳಿಗೆ ಬೆಳಕಾಗಿ ನಿಂತರೆ ಪ್ರಶಸ್ತಿ ತಾನಾಗಿ ಒಲಿದು ಬರುತ್ತವೆಂದು ಹೇಳಿದರು.

ಶ್ರೀ ನಿವಾಸ ಬಾಬು ಅಧ್ಯಕ್ಷತೆ ವಹಿಸಿ ಮಾತನಾಡಿ ಸಾಧನೆ ಅನ್ನೋದು ಮಾನವನ ಧರ್ಮ ಸಮಾಜ ಸೇವೆ ಮಾಡೋದನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡುತ್ತಿರುವ ರವಿಕುಮಾರ ಅವರ ಕಾರ್ಯ ನಿಜಕ್ಕೂ ಅಭಿನಂದನೀಯ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಚಲನ ಚಿತ್ರ ಖ್ಯಾತ ನಟಿ ಕಾಮಿನಿದರನ್ ಪುಷ್ಪಲತಾ. ಟಿ ತ್ಯಾಗರಾಜ್. ಡಾ ಮಂಜುಳಾ ಮಹಾದೇವ. ಎಸ್ ಎಲ್ ರವಿ. ಶೋಭಾ ರಾಣಿ. ಗಣೇಶ ಗೌಡಾ. ಪ್ರೇಮಾ ರವಿ.ಗೋಪಾಲ ರೆಡ್ಡಿ . ನಾಗೇಶ ಗೌಡಾ. ಎಂ ಸಿ ಚಂದ್ರಪ್ಪ ಸೇರಿದಂತೆ ಅನೇಕರಿದ್ದರು. ಮುರಿಗೆಪ್ಪ ಬಸಪ್ಪ ಮಾಲಗಾರ.ಸಿದ್ದಪ್ಪ ಬಾಡಗಿ.ಪರಮಾನಂದ ಸಣ್ಣಟ್ಟಿ ಸೇರಿದಂತೆ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಒಟ್ಟು 103 ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸಿದರು..ಕಾರ್ಯಕ್ರಮವನ್ನು ರಾಧಾ ಶ್ಯಾನ್ಬೋಗ್ ನಿರೂಪಿಸಿ, ವಂದಿಸಿದರು.

# ವಿಶ್ವ ರಕ್ತದಾನಿಗಳ ಜಾಥಾ : ರಕ್ತದಾನಕ್ಕೆ ಸಾಟಿ ಯಾವುದೂ ಇಲ್ಲ, ರಕ್ತಕ್ಕೆ ಸಾಟಿ ರಕ್ತವೇ ಆಗಿದೆ. ಪ್ರೋ. ಉಮಾ ಕೋಳಿರವರು



ಗದಗ : ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಶ್ರೀ ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜು ಮುಂಡರಗಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನದ ಜಾಥಾ ಕಾರ್ಯಕ್ರಮ ಜರುಗಿತು.

ಸರಕಾರಿ ಪ್ರಥಮ ದರ್ಜೆ ಕಾಲೇಜು ಮುಂಡರಗಿಯಲ್ಲಿ ಜೂನ್ 16 ರಂದು ಜಾಥಾಗೆ ಚಾಲನೆ ನೀಡಿ ಮಾತನಾಡಿದರು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳಾದ ಡಾ. ಅರುಂಧತಿ ಕೆ ಹಾಗೂ ಕಾಲೇಜಿನ ಪ್ರೋ. ಉಮಾ ಕೋಳಿರವರು ಜಂ-ಟಿಯಾಗಿ ಚಾಲನೆ ಕೊಟ್ಟು ಮಾತನಾಡಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು ರಕ್ತದಾನ ಶ್ರೇಷ್ಠದಾನ, ರಕ್ತದಾನ ಜೀವದಾನ, ರಕ್ತದಾನ ಮಹಾದಾನ ಎನ್ನುವಂತೆ ಎಲ್ಲರೂ ಮೂರು ತಿಂಗಳಿಗೆ ಒಂದು ಸಾರಿ ರಕ್ತದಾನ ಮಾಡಬಹುದು, ರಕ್ತದಾನ ಮಾಡುವುದ-ರಿಂದ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ದೇಹದಲ್ಲಿ ಚೈತನ್ಯ ಬರುವುದು. ಹಾಗಾಗಿ ಎಲ್ಲರೂ ರಕ್ತದಾನ ಮಾಡಿ ರಕ್ತದ ಕೊರತೆಯನ್ನು ನೀಗಿಸುವಲ್ಲಿ ಎಲ್ಲರು ಕೈ ಜೋಡಿಸಬೇಕೆಂದು ಹೇಳಿದರು.

ಮುಂದುವರೆದು ಮಾತನಾಡಿ ರಕ್ತದಾನದಂತೆ ಅಂಗಾಂಗದಾನವು ಮಹತ್ವದಾಗಿದ್ದು, ದಾನಿಗಳ ಸ್ಮರಣೆ ಮಾಡುವುದು ಸ್ತುತ್ಯಾರ್ಹವಾಗಿದೆಯೆಂದರು. ರಕ್ತದಾನ ಮಾಡುವವರು 18 ರಿಂದ 65 ವಯೋಮಾನದವರು ಇರಬೇಕು, ಅವರ ತೂಕ 45 ಕೆ.ಜಿ.ಗಿಂತ ಹೆಚ್ಚಿಗಿರಬೇಕು, ಅವರ ಹಿಮೋಗ್ಲೋಬಿನ್ ಪ್ರಮಾಣ 12.5 ಗಿಂತ ಹೆಚ್ಚಿಗೆ ಇರವವರು ಮಹಿಳೆ ಮತ್ತು ಪುರುಷ ಎಂಬ ಭೇದಬಾವವಿಲ್ಲದೆ ರಕ್ತದಾನ ಮಾಡಬಹುದು ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರೋ. ಉಮಾ ಕೋಳಿರವರು ತಮ್ಮ ಅಧ್ಯಕ್ಷಿಯ ನುಡಿಗಳು ಮಾತನಾಡಿ ರಕ್ತದಾನಕ್ಕೆ ಸಾಟಿ ಯಾವುದೂ ಇಲ್ಲ, ರಕ್ತಕ್ಕೆ ಸಾಟಿ ರಕ್ತವೇ ಆಗಿದೆ. ಎಲ್ಲ ಆರೋಗ್ಯವಂತರು ಹಾಗು ಯುವಕರು ರಕ್ತದಾನ ಮಾಡುವುದರ ಮುಖಾಂತರ ಗರ್ಭಿಣಿ ಮಹಿಳೆಯರಿಗೆ, ರಕ್ತಹೀನತೆ ಇರುವವರಿಗೆ ರಕ್ತದಾನ ಮಾಡುವುದರ ಮುಖಾಂತರ ಮಾದರಿಯಾಗಲು ತಿಳಿಸಿದರು.

ಮುಂದುವರೆದು ಮಾತನಾಡಿ ಎಲ್ಲ ದಾನಗಳಿಗಿಂತಲೂ ರಕ್ತದಾನ ಶ್ರೇಷ್ಠವಾದದ್ದು, ಹಿಂದಿನ ಕಾಲದಲ್ಲಿ ಅನ್ನದಾನ, ನೇತ್ರದಾನ, ಗೋದಾನ, ಭೂದಾನ ಶ್ರೇಷ್ಠವಾಗಿದ್ದವು, ಅವೆಲ್ಲಕ್ಕಿಂತ ರಕ್ತದಾನ ಇಂದಿನ ಶ್ರೇಷ್ಠದಾನವಾಗಿದೆ, ರಕ್ತದಾನದಿಂದ ದಾನಿಯ ದೇಹದಲ್ಲಿ 24 ಗಂಟೆಯೊಳಗಾಗಿ ಹೊಸ ರಕ್ತ ಉತ್ಪತ್ತಿ ಪ್ರಾರಂಭವಾಗುತ್ತದೆ, ರಕ್ತದಾನದಿಂದ ಕೊಬ್ಬಿನಾಂಶವನ್ನು ಕಡಿಮೆ ಮಾಡುತ್ತದೆ, ಹೃದಯ ರೋಗವನ್ನು ಕಡಿಮೆ ಮಾಡುತ್ತದೆ, ಜ್ಞಾಪಕ ಶಕ್ತಿಯನ್ನು ವೃದ್ಧಿಸುತ್ತದೆ, ಇಷ್ಟೇಲ್ಲಾ ಲಾಭಗಳಿರುವುದರಿಂದ ಪ್ರತಿಯೊಬ್ಬ-ರಿಗೂ ರಕ್ತದಾನ ಮಾಡಲು ಕರೆ ನೀಡಿದರು. ಇದಕ್ಕೂ ಮೊದಲು ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ. ಲಕ್ಷ್ಮಣ ಪೂಜಾರ ರವರು ಮಾತನಾಡಿ ರಕ್ತದಾನವು ಸಾಮಾಜಿಕ ಸೇವೆಯಾಗಿದ್ದು, ಸದೃಢ ಯುವಕ ಯುವತಿಯರು, ಸಾರ್ವಜನಿಕರು ಸ್ವ ಇಚ್ಛೆಯಿಂದ ರಕ್ತದಾನ ಮಾಡಬೇಕು ಎಂದು ತಿಳಿಸಿದರು.

ಜಾಥಾ ಕಾರ್ಯಕ್ರಮವು ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಪ್ರಾರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹುಡ್ಕೋ ಕಾಲನಿಯಲ್ಲಿ ರಕ್ತದಾನ ಕುರಿತು ಜಾಗೃತಿ ಮೂಡಿಸಲಾಯಿತು.

ಜಾಥಾವನ್ನು ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮಂಜುಳಾ ಸಜ್ಜನರ ಸ್ವಾಗತಿಸಿದರು ಮತ್ತು ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿರವರುವಂದಿಸಿದರು.

ಜಾಥಾ ಕಾರ್ಯಕ್ರಮದಲ್ಲಿ ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ. ಲಕ್ಷ ?ಮಣ ಪೂಜಾರ, ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿ, ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮಂಜುಳಾ ಸಜ್ಜನರ, ಕಾಲೇಜಿನ ಎನ್.ಎಸ್.ಎಸ್ ಅಧಿಕಾರಿಗಳಾದ ಪ್ರೋ. ಕಾವೇರಿ ಭೋಲಾ ಮತ್ತು ಪ್ರೋ. ತಿಮ್ಮನಾಯಕ ಹಾಗೂ ಇತರೆ ಪ್ರಾಧ್ಯಾಪಕ ವೃಂದದವರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

# ಐವತ್ತನೆಯ ವರ್ಷದ ಸಂಭ್ರಮಾಚರಣೆಗೆ ಚಾಲನೆ



ರಬಕವಿ-ಬನಹಟ್ಟಿ,ಜೂ16: ಐವತ್ತು ವರ್ಷಗಳ ಹಿಂದೆ ಬನಹಟ್ಟಿಯಲ್ಲಿ ಆರಂಭಗೊಂಡ ಪದವಿ ಮಹಾವಿದ್ಯಾಲಯ ರಬಕವಿ-ಬನಹಟ್ಟಿ ಹಾಗೂ ಸುತ್ತ ಮುತ್ತಲಿನ ನಗರ ಮತ್ತು ಗ್ರಾಮೀಣ ಪ್ರದೇಶಗಳ ಬಡ ರೈತ ಮತ್ತು ನೇಕಾರ ಕುಟುಂಬಗಳ ನೂರಾರು ವಿದ್ಯಾರ್ಥಿಗಳಿಗೆ ವರದಾನವಾಗಿದೆ. ಇಂದು ಕಾಲೇಜು ಆರಂಭವಾಗಿ ಐವತ್ತು ವರ್ಷಗಳ ಗತಿಸಿದವು. ಮುಂದಿನ ದಿನಗಳಲ್ಲಿ ಐವತ್ತನೆ ವರ್ಷದ ಸಂಭ್ರಮಚಾರಣೆಯನ್ನು ವಿಶೇಷವಾಗಿ ಹಮ್ಮಿಕೊಳ್ಳಯಲಾಗುವುದು ಎಂದು ಜನತಾ ಶಿಕ್ಷಣ ಸಂಘದ ಕಾರ್ಯಾಧ್ಯಕ್ಷ ಬಸವಂತ ಜಾಡಗೌಡ ತಿಳಿಸಿದರು.

ಅವರು ಸೋಮವಾರ ಇಲ್ಲಿನ ಎಸ್‌ಟಿಸಿ ಕಾಲೇಜಿನ ಆವರಣದಲ್ಲಿರುವ ಜೆಎಸ್ ಸಂಘದ ಸಂಸ್ಥಾಪಕ ತಮ್ಮಣ್ಣಪ್ಪ ಚಿಕ್ಕೋಡಿ ಕಾಲೇಜಿನ ಸುವರ್ಣ ಮಹೋತ್ಸವ ಸಂಭ್ರಮದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಚಾಲನೆ ನೀಡಿದರು.

ಸಂಘದ ಗೌರವ ಕಾರ್ಯದರ್ಶಿ ಶಂಕರ ಸೋರಗಾವಿ ಮಾತನಾಡಿ, ಕನ್ನಡ ನಾಡು ನುಡಿಗಾಗಿ ಹೋರಾಡಿದ ಮಹಾನುಭವಾವ ತಮ್ಮಣ್ಣಪ್ಪ ಚಿಕ್ಕೋಡಿಯವರು ಜೆಎಸ್‌ಎಸ್ ಸಂಘದ ಸಂಸ್ಥಾಪಕರು. ಅವರ ಹೆಸರನ್ನು ಇಲ್ಲಿನ ಪದವಿ ಮಹಾವಿದ್ಯಾಲಯಕ್ಕೆ ಇಡಲಾಗಿದೆ. ಉತ್ತರ ಕರ್ನಾಟಕದಲ್ಲಿಅತ್ಯಂತ ಹಳೆಯದಾದ ಕಾಲೇಜುಗಳಲ್ಲಿ ಎಸ್‌ಟಿಸಿ ಕಾಲೇಜು ಕೂಡಾ ಒಂದಾಗಿದೆ ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ಬಸವರಾಜ ಭದ್ರನವರ, ನಿರ್ದೇಶಕರಾದ ಭೀಮಶಿ ಮಗದುಮ್, ಪಂಡಿತ ಹನಗಂಡಿ, ಮಲ್ಲಿಕಾರ್ಜುನ ಬಾಣಕಾರ, ವಿ. ಆರ್.ಕುಳ್ಳಿ, ಪ್ರಾಚಾರ್ಯ ಜಿ.ಆರ್.ಜುನ್ನಾಯ್ಕರ್, ಪ್ರಕಾಶ ಕೆಂಗನಾಳ, ಮನೋಹರ ಶಿರಹಟ್ಟಿ, ಗೀತಾ ಸಜ್ಜನ, ಎಸ್.ಬಿ. ಉಕ್ಕಲಿ, ಬಸವರಾಜ ತಳವಾರ, ರವಿ ಕುಳ್ಳಿ, ಶಿವು ಇಟ್ನಾಳ, ರತ್ನಾ ಗುಂಡಿ ಸೇರಿದಂತೆ

# ಪಾಳುಬಿದ್ದ ಸರ್ಕಾರಿ ಕಟ್ಟಡ ತೆರವು ಯಾವಾಗ?

ವರದಿ -ಮಲ್ಲಿಕಾರ್ಜುನ ತುಂಗಳ

ರಬಕವಿ-ಬನಹಟ್ಟಿ,ಜೂ15: ಬನಹಟ್ಟಿಯ ಹೃದಯಭಾಗದಲ್ಲಿರುವ ಕಂದಾಯ ಇಲಾಖೆಯ ಪಾಳು ಬಿದ್ದ ಕಟ್ಟಡ ತೆರವುಗೊಳಿಸಬೇಕೆಂದು ಹಲವು ವರ್ಷಗಳಿಂದ ಬೇಡಿಕೆಯಿದ್ದರೂ ಅಧಿಕಾ-ರಿಗಳ ನಿರ್ಲಕ್ಷ್ಯದಿಂದ ಹಾಗೇ ಉಳಿದಿದ್ದು, ಕೂಡಲೇ ತೆರವುಗೊಳಿಸುವಂತೆ ನಾಗರಿಕರು ಒತ್ತಾಯಿಸಿದ್ದಾರೆ.

ಈಗಾಗಲೇ ಗ್ರಂಥಾಲಯವು ಇಲ್ಲಿ ಸೇವೆ ನಿರ್ವಹಿಸುತ್ತಿತ್ತು. ನಂತರದ ದಿನಗಳಲ್ಲಿ ತೀವ್ರ ಶಿಥಿಲಾವಸ್ಥೆ ನಂತರ ಜನವಸತಿಗೆ ಯೋಗ್ಯವಲ್ಲವೆಂದು ಸುಮಾರು 15 ವರ್ಷಗಳೇ ಕಳೆದರೂ ಇಂದಿಗೂ ಕಟ್ಟಡ ತೆರವುಗೊಳಿಸದೆ ತೀವ್ರ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಕೆಂಗಣ್ಣಿಗೆ ಇಲಾಖೆ ಗು-ರಿಯಾಗಿದೆ.

ಮಳೆಗಾಲ ಆರಂಭವಾದರೆ ಸಾಕು, ಕಟ್ಟಡದ ಇನ್ನಷ್ಟು ಶಿಥಿಲಗೊಂಡ ಕಟ್ಟಡ ಮತ್ತಷ್ಟು ಬಿರುಕು ಬಿಡಲು ಕಾರಣವಾಗಿದೆ. ಪ್ರಸಕ್ತ ವರ್ಷವಂತೂ ಮಳೆಗಾಲ ಪ್ರಾರಂಭವಾಗಿದ್ದು, ಮೇಲ್ಛಾವಣಿ ಸಂಪೂರ್ಣ ಕುಸಿದಿದ್ದು, ಶಿಥಿಲವಾಗಿರುವ ಕಟ್ಟಡದ ಗೋಡೆಗಳು ಕುಸಿದು ಬೀಳುವ ಮೊದಲೇ ಕಟ್ಟಡ ತೆರವುಗೊಳಿಸಿ, ಮುಂದೆ ಆಗುವ ಅನಾಹುತ ತಪ್ಪಿಸಬೇಕು. ಈ ಬಗ್ಗೆ ಕಂದಾಯ ಇಲಾಖೆ ಅಧಿಕಾರಿಗಳು ಗಮನ ಹರಿಸಬೇಕೆಂದರು.



ಹೃದಯಭಾಗದಲ್ಲೊಂದು ಗಲೀಜು: ಪಟ್ಟಣದ ಮಧ್ಯ ಭಾಗದ ವರ್ತುಲದಲ್ಲಿಯೇ ಈ ಪಾಳುಬಿದ್ದ ಕಟ್ಟವಿದೆ. ಆಗಾಗ ಇಲ್ಲಿ ಹಾವುಗಳ ದರ್ಶನವೂ ಆಗುತ್ತದೆ. ದಿನಂಪ್ರತಿ ನೂರಾರು ಜನ ಇದೇ ಕಟ್ಟಡದ ಕಟ್ಟೆಯ ಮೇಲೆಯೇ ಕುಳಿತುಕೊಳ್ಳುವ ರೂಢಿ. ನಿರಂತರ ಜನನೀಬಿಡ ಪ್ರದೇಸವಾಗಿರುವ ಇಲ್ಲಿ ಆಕಸ್ಮಿಕವಾಗಿ ಶಿಥಿಲ ಕಟ್ಟಡ ಬಿದ್ದರೆ, ಅಪಾಯವಾಗುವ ಸಂಭವ ಜಾಸ್ತಿ. ತಕ್ಷಣವೇ ಕಟ್ಟಡ ತೆರವುಗೊಳಿಸಬೇಕೆಂದು ಬನಹಟ್ಟಿಯ ಜನತೆಗೆ ಒತ್ತಾಯಿಸಿದ್ದಾರೆ.

> 'ನಗರಸಭೆ ಯೋಜನೆಯಡಿ ಕಟ್ಟಡ ನಿರ್ಮಾಣಕ್ಕೆ ಅವಕಾಶ ಕೇಳಿದ್ದೇವು. ಕಂದಾಯ ಇಲಾಖೆ ಸಹಮತ ದೊರಕದ ಹಿನ್ನಲೆ ತಟಸ್ಥ ಕಾಯ್ದುಕೊಂಡಿದ್ದೇವೆ. ಮುಂದಿನ ದಿನಗಳಲ್ಲಿ ಕಟ್ಟಡಕ್ಕೆ ಸಹಕಾರ ನೀಡಲಾಗುವದು.'
>
> **-ಶ್ರೀಶೈಲ ಬೀಳಗಿ, ಮಾಜಿ ನಗರಾಧ್ಯಕ್ಷ, ನಗರಸಭೆ.**

> 'ದಿನಂಪ್ರತಿ ಜೀವ ಕೈಯಲ್ಲಿ ಹಿಡಿದುಕೊಂಡೇ ಸಾಗಬೇಕಾದ ಅನಿವಾರ್ಯತೆ ಇಲ್ಲಿನ ನಿವಾಸಿಗಳದ್ದು. ಅತ್ಯಂತ ಗಲೀಜು ಪ್ರದೇಶವಾಗಿ ಕಾಣುತ್ತಿರುವ ನಗರದ ಹೃದಯ ಭಾಗದಲ್ಲಿರುವ ಈ ಕಟ್ಟಡ ತೆರವುಗೊಳಿಸಬೇಕು'.-
>
> **-ರಾಜು ಕುಲಕರ್ಣಿ, ಸ್ಥಳೀಯರು.**



**ಯರಗಟ್ಟಿ: ಪಟ್ಟಣದ ಬೀರದೇವರ ದೇವಸ್ಥಾನದಲ್ಲಿ ಆಯೋಜಿಸಿದ್ದ ಕರವೇ ಅಧ್ಯಕ್ಷ ನಾರಾಯಣಗೌಡ ಅವರ ಹುಟ್ಟು ಹಬ್ಬದ ನಿಮಿತ್ಯ ಉಚಿತ ಕಣ್ಣಿನ ತಪಾಸಣಾ ಶಿಬಿರ ಮತ್ತು ಶಸ್ತ್ರಚಿಕಿತ್ಸ ಕಾರ್ಯಕ್ರಮಕ್ಕೆ ಕರವೇ ತಾಲೂಕಾಧ್ಯಕ್ಷ ರಫೀಕ ಡಿ ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಇಮಾಮಸಾಬ ಹುಸೇನನಾಯಕ, ಮಂಜು ಬಾವಿಹಾಳ, ವಿಠ್ಠಲ ಹಾರುಗೋಪ್ಪ, ಈರಣ್ಣ ಕಿಲಾರಿ, ಕೆಂಚಪ್ಪ ಚುಂಚನೂರ, ಶಿದಪ್ಪ ಗೌಳಿ, ಶೇಖರ್ ಕಿಲಾರಿ, ಮಲಿಕ ಚಾಂದಖಾನ್ನವರ, ಮದಾರ ಚಾಂದಖಾನ್ನವರ ಸೇರಿದಂತೆ ನದಾಫ ಹೈಟೆಕ್ ಕಣ್ಣಿನ ಆಸ್ಪತ್ರೆ ವೈದ್ಯರು ಹಾಗೂ ಸಾರ್ವಜನಿಕರು ಇದ್ದರು.**

### ಕಾನೂನು ಸೇವಾ ಪ್ರಾಧಿಕಾರ : ವಿವಿಧ ಹುದ್ದೆಗಳಿಗೆ ಅರ್ಜಿ

ಬಾಗಲಕೋಟ : : ಜಿಲ್ಲಾ ಕಾನೂನು ಸೇವೆಗಳ ಕಾನೂನು ನೆರವು ರಕ್ಷಣಾ ಪರಿಷತ್ ವ್ಯವಸ್ಥೆಯಡಿ ಕಾನೂನು ಮತ್ತು ನೆರವು ರಕ್ಷಣಾ ಸಲಹೆಗಾರ, ಉಪ ಮುಖ್ಯ ಕಾನೂನು ನೆರವು ರಕ್ಷಣಾ ಸಲಹೆಗಾರ ಮತ್ತು ಸಹಾಯಕ ಕಾನೂನು ನೆರವು ರಕ್ಷಣಾ ಸಲಹೆಗಾರರ ತಲಾ ಒಂದು ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಕೊನೆಯ ದಿನ ಜೂನ್ 19 ಆಗಿದ್ದು, ಮಾಸಿಕ ವೇತನದ ಮೇಲೆ ಎರಡು ವರ್ಷಗಳ ಕಾಲ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತಿದೆ. ಕಾನೂನು ಮತ್ತು ನೆರವು ರಕ್ಷಣಾ ಸಲಹೆಗಾರ ಹುದ್ದೆಗೆ 70 ಸಾವಿರ ರೂ, ಉಪ ಮುಖ್ಯ ಕಾನೂನು ನೆರವು ರಕ್ಷಣಾ ಸಲಹೆಗಾರರ ಹುದ್ದೆಗೆ 45 ಸಾವಿರ ರೂ, ಹಾಗೂ ಸಹಾಯಕ ಕಾನೂನು ನೆರವು ರಕ್ಷಣಾ ಸಲಹೆಗಾರರ ಹುದ್ದೆಗೆ 30 ಸಾವಿರ ರೂ. ಗಳ ಮಾಸಿಕವಾಗಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಬಾಗಲಕೋಟೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾ-ರಿಂದ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಅಂಗಡಿಗಳ ಮುಂದೆ ಪಂಚಗ್ಯಾರಂಟಿ ಯೋಜನೆಗಳ ಮಾಹಿತಿ ಒಳಗೊಂಡ ಬ್ಯಾನರ್ ಅಳವಡಿಸಬೇಕು - ಬಿ.ಬಿ.ಅಸೂಟಿ

ಗದಗ ; ಜಿಲ್ಲೆಯ ಎಲ್ಲ ಪಡಿತರ ಅಂಗಡಿಗಳ ಮುಂದೆ ರಾಜ್ಯ ಸರ್ಕಾರದ ಪಂಚಗ್ಯಾರಂಟಿ ಯೋಜನೆಗಳ ಮಾಹಿತಿ ಒಳಗೊಂಡಿರುವ ಬ್ಯಾನರ್ ಅಳವಡಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಲ್ಲಿ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕು. ಅನ್ನಭಾಗ್ಯದ ಅಕ್ಕಿಗಳು ಕಾಳ ಸಂತೆಯಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವ ಕು-ರಿತು ದೂರು ಬರುತ್ತಿರುವ ಹಿನ್ನೆಲೆಯಲ್ಲಿ ಇಂತಹ ಅವ್ಯವಹಾರಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಆಹಾರ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ನಗರದಲ್ಲಿನ ಹಳೇ ಬಸ್ ನಿಲ್ದಾಣ ಹಾಗೂ ಹೊಸ ಬಸ್ ನಿಲ್ದಾಣಗಳ ಆವರಣದ ಸ್ವಚ್ಛತೆಯಿಂದ ಇರುವಂತೆ ನೋಡಿಕೊಳ್ಳಬೇಕು.



ಅಂಗವಿಕಲರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥಿವಾಗಿ ಇರುವಂತೆ ಕ್ರಮ ವಹಿಸಬೇಕು. ಶಿಶು ಪಾಲನಾ ಕೇಂದ್ರ ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಮಹಿಳೆಯರಿಗೆ ವಿಶ್ರಾಂತಿ ಕೊಠಡಿಯ ಸ್ವಚ್ಛತೆ ಕುರಿತು ಗಮನಹ-ರಿಸಬೇಕು. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿನ ಬಸ್ ಸ್ಟ್ಯಾಂಡ್‌ಗಳು ಸ್ವಚ್ಛವಾಗಿರುವಂತೆ ಹಾಗೂ ಮೂಲಭೂತ ಸೌಲಭ್ಯ ಇರುವಂತೆ ಗಮನ ಹರಿಸಬೇಕು. ಈ ಕುರಿತು ಸಮಿತಿಯ ಸದಸ್ಯರುಗಳು ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸುವರು. ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಗಳನ್ನು ತಾಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದಲ್ಲಿಯೂ ಜರುಗಿಸಬೇಕು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಶೀಘ್ರವಾಗಿ ತಲುಪುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಮುಖ್ಯಸ್ಥರು ಅವುಗಳ ಸಮರ್ಪಕ ಅನುಷ್ಠಾನದ ಕುರಿತು ಪರಾಮರ್ಶೆ ನಡೆಸಬೇಕು. ಅರ್ಹರಿಗೆ ಯೋಜನೆಗಳ ಸೌಲಭ್ಯ ನಿಗದಿತ ಅವಧಿಯೊಳಗೆ ಲಭ್ಯವಾಗುವಂತೆ ಕ್ರಮ ವಹಿಸಲು ಸೂಚಿಸಿದ ಅವರು ಸರ್ಕಾರದ ಸೌಲಭ್ಯಗಳ ಮೂಲಕ ಜನಸಾಮಾನ್ಯರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಲಿ ಎಂದರು.

ಗದಗ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನದ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರ ಮಾರ್ಗದರ್ಶನದ ಮೇರೆಗೆ ಗದಗ ತಾಲೂಕಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮೀ ಯೋಜನೆಯನ್ನು ಅರ್ಹರೆಲ್ಲ-ರಿಗೂ ತಲುಪಿಸುವಲ್ಲಿ ಸಫಲರಾಗಿದ್ದೇವೆ. ಅದೇ ರೀತಿಯ ಇನ್ನುಳಿದ ಯೋಜನೆಗಳ ಸಂಪೂರ್ಣ ಪ್ರಗತಿಗೆ ಪ್ರಯತ್ನಿಸಲಾಗುತ್ತಿದೆ. ಅಧಿಕಾ-ರಿಗಳೆಲ್ಲರೂ ಈ ನಿಟ್ಟಿನಲ್ಲಿ ಕಾರ್ಯನಿರ್ವಹಣೆಗೆ ಮುಂದಾಗಬೇಕೆಂದರು.

ಪಂಚ ಗ್ಯಾರಂಟಿ ಯೋಜನೆಗಳ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು.

ಗೃಹ ಲಕ್ಷ್ಮೀ ಯೋಜನೆಯಡಿ ಏಪ್ರಿಲ್ 2025 ರ ಅಂತ್ಯದವರೆಗೆ 2,55,916 ನೊಂದಣಿಯಾದ ಅರ್ಜಿಗಳ ಪೈಕಿ 2,50,421 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ವಾಕರಸಾಸಂಸ್ಥೆಯಿಂದ ಯೋಜನೆ ಆರಂಭವಾದಾಗಿನಿಂದ ಏಪ್ರಿಲ್ 2025 ರವರೆಗೆ 1841.55 ಲಕ್ಷ ಪ್ರಯಾಣಿಕರು ಪ್ರಯಾಣಿಸಿದ್ದಾರೆ. 114660.87 ಲಕ್ಷ ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಡಿಸೆಂಬರ್ 2024 ರ ಅಂತ್ಯದವರೆಗೆ 234190 ಪಡಿತರ ಚೀಟಿದಾರರಿಗೆ ಡಿಬಿಟಿ ಮೂಲಕ 12,80,34,140 ರೂ. ಹಣ ಸಂದಾಯ ಮಾಡಲಾಗಿದೆ.

ಯುವನಿಧಿ ಯೋಜನೆಯಡಿ ಯೋಜನೆ ಆರಂಭದಿಂದ ಮೇ 2025 ರವರೆಗೆ 3807 ಅರ್ಹ ಫಲಾನುಭವಿಗಳಿಗೆ 7,55,19,000 ರೂ. ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ.

ಗೃಹ ಜ್ಯೋತಿ ಯೋಜನೆಯಡಿ ಯೋಜನೆ ಆರಂಭದಿಂದ ಏಪ್ರಿಲ್ 2025 ರವರೆಗೆ 273251 ಸ್ಥಾವರಗಳು ನೋಂದಣಿಯಾಗಿದ್ದು ಶೇ 98.68 ಪ್ರಗತಿಯಾಗಿದೆ.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಉಪಾಧ್ಯಕ್ಷೆ ಶ್ರೀಮತಿ ನೀಲಮ್ಮ ಬೋಳನವರ, ಉಪಾಧ್ಯಕ್ಷರುಗಳಾದ ಪಿ.ಬಿ.ಅಗಳವಾಡಿ, ದೀಪಕ ಲಮಾಣಿ, ಫಕ್ರುಸಾಬ ಚಿಕ್ಕಮಣ್ಣೂರ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರಾದ ಅಶೋಕ ಮಂದಾಲಿ, ಸೇ-ರಿದಂತೆ ಸಮಿತಿಯ ಸದಸ್ಯರುಗಳು, ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

